RNI .KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 105 ಪುಟ: 06 ಶುಕ್ರವಾರ 21–03–2025

₹ 3 Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

Honourary Editor: Venkatesh

ಸುದ್ದಿ, ಜಾಹೀರಾತು ಹಾಗೂ ಪತ್ರಿಕೆಗೆ ಚಂದಾದಾರರಾಗಲು ಸಂಪರ್ಕಿಸಿ: 9448074878



'ನಾನಿರೋ ಕಡೆ ಎಲ್ಲರನ್ನೂ ಕರೆಸಿಕೊಳ್ತೀನಿ'

ಬೌಲರ್‌ಗಳ ಬಹು ವರ್ಷಗಳ ಬೇಡಿಕೆ ಈಡೇರಿಸಿದ ಬಿಸಿಸಿಐ

ಚಾಹಲ್– ಧನಶ್ರೀ ವೈವಾಹಿಕ ಜೀವನ ಅಂತ್ಯ ಪುಟ 6

# ಸದನದಲ್ಲಿ ಹನಿಟ್ರ್ಯಾಪ್ ಗದ್ದಲ

## ನ್ಯಾಯಾಂಗ ತನಿಖೆಗೆ ಪ್ರತಿಪಕ್ಷಗಳ ಪಟ್ಟು; ಬಜೆಟ್ ಪ್ರತಿ ಹರಿದು ಪ್ರತಿಭಟನೆ

ಬೆಂಗಳೂರು: ಹನಿಟ್ರ್ಯಾಪ್ ಪ್ರಕರಣವನ್ನು ಸಿಬಿಐ ಅಥವಾ ಹಾಲಿ ಹೈಕೋರ್ಟ್ ನ್ಯಾಯಾಧೀಶರಿಂದ ತನಿಖೆ ನಡೆಸಬೇಕೆಂದು ಆಗ್ರಹಿಸಿ ಪ್ರತಿಪಕ್ಷ ನಾಯಕರು ಶುಕ್ರವಾರ ಸದನದ ಬಾವಿಗಿಳಿದು, ಬಜೆಟ್ ಹಾಗೂ ಮಸೂದೆಗಳ ಪ್ರತಿಗಳನ್ನು ಹರಿದು ಪ್ರತಿಭಟನೆ ನಡೆಸಿದರು.

ವಿಧಾನಸಭೆ ಕಲಾಪ ಬೆಳಗ್ಗೆ ಆರಂಭವಾಗುತ್ತಿದಂತೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಮತ್ತು ವಿ. ಸುನಿಲ್ ಕುಮಾರ್, ಅರಗ ಜ್ಞಾನೇಂದ್ರ ಮತ್ತಿತರ ಶಾಸಕರು ಪ್ರಕರಣವನ್ನು ಕೂಡಲೇ ತನಿಖೆಗೆ ವಹಿಸಬೇಕು. ಇದರ ಹಿಂದೆ ಯಾರಿದ್ದಾರೆ ಎಂಬುದನ್ನು ಬಹಿರಂಗಪಡಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು


ಸರ್ಕಾರದ ಸಚಿವರೇ ತಮ್ಮ ಮೇಲೆ ಹನಿಟ್ರ್ಯಾಪ್ ಪ್ರಯತ್ನ ನಡೆದಿದೆ ಎಂದಿದ್ದಾರೆ.



ಅಲ್ಲದೇ ರಾಜ್ಯ, ಕೇಂದ್ರ ನಾಯಕರುಗಳು ಮತ್ತು ನ್ಯಾಯಾಧೀಶರುಗಳ ಮೇಲೂ ಕೂಡ ಹನಿಟ್ರ್ಯಾಪ್ ನಡೆದಿದ್ದು,ಇದಕ್ಕೆ ಸಂಬಂಧಿಸಿದಂತೆ 48 ಸಿಡಿಗಳು ಇವೆ ಎಂಬ ಬಗ್ಗೆ ಮಾಹಿತಿ ಇರುವುದಾಗಿ ಸದನಕ್ಕೆ ತಿಳಿಸಿದ್ದಾರೆ.

ಸ್ವತಃ ಆಡಳಿತಾರೂಢ ಪಕ್ಷದ ಸದಸ್ಯರೇ ಇಂತಹ ಗಂಭೀರ ಆರೋಪ ಮಾಡಿದರೂ ಕೂಡ ಸರ್ಕಾರ ಸುಮ್ಮನೇ ಕುಳಿತಿದೆ. ಗುರುವಾರ ಸದನದಲ್ಲಿ ವಿಷಯ ಪ್ರಸ್ತಾಪಗೊಂಡಾಗ ಗೃಹ ಸಚಿವರು ಉತ್ತರಿಸಿ ಪ್ರಕರಣದ ಬಗ್ಗೆ ಸೂಕ್ತ ತನಿಖೆ ನಡೆಸುವುದಾಗಿ ಹೇಳಿದ್ದರು. ಹೇಳಿಕೆ ನೀಡಿ 24 ಗಂಟೆಗಳೇ ಕಳೆದರೂ ಇನ್ನೂ ಈ ವಿಷಯವಾಗಿ ಯಾವುದೇ ನಿರ್ಧಾರ ಕೈಗೊಂಡಿಲ್ಲ ಎಂದು ಸರ್ಕಾರದ ವಿರುದ್ಧ ಮುಗಿಬಿದ್ದರು.ಪ್ರಕರಣವನ್ನು ಸರ್ಕಾರ ಈ ಕೂಡಲೇ ನ್ಯಾಯಾಂಗ ತನಿಖೆಗೆ ಪುಟ 2

## ಸುಸೂತ್ರವಾಗಿ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆ



**ಬೆಂಗಳೂರು:** ರಾಜ್ಯಾದ್ಯಂತ ಶುಕ್ರವಾರ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಸುಸೂತ್ರವಾಗಿ ನಡೆದಿದೆ. ವಿದ್ಯಾರ್ಥಿಗಳ ಮಹತ್ವದ ಘಟ್ಟವಾದ ಎಸ್‌ಎಸ್‌ಎಲ್‌ಸಿ ನಂತರ ವೃತ್ತಿಪರ ಕಲಿಕೆಗೆ ಹೆದ್ದಾರಿಯಾಗಿದೆ. ರಾಜ್ಯದ ಪರೀಕ್ಷಾ ಕೇಂದ್ರದ ಮುಂದೆ ಬೆಳಗ್ಗೆ 8 ಗಂಟೆಯಿಂದಲೇ ಜಮಾಯಿಸಿದ ವಿದ್ಯಾರ್ಥಿಗಳು ಸಹಪಾಠಿಗಳೊಂದಿಗೆ ಅಂತಿಮ ಮನನದಲ್ಲಿ ತೊಡಗಿದರು.

ಮೊದಲ ಬಾರಿಗೆ ಸಾರ್ವತ್ರಿಕ ಪರೀಕ್ಷೆಯನ್ನು ಬರೆಯುತ್ತಿರುವ ಹಿನ್ನೆಲೆಯಲ್ಲಿ ಮೊದಲ ದಿನ ಸ್ವಲ್ಪ ಮಟ್ಟಿನ ಆತಂಕ ಇದ್ದರೂ ಕೂಡ ಪರೀಕ್ಷಾ ಕೇಂದ್ರದ ಬಳಿ ಗುಲಾಬಿ ಹೂಗಳನ್ನು ನೀಡಿ ಸಿಹಿ ಹಂಚಿ ಅವರಲ್ಲಿ ಉತ್ಸಾಹ ಮೂಡಿಸಲಾಯಿತು. ಪುಟ 2



**ಕೊಡಗು ಜಿಲ್ಲೆಯ ಭಾಗಮಂಡಲದ ಶ್ರೀ ಭಗಂಡೇಶ್ವರ ದೇಗುಲ ಹಾಗೂ ಕಾವೇರಿ, ಸುಜ್ಯೋತಿ, ಕನ್ನಿಕಾ ನದಿಗಳ ತ್ರಿವೇಣಿ ಸಂಗಮದಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಶುಕ್ರವಾರ ಪೂಜೆ ಸಲ್ಲಿಸಿ ಪವಿತ್ರ ತೀರ್ಥ ಸಂಗ್ರಹಿಸಿದರು. ಬೆಂಗಳೂರಿನಲ್ಲಿ ಇಂದು ಸಂಜೆ ನಡೆಯಲಿರುವ 'ಕಾವೇರಿ ಆರತಿ'ಯ ಪುಣ್ಯ ಕಾರ್ಯಕ್ರಮದ ವೇಳೆ ಸಾರ್ವಜನಿಕರಿಗೆ ಈ ತೀರ್ಥ ವಿತರಿಸಲಾಗುವುದು. ಶಾಸಕರಾದ ಪೊನ್ನಣ್ಣ, ಮಂಥರ್ ಗೌಡ, ಬಿಡಬ್ಲ್ಯೂಎಸ್‌ಎಸ್ ಬಿ ಅಧ್ಯಕ್ಷ ರಾಮ್ ಪ್ರಸಾತ್ ಮನೋಹರ್ ಮತ್ತಿತರರು ಉಪಸ್ಥಿತರಿದ್ದರು.**


## ಸಿಎಂ ಕುರ್ಚಿಗಾಗಿ ಹನಿಟ್ರ್ಯಾಪ್: ಅಶೋಕ್

**ಬೆಂಗಳೂರು:** ಸಿಎಂ ಕುರ್ಚಿಗಾಗಿ ಹನಿಟ್ರ್ಯಾಪ್ ಯತ್ನ ನಡೆದಿದೆ ಎಂದು ವಿಪಕ್ಷ ನಾಯಕ ಆರ್ ಅಶೋಕ್ ಗಂಭೀರ ಆರೋಪ ಮಾಡಿದ್ದಾರೆ. ವಿಧಾನಸಭಾ ಕಲಾಪ ಮುಂದೂಡಿದ ಬಳಿಕ ಹೊರಗಡೆ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ರಾಜಣ್ಣ ಸಾಮಾನ್ಯ ವ್ಯಕ್ತಿಯಲ್ಲ. ಅವರು ಸರ್ಕಾರದ ಮಂತ್ರಿಯಾಗಿದ್ದಾರೆ. ಅವರೇ ಸದನದಲ್ಲಿ ಆರೋಪ ಮಾಡಿದ್ದಾರೆ. ಈ ಸರ್ಕಾರದಲ್ಲಿ ದಲಿತ ಮಂತ್ರಿಗಳಿಗೆ ರಕ್ಷಣೆ ಇಲ್ಲ ಎಂದು ಕಿಡಿಕಾರಿದರು. ರಾಜಣ್ಣ ಅವರೇ ಸದನದಲ್ಲಿ 48 ಜನರ ಮೇಲೆ ಹನಿಟ್ರ್ಯಾಪ್ ಆಗಿದೆ ಅಂದಿದ್ದಾರೆ. ಈ ಆರೋಪಕ್ಕೆ ಸಿಎಂ ಸರಿಯಾಗಿ ಉತ್ತರ ನೀಡಿಲ್ಲ. ಇದು ಗಂಭೀರ ಪ್ರಕರಣ, ಎಲ್ಲ ಶಾಸಕರ, ಸದನದ, ರಾಜ್ಯದ ಗೌರವದ ಪುಟ 2



## ಹನಿಟ್ರ್ಯಾಪ್ ಪ್ರಕರಣ; ನೈತಿಕ ಹೊಣೆ ಹೊತ್ತು ಸಿಎಂ ರಾಜೀನಾಮೆ ನೀಡಲಿ

ನವ ದೆಹಲಿ: ಹನಿಟ್ರ್ಯಾಪ್ ಪ್ರಕರಣ ಇಡೀ ದೇಶದಲ್ಲಿ ಕರ್ನಾಟಕದ ಮರ್ಯಾದೆಯನ್ನು ಹಾಳು ಮಾಡಿದೆ. ರಾಜ್ಯದಲ್ಲಿ ನೈತಿಕತೆ ಕಳೆದುಕೊಂಡಿರುವ ಕ್ರಿಮಿನಲ್ ಕ್ಯಾಬಿನೆಟ್ ರಾಜ್ಯದಲ್ಲಿದೆ. ಈ ಪ್ರಕರಣ ಮುಖ್ಯಮಂತ್ರಿಗಳ ಮೂಗಿನ ನೇರಕ್ಕೆ ನಡೆದಿರುವುದರಿಂದ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.



ಈ ಕುರಿತು ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಅಧಿಕಾರದ ಲಾಲಸೆಯಿಂದ ಕಾಂಗ್ರೆಸ್ ಪಕ್ಷ ಆಡಳಿತವನ್ನು ನೈತಿಕ ಅಧಪತನಕ್ಕೆ ತೆಗೆದು ಕೊಂಡು ಹೋಗಿದೆ. ಈ ಸರ್ಕಾರದ ಅವಧಿಯಲ್ಲಿ ಎರಡು ವರ್ಷದಲ್ಲಿ ಸುಮಾರು ಹತ್ತು ಹಗರಣಗಳು ಹೊರಗೆ ಬಂದಿವೆ. ಎಲ್ಲಿ ಕೈ ಹಾಕಿದರೂ ಅಲ್ಲಿ ಹಗರಣ ಸಿಗುತ್ತವೆ. ಹೀಗಾಗಿ ವಿಧಾನಸಭೆಯಲ್ಲಿ ನೈತಿಕ ಅಧಪತನ ನೋಡುತ್ತಿದ್ದೇವೆ.

ಇದುವರೆಗೂ ರಾಜ್ಯದಲ್ಲಿ ಮನಿ ಕ್ರೈಸಿಸ್ ಇತ್ತು ಈಗ ಹನಿ ಕ್ರೈಸಿಸ್ ಶುರುವಾಗಿದೆ. ರಾಜ್ಯ ಸರ್ಕಾರ ಆರ್ಥಿಕವಾಗಿಯೂ ದಿವಾಳಿಯಾಗಿದೆ. ನೈತಿಕವಾಗಿಯೂ ದಿವಾಳಿಯಾಗಿದೆ. ಒಬ್ಬ ಸಂಪುಟ ಸಚಿವರು ವಿಧಾನಸಭೆಯಲ್ಲಿ ತಮ್ಮ ಮೇಲೆ ಹನಿ ಟ್ರ್ಯಾಪ್ ಮಾಡುವ ಪ್ರಯತ್ನ ನಡೆದಿತ್ತು ಎಂದು ಹೇಳುವ ಸ್ಥಿತಿಗೆ ಬಂದಿದ್ದಾರೆ. ಕಳೆದ ಹದಿನೈದು ದಿನಗಳಿಂದ ವಿಧಾನಸಭೆಯ ಮೊಗ ಸಾಲೆಯಲ್ಲಿ ಈ ಬಗ್ಗೆ ಚರ್ಚೆ ನಡೆಯುತ್ತಿದ್ದರೂ ಪುಟ 2

## ವಿಚ್ಛೇದನಕ್ಕೆ ಬ್ಲೂ ಫಿಲಂ ವೀಕ್ಷಣೆ ಆಧಾರವಲ್ಲ

**ಬೆಂಗಳೂರು:** ಪತ್ನಿ " ಬ್ಲೂ ಫಿಲ್ಂ" ವೀಕ್ಷಣೆ ಹಾಗೂ " ಹಸ್ತಮೈಥುನ " ಮಾಡಿಕೊಳ್ಳುತ್ತಿದ್ದಾಳೆ ಎಂದ ಮಾತ್ರಕ್ಕೆ ವಿಚ್ಛೇದನ ನೀಡಲು ಆಧಾರವಾಗುವುದಿಲ್ಲ ಎಂದು ಮದ್ರಾಸ್ ಹೈಕೋರ್ಟ್ ತೀರ್ಪು ನೀಡಿದೆ. ಮದುವೆಯಾದ ತಕ್ಷಣ ಮಹಿಳೆಯರು ತಮ್ಮ ಲೈಂಗಿಕ ಸ್ವಾಯತ್ತೆಯನ್ನು ಬಿಟ್ಟುಕೊಟ್ಟಿದ್ದಾರೆಂದು ಅರ್ಥವಲ್ಲ, ಅವರಿಗೆ ಹಸ್ತಮೈಥುನ ಮಾಡಿಕೊಳ್ಳುವ ಹಕ್ಕು ಇದೆ ಎಂದು ಪುಟ 2

## ಸ್ಫೋಟಕ ಸಂಗ್ರಹಿಸಿದ್ದ ಗೋದಾಮು ಸ್ಫೋಟ

**ಪಣಜಿ:** ದಕ್ಷಿಣ ಗೋವಾದ ಖಾಸಗಿ ಸಣ್ಣ ಕ್ಯಾಲಿಬರ್ ಮದ್ದುಗುಂಡು ಕಾರ್ಖಾನೆಗಾಗಿ ಸ್ಫೋಟಕಗಳನ್ನು ಸಂಗ್ರಹಿಸಿದ್ದ ಗೋದಾಮಿನಲ್ಲಿ ಭಾರಿ ಸ್ಫೋಟ ಸಂಭವಿಸಿದೆ, ಅದರೆ, ಘಟನೆಯಲ್ಲಿ ಅದೃಷ್ಟವಶಾತ್ ಯಾವುದೇ ಸಾವು ನೋವು ಸಂಭವಿಸಿಲ್ಲ.ತಡರಾತ್ರಿ ಸುಮಾರಿಗೆ ನಕ್ಸೆರಿ–ಬೆತುಲ್ ಪ್ರದೇಶದ ಸೌಲಭ್ಯದಲ್ಲಿ ಸಂಭವಿಸಿದ ಸ್ಫೋಟದಲ್ಲಿ ಯಾರೂ ಗಾಯ ಪುಟ 2

## ಎಸ್‌ಎಸ್‌ಎಲ್‌ಸಿ ಪರೀಕ್ಷೆ; ಸಿಸಿಟಿವಿ ಕ್ಯಾಮೆರಾ ನಾಶ

**ದೊಡ್ಡಬಳ್ಳಾಪುರ:** ದೊಡ್ಡಬಳ್ಳಾಪುರ ತಾಲೂಕಿನ ತೂಬಗೆರೆಯ ಸರ್ಕಾರಿ ಪ್ರೌಢಶಾಲೆಯನ್ನು ಖಖಖಲಿ ಪರೀಕ್ಷಾ ಕೇಂದ್ರವನ್ನಾಗಿ ಗುರುತಿಸಿ ಸಕಲ ಸಿದ್ಧತೆ ನಡೆಸಲಾಗಿತ್ತು. ಇಂದು ನಿಗದಿಯಂತೆ ಪರೀಕ್ಷೆ ಸುಸೂತ್ರವಾಗಿ ನಡೆಸಲು ತಯಾರಿ ಮಾಡಲಾಗಿತ್ತು. ಪರೀಕ್ಷಾ ಕೇಂದ್ರದ ಪ್ರತಿ ಕೊಠಡಿಗೂ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿತ್ತು. ಆದರೆ ಕಳೆದ ಪುಟ 2

## ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ: ಸಿಎಂ

**ಬೆಂಗಳೂರು:** ಹನಿ ಟ್ರ್ಯಾಪ್ ಗೆ ಸಂಬಂಧಿಸಿದಂತೆ ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು .

ಪ್ರಕರಣದಲ್ಲಿ ಯಾರೇ ಆಗಿದ್ದರೂ ರಕ್ಷಣೆ ಕೊಡಬೇಕಾಗಿರುವುದು ಸರ್ಕಾರದ ಜವಾಬ್ದಾರಿ. ಕಾನೂನಿನ ಪ್ರಕಾರ ತಪ್ಪಿತಸ್ಥರಿಗೆ ಶಿಕ್ಷೆಯಾಗಲೇಬೇಕು. ರಾಜಣ್ಣ ಅವರು ದೂರು ಕೊಟ್ಟರೆ ಉನ್ನತ ಮಟ್ಟದ ತನಿಖೆ ಮಾಡಿಸಲಾಗುತ್ತದೆ ಎಂದು ಗೃಹ ಸಚಿವರು ಉತ್ತರಿಸಿದ ಮೇಲೆ ಪುನಃ ಪ್ರಸ್ತಾಪಿಸುವುದು ತರವಲ್ಲ. ಹನಿ ಟ್ರ್ಯಾಪ್ ಯಾರೇ ಮಾಡಿಸಿದ್ದರೂ ಅದು ತಪ್ಪೇ ಎಂದರು.

ಎತ್ತು ಈಯಿತು ಎಂದ ಮಾತ್ರಕ್ಕೆ ಕೊಟ್ಟಿಗೆಗೆ ಕಟ್ಟು ಎಂದು ಹೇಳಲಾಗುವುದಿಲ್ಲ. ರಾಜಣ್ಣ ಅವರು ಯಾರ ಹೆಸರನ್ನೂ ಹೇಳಿಲ್ಲ. ಹೇಳಿದ್ದರೆ ಕ್ರಮ ತೆಗೆದುಕೊಳ್ಳಬಹುದಾಗಿತ್ತು. ಪ್ರಕರಣದಲ್ಲಿ ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ ಎಂದು ಮುಖ್ಯಮಂತ್ರಿಗಳು ಪುನರುಚ್ಚರಿಸಿದರು.

ವಿರೋಧ ಪಕ್ಷದವರು ರಾಜ್ಯದ ಹಣಕಾಸಿನ ಸ್ಥಿತಿಯ ಬಗ್ಗೆ



ಮಾತನಾಡುವಾಗ ಎರಡು ವಿಚಾರಗಳನ್ನು ಪ್ರಸ್ತಾಪಿಸಿದ್ದಾರೆ. ಒಂದು, ತೆರಿಗೆ ಸಂಗ್ರಹಣೆ ಸಮರ್ಪಕವಾಗಿಲ್ಲ ಎಂದಾದರೆ ಇನ್ನೊಂದು ಪರೋಕ್ಷವಾಗಿ ಗ್ಯಾರಂಟಿ ಯೋಜನೆಗಳಿಂದಲೇ ರಾಜ್ಯದ ಹಣಕಾಸಿನ ಪರಿಸ್ಥಿತಿ ಕ್ಲಿಷ್ಟಕರವಾಗಿದೆ ಎಂದು ವ್ಯಾಖ್ಯಾನಿಸಲು ನಿರಂತರವಾಗಿ ಪ್ರಯತ್ನಿಸುತ್ತಿದ್ದಾರೆ. ಆದರೆ ವಾಸ್ತವ ಸಂಗತಿಗಳು ಬೇರೆಯದೆ ಆಗಿವೆ.

2018–19ರಲ್ಲಿ ಕೇಂದ್ರದ ಬಜೆಟ್ ಗಾತ್ರ 24.42 ಲಕ್ಷ ಕೋಟಿ ರೂ.ಇದ್ದಾಗ ರಾಜ್ಯಕ್ಕೆ ತೆರಿಗೆ ಪಾಲು ಮತ್ತು ಕೇಂದ್ರ ಪುರಸ್ಕೃತ ಯೋಜನೆಗಳಿಂದ 46,288 ಕೋಟಿ ರೂ. ಬಂದಿತ್ತು. ಈಗ ಕೇಂದ್ರದ ಬಜೆಟ್ ಗಾತ್ರ 50.65 ಲಕ್ಷ ಕೋಟಿ ಮೀರಿದೆ. 2018–19 ಕ್ಕೆ ಹೋಲಿಸಿದರೆ ಶೇ.100 ರಷ್ಟು ಹೆಚ್ಚಾಗಿದೆ. ಆ ಲೆಕ್ಕಕ್ಕೆ ಹೋಲಿಸಿದರೆ 2025–26ನೆ ಸಾಲಿಗೆ ನಮಗೆ ಕನಿಷ್ಠ 1 ಲಕ್ಷ ಕೋಟಿ ರೂ.ಗಳಷ್ಟು ತೆರಿಗೆ ಪಾಲು ಮತ್ತು ಕೇಂದ್ರ ಪುರಸ್ಕೃತ ಯೋಜನೆಗಳಿಂದ ಅನುದಾನ ಬರಬೇಕಾಗಿತ್ತು. ಆ ಅನುದಾನ ನಿರೀಕ್ಷಿತ ಪ್ರಮಾಣದಲ್ಲಿ ಬರಲಿಲ್ಲ. ಒಂದು ನಮಗೆ ಸಮರ್ಪಕವಾಗಿ ತೆರಿಗೆ ಪಾಲೂ ಸಿಗುತ್ತಿಲ್ಲ. ಯೋಜನೆಗಳನ್ನೂ ತೆಗೆದುಕೊಳ್ಳುತ್ತಿಲ್ಲ.

## ಅಮೆರಿಕದ ಶಿಕ್ಷಣ ಇಲಾಖೆಯೇ ಬಂದ್



ವಾಷಿಂಗ್ಟನ್: ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಸರ್ಕಾರದ ಶಿಕ್ಷಣ ಇಲಾಖೆಯನ್ನು ಬಂದ್ ಮಾಡಿದ್ದಾರೆ.


ಅಮೆರಿಕ ಚುನಾವಣೆಯ ಸಮಯದಲ್ಲಿ ಟ್ರಂಪ್ ಅವರು ಶಿಕ್ಷಣ ಇಲಾಖೆಯನ್ನು ಮುಚ್ಚುವುದಾಗಿ ಭರವಸೆ ನೀಡಿದ್ದರು. ಈ ಭರವಸೆಯಂತೆ ಈಗ ಅವರು ಶಿಕ್ಷಣ ಇಲಾಖೆಯನ್ನು ಮುಚ್ಚುವ ಕಾರ್ಯಕಾರಿ ಆದೇಶಕ್ಕೆ ಸಹಿ ಹಾಕಿದರು. ಟ್ರಂಪ್ ಅವರು ಪುಟಾಣಿ ಮಕ್ಕಳನ್ನು ಕುಳ್ಳಿರಿಸಿ ಈ ಮಹತ್ವದ ನಿರ್ಧಾರವನ್ನು ಕೈಗೊಂಡಿದ್ದಾರೆ. ಶಿಕ್ಷಣ ಇಲಾಖೆ ಬಂದ್ ಮಾಡಿ ಶಾಲಾ ನೀತಿಯನ್ನು ಸಂಪೂರ್ಣವಾಗಿ ಪುಟ 2

## ಲಂಡನ್‌ನಲ್ಲಿ ಭಾರಿ ಬೆಂಕಿ ಅವಘಡ: ಹೀಥ್ರೋ ಏರ್‌ಪೋರ್ಟ್ ಬಂದ್

**ಲಂಡನ್(ಯು.ಕೆ):** ಲಂಡನ್‌ನ ಹೀಥ್ರೋ ವಿಮಾನ ನಿಲ್ದಾಣದಲ್ಲಿ ಭಾರಿ ಪ್ರಮಾಣದ ಬೆಂಕಿ ಅವಘಡ ಸಂಭವಿಸಿದೆ. ನಗರದ ಪಶ್ಚಿಮ ಭಾಗದಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಿದ್ದು, 16,000 ಮನೆಗಳೂ ಸೇರಿದಂತೆ ವಿಮಾನ ನಿಲ್ದಾಣದಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಮುನ್ನೆಚ್ಚರಿಕಾ ಕ್ರಮವಾಗಿ 150 ಜನರನ್ನು ಸ್ಥಳಾಂತರಿಸಲಾಗಿದೆ.

ಶುಕ್ರವಾರ ಬೆಳಗ್ಗೆ (ಭಾರತೀಯ ಕಾಲಮಾನ) ವಿಮಾನ ನಿಲ್ದಾಣದಲ್ಲಿ ವಿದ್ಯುತ್ ಅವಘಡದಿಂದಾಗಿ ಬೆಂಕಿ ಕಾಣಿಸಿಕೊಂಡಿದೆ. ನಂತರ ಯಾರೂ ಕೂಡ ಇಲ್ಲಿಂದ ಪ್ರಯಾಣಿಸದಂತೆ ಸಲಹೆ ನೀಡಲಾಯಿತು.

ಪ್ರಯಾಣಿಕರು ಮತ್ತು ಸಹೋದ್ಯೋಗಿಗಳ ಸುರಕ್ಷತೆ ನಿರ್ವಹಣೆ ಉದ್ದೇಶದಿಂದ ವಿಮಾನ ನಿಲ್ದಾಣವನ್ನು ಮಾರ್ಚ್ 21ರಂದು ರಾತ್ರಿ



ಗಂಟೆ 11.59ಯವರೆಗೆ ಮುಚ್ಚಲಾಗುವುದು ಎಂದು ಏರ್‌ಪೋರ್ಟ್ ಅಧಿಕಾರಿಗಳು ತಿಳಿಸಿದ್ದಾರೆ.

ವಿಮಾನ ನಿಲ್ದಾಣದ ವಕ್ತಾರರು ಮಾಧ್ಯಮಕ್ಕೆ ಪ್ರತಿಕ್ರಿಯಿಸಿ, "ಅಗ್ನಿಶಾಮಕದಳದ ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದು, ಯಾವಾಗ ವಿದ್ಯುತ್ ಸಂಪರ್ಕ ಮರುಸ್ಥಾಪನೆಯಾಗಲಿದೆ ಎಂದು ತಿಳಿದಿಲ್ಲ. ಪುಟ 2

## ಹನಿಟ್ರ್ಯಾಪ್: ನ್ಯಾಯಮೂರ್ತಿ ಅಥವಾ ಸಿಬಿಐ ತನಿಖೆಗೆ ಆಗ್ರಹ

**ಬೆಂಗಳೂರು:** ಹನಿಟ್ರ್ಯಾಪ್ ಕುರಿತಂತೆ ಹೈಕೋರ್ಟಿನ ಈಗಿನ ನ್ಯಾಯಮೂರ್ತಿಗಳು ಅಥವಾ ಸಿಬಿಐ ತನಿಖೆ ನಡೆಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಅವರು ಆಗ್ರಹಿಸಿದ್ದಾರೆ.



ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಸಚಿವರಾದ ರಾಜಣ್ಣ ಅವರು ರಾಜ್ಯ ಹಾಗೂ ದೇಶದ 48ಕ್ಕೂ ಹೆಚ್ಚು ಪ್ರಮುಖರು ಹನಿಟ್ರ್ಯಾಪ್‌ಗೆ ಒಳಗಾದ ಕುರಿತು ತಿಳಿಸಿ ತನಿಖೆ ಆಗಬೇಕೆಂದು ಹೇಳಿಕೆ ಕೊಟ್ಟಿದ್ದಾರೆ. ಇದು ಬಹಳ ಗಂಭೀರ ವಿಚಾರ ಎಂದು ತಿಳಿಸಿದ ಗೃಹ ಸಚಿವರು, ಇದರ ಬಗ್ಗೆ ತನಿಖೆ ಮಾಡಿಸುವುದಾಗಿ ಹೇಳಿದ್ದರು. ಪುಟ 2

## ಹನಿಟ್ರ್ಯಾಪ್: ಶೀಘ್ರ ತನಿಖೆಯಾಗಲಿ



**ಭಾಗಮಂಡಲ:** "ಹಿಟ್ ಅಂಡ್ ರನ್ ರೀತಿ ಹನಿಟ್ರ್ಯಾಪ್ ಪ್ರಕರಣವೂ ಆಗಿದೆ. ನಾನು ಈ ಬಗ್ಗೆ ಗುರುವಾರದಂದೇ ಪೊಲೀಸರಿಗೆ ದೂರು ನೀಡಲಿ ಎಂದು ಸಲಹೆ ನೀಡಿದ್ದೆ. ಇದರ ಬಗ್ಗೆ ಕ್ರಮ ತೆಗೆದುಕೊಳ್ಳಲು ತಡ ಮಾಡಬಾರದು. ಇದರ ಬಗ್ಗೆ ಶೀಘ್ರ ತನಿಖೆಯಾಗಬೇಕು ಎಂದು ನಾನೂ ಒತ್ತಾಯ ಮಾಡುತ್ತಿದ್ದೇನೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಬೆಂಗಳೂರಿನ ಸದಾಶಿವನಗರದ ನಿವಾಸ ಹಾಗೂ ಭಾಗಮಂಡಲದ ಹೆಲಿಪ್ಯಾಡ್ ಬಳಿ ಮಾಧ್ಯಮದವರ ಪ್ರಶ್ನೆಗಳಿಗೆ ಶುಕ್ರವಾರ ಪ್ರತಿಕ್ರಿಯೆ ನೀಡಿದರು.

48 ಶಾಸಕರು ಹನಿಟ್ರ್ಯಾಪ್ ಗೆ ಒಳಗಾಗಿದ್ದಾರೆ, ಸರ್ಕಾರದ ಸಚಿವರಿಗೆ ರಕ್ಷಣೆ ಇಲ್ಲವೇ ಎಂದು ಕೇಳಿದಾಗ, "ಯಾರು ಹೇಳಿದ್ದು ರಕ್ಷಣೆಯಿಲ್ಲವೆಂದು? ಸುಮ್ಮನೆ ಹನಿಟ್ರ್ಯಾಪ್ ಮಾಡುವವರು ನಿಮ್ಮ ಬಳಿ ಬರುತ್ತಾರೆಯೇ? ನೀವು ಹಲೋ ಎಂದರೆ ಅವರು ಹಲೋ ಎನ್ನುತ್ತಾರೆ. ನೀವು ಪ್ರತಿಕ್ರಿಯೆ ನೀಡಲಿಲ್ಲ ಎಂದರೆ ಯಾರಾದರೂ ಮಾತನಾಡಿಸುತ್ತಾರಾ? ಮಾಧ್ಯ ಮದವರು ಮಾತಾನಾಡಿಸಿದರೆ ನಾನು ಮಾತನಾಡಿಸುತ್ತೇನೆ" ಎಂದು ಕಾಲೆಳೆದರು.

**ಮಾಡಿದ್ದುಣ್ಣೋ ಮಹಾರಾಯ:** ಹನಿಟ್ರ್ಯಾಪ್ ಹಿಂದೆ ಡಿ.ಕೆ.ಶಿವಕುಮಾರ್ ತಂಡವಿದೆ ಎನ್ನುವ ಶಾಸಕ ಮುನಿರತ್ನ ಆರೋಪದ ಬಗ್ಗೆ ಕೇಳಿದಾಗ, "ವಿಧಾನಸೌಧದಲ್ಲಿ ಅವರು ಏನೆಲ್ಲಾ ಮಾಡಿದ್ದರು ಎನ್ನುವುದು ಪೊಲೀಸ್ ದೂರಿನಲ್ಲಿ ಇದೆಯಲ್ಲವೇ? ಆರ್. ಅಶೋಕ್ ಗೆ, ಯಡಿಯೂರಪ್ಪ ಅವರಿಗೆ ಏನೋ ಆಯಿತು ಎಂದು ಬಿಜೆಪಿಯವರೇ ಮಾತನಾಡುತ್ತಿದ್ದರಲ್ಲವೇ? ಪುಟ 2

# ಕಾವೇರಿ ನದಿ ಮಲೀನತೆ, ನದಿ ಪಾತ್ರ ಒತ್ತುವರಿ ತಡೆಯಲು ತಂಡ ರಚನೆ

**ಕೊಡಗು:** "ಕಾವೇರಿ ನದಿ ಮಲೀನತೆ ಹಾಗೂ ನದಿ ಪಾತ್ರಗಳ ಒತ್ತುವರಿ ತಡೆಯಲು ತಂಡ ರಚನೆಗೆ ಕ್ರಮವಹಿಸಲಾಗುವುದು" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಕೊಡಗಿನ ಭಾಗಮಂಡಲ ಹೆಲಿಪ್ಯಾಡ್ ನಲ್ಲಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಶುಕ್ರವಾರ ಪ್ರತಿಕ್ರಿಯೆ ನೀಡಿದ ಅವರು, "ಈ ನೆಲ,ಜಲ, ಇತಿಹಾಸ, ಪರಂಪರೆ ಉಳಿಸಲು ಏನು ಬೇಕೋ ಅದೆಲ್ಲವನ್ನು ನಾವು ಮಾಡುತ್ತೇವೆ. ನಿಮ್ಮ (ಮಾಧ್ಯಮಗಳ) ಸಲಹೆ ಇದ್ದರೂ ಸ್ವೀಕರಿಸುತ್ತೇವೆ" ಎಂದು ಉತ್ತರಿಸಿದರು.

"ವಿಶ್ವ ಜಲದಿನದ ಅಂಗವಾಗಿ ಒಂದು ಒಂದು ವಾರಗಳ ಕಾಲ ಜಲ ಸಂರಕ್ಷಣೆ ಅಭಿಯಾನ ನಡೆಯಲಿದೆ. ನೀರಿನ ದುರ್ಬಳಕೆ ತಡೆಗಟ್ಟಿ, ಸದ್ಬಳಕೆ ಮಾಡುವಂತೆ ಜಾಗೃತಿ ಮೂಡಿಸುವುದೇ ಕಾವೇರಿ ಆರತಿ ಉದ್ದೇಶ" ಎಂದು ತಿಳಿಸಿದರು.

"ಕಳೆದ ವರ್ಷ ಉತ್ತಮ ಮಳೆಯಾದಂತೆ ಈ ವರ್ಷವೂ ಉತ್ತಮವಾಗಿ ಮಳೆಯಾಗಿ ಜನರ ಬದುಕು ಹಸನಾಗಲಿ ಎಂದು ತಲಕಾವೇರಿಯಲ್ಲಿ ಪೂಜೆ ಸಲ್ಲಿಸುತ್ತಿದ್ದೇನೆ" ಎಂದರು.

ಕಾವೇರಿ ಆರತಿಗೆ ಹಣ ಮೀಸಲು

"ನದಿ ತೀರದಲ್ಲಿ ಕಾವೇರಿ ಆರತಿ ಆಯೋಜಿಸಲು ಈಗಾಗಲೇ ಹಣ ಮೀಸಲಿಡಲಾಗಿದೆ. ಎಷ್ಟು ದಿನಗಳಿಗೆ ಒಮ್ಮೆ ಆರತಿ ಮಾಡಬೇಕು ಎನ್ನುವ ತೀರ್ಮಾನವನ್ನು ಮುಂದೆ ತಿಳಿಸಲಾಗುವುದು. ಆರತಿ ವೇಳೆ ಕೊಡಗಿನ ಕಲಾವಿದರೂ ಭಾಗವಹಿಸುವಂತೆ ನೋಡಿಕೊಳ್ಳಬೇಕು ಎಂದು ಮುಜರಾಯಿ, ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯವರಿಗೆ ಸೂಚನೆ ನೀಡಲಾಗಿದೆ" ಎಂದರು.

"ನೀರನ್ನು ದುರ್ಬಳಕೆ ಮಾಡುವುದಿಲ್ಲ, ಸುಖಾಸುಮ್ಮನೆ ಖರ್ಚು ಮಾಡುವುದಿಲ್ಲ ಎಂದು ಜನರಿಗೆ ಅರಿವು ಮೂಡಿಸಲಾಗುವುದು ಹಾಗೂ ಪ್ರತಿಜ್ಞಾವಿಧಿ ಭೋದಿಸಲಾಗುವುದು. ಇದಕ್ಕೆ ಸ್ಯಾಂಕಿ ಕೆರೆಯಲ್ಲಿ ಕಾವೇರಿ ಆರತಿಯನ್ನು ಆಯೋಜಿಸಲಾಗಿದೆ. ಜನರು ಆನ್ ಲೈನ್ ಮೂಲಕವೂ ನೀರನ್ನು ಉಳಿಸುತ್ತೇನೆ ಎಂದು ಪ್ರತಿಜ್ಞೆ ತೆಗೆದುಕೊಂಡು ಸಾಮಾಜಿಕ ಜಾಲತಾಣಗಳಲ್ಲಿ ಪ್ರಚಾರ ಮಾಡಬಹುದು. ಎಲ್ಲಾ ಸಾರ್ವಜನಿಕರು, ರಾಜಕಾರಣಿಗಳು ಇದರಲ್ಲಿ ಭಾಗವಹಿಸಬೇಕು" ಎಂದು ಕರೆ ನೀಡಿದರು.



"ಈ ಹಿಂದೆ ತಲಕಾವೇರಿಗೆ ಬಂದು ಪೂಜೆ ಸಲ್ಲಿಸಿ ಸಿದ್ದರಾಮಯ್ಯ ಅವರು, ನಾನು ಹಾಗೂ ಪಕ್ಷದ ಅನೇಕ ನಾಯಕರ ನೇತೃತ್ವದಲ್ಲಿ ಮೇಕೆದಾಟು ಪಾದಯಾತ್ರೆ ಮಾಡಲಾಯಿತು. ಬೆಂಗಳೂರಿಗೆ ಕಾವೇರಿ ಕುಡಿಯುವ ನೀರಿನ 5 ನೇ ಹಂತವೂ ಈಗ ಕಾರ್ಯರೂಪಕ್ಕೆ ಬಂದಿದೆ. ಇದೆಲ್ಲವೂ ಸಾಧ್ಯವಾಗಿರುವುದು ಕಾವೇರಿ ನದಿಯಿಂದ. ಕೆಆರ್ ಎಸ್ ಬಾಗಿನ ಸಮರ್ಪಣೆ ವೇಳೆ ಕಾವೇರಿ ಆರತಿ ಮಾಡುವುದಾಗಿ ನಾನು ಮಾತು ಕೊಟ್ಟಿದ್ದೆ ಅದಕ್ಕೂ ಸಿದ್ದತೆಗಳು ನಡೆಯುತ್ತಿದೆ" ಎಂದರು.

"ಆಡಳಿತ ಪಕ್ಷಕ್ಕೆ ಇಬ್ಬರು ಶಾಸಕರನ್ನು ಕೊಟ್ಟಿರುವ ಕೊಡಗಿನ ಮಹಾಜನತೆಗೆ ಸಾಷ್ಟಾಂಗ ನಮಸ್ಕಾರಗಳು. ಕೊಡಗಿನಿಂದ ಹರಿಯುವ ಕಾವೇರಿ ನೀರು ಬೆಂಗಳೂರಿನ ಜನರ ಬದುಕಿನಲ್ಲಿ ಸಂತೋಷ ಉಂಟು ಮಾಡಿದೆ. ಕೊಡಗು ಇಡೀ ರಾಜ್ಯಕ್ಕೆ, ತಮಿಳುನಾಡಿಗೆ ಆಶ್ರಯ. ದಕ್ಷಿಣ ಭಾರತದ ಜೀವನದಿ. ಆದ ಕಾರಣ ಮೊದಲ ಪೂಜೆ ತಲಕಾವೇರಿಯಲ್ಲಿ ಸಲ್ಲಬೇಕು. ಆದ್ದರಿಂದ ಇಲ್ಲಿಂದ ನೀರನ್ನು ತೆಗೆದುಕೊಂಡು ಹೋಗಿ ಕಾವೇರಿ ಆರತಿ ಮಾಡಲಾಗುತ್ತಿದೆ" ಎಂದು ತಿಳಿಸಿದರು.

# ನಾಲ್ಕು ದಿನಗಳ ಆಭರಣ ಪ್ರದರ್ಶನ ಮತ್ತು ವಾಣಿಜ್ಯ ಮೇಳಕ್ಕೆ ಚಾಲನೆ

**ಬೆಂಗಳೂರು:** ಆಭರಣ ರಫ್ತಿಗೆ ಉತ್ತೇಜನ ನೀಡಲು ಸರ್ಕಾರ ಒತ್ತು ನೀಡಲಿದ್ದು, ದೇವನಹಳ್ಳಿ ವಿಮಾನ ನಿಲ್ದಾಣ ಸಮೀಪದಲ್ಲಿ ಜ್ಯುವೆಲ್ಲರಿ ಪಾರ್ಕ್ ನಿರ್ಮಾಣಕ್ಕೆ ಜಾಗ ನೀಡಲು ರಾಜ್ಯ ಸರ್ಕಾರ ಮುಕ್ತವಾಗಿದ್ದು, ಇದನ್ನು ಆಭರಣ ಉದ್ಯಮಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಶುಕ್ರವಾರ ಹೇಳಿದರು.

ಇಲ್ಲಿನ ಬೆಂಗಳೂರು ಅಂತಾರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ನಡೆಯುತ್ತಿರುವ ನಾಲ್ಕು ದಿನಗಳ ಆಭರಣ ಪ್ರದರ್ಶನ ಮತ್ತು ವಾಣಿಜ್ಯ ಮೇಳಕ್ಕೆ ಅವರು ಶುಕ್ರವಾರ ಚಾಲನೆ ನೀಡಿ ಮಾತನಾಡಿದ ಅವರು, ಆಭರಣಗಳ ರಫ್ತಿಗೆ ಇರುವ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಹೂಡಿಕೆ ಮಾಡಲು ಉದ್ಯಮಿಗಳು ಮುಂದಾಗಬೇಕು ಎಂದರು. ಸುಸ್ಥಿರತೆಗೆ ಒತ್ತು ನೀಡುವ ದಿಸೆಯಲ್ಲಿ 'ನೆಟ್ ಜೀರೋ ಜ್ಯುವೆಲ್ಲರಿ ಪಾರ್ಕ್' ನಿರ್ಮಿಸಲು ಹಿತಾಸಕ್ತಿದಾರರು ಗಮನ ವಹಿಸಬೇಕು ಎಂದು ಇದೇ ಸಂದರ್ಭದಲ್ಲಿ ಅಭಿಪ್ರಾಯಪಟ್ಟರು.

ಇದೇ 24ರವರೆಗೆ ನಡೆಯಲಿರುವ ದೇಶದ ಮೂರನೇ ಅತಿದೊಡ್ಡ ಚಿನ್ನಾಭರಣ ಮೇಳವನ್ನು ಮುಂಬರುವ ಅಕ್ಷಯ ತೃತೀಯ ಹಿನ್ನೆಲೆಯಲ್ಲಿ ದಿ ಜೆಮ್ ಅಂಡ್ ಜ್ಯೂವೆಲರಿ ಎಕ್ಸ್ಪೋರ್ಟ್ ಪ್ರಮೋಶನ್ ಕೌನ್ಸಿಲ್ ಏರ್ಪಡಿಸಿದೆ.

ವಿಶ್ವ ದರ್ಜೆಯ ಮೂಲಸೌಕರ್ಯ, ಪುರೋಗಾಮಿ ನೀತಿಗಳು ಮತ್ತು ಕೌಶಲ್ಯಪೂರ್ಣ ಕೆಲಸಗಾರರನ್ನು ಹೊಂದಿರುವ ರಾಜ್ಯವು ಆಭರಣ ತಯಾರಿಕೆ ಮತ್ತು ರಫ್ತು ವಹಿವಾಟಿಗೆ ಪ್ರಶಸ್ತ ತಾಣವಾಗಿದೆ. ಇದಕ್ಕೆ ಪೂರಕವಾಗಿ, ಉಡುಪಿಯಲ್ಲಿ ಇರುವ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಜೆಮ್ ಅಂಡ್ ಜ್ಯೂವೆಲ್ಲರಿ ಸಂಸ್ಥೆಯು ಆಭರಣ ಕುಶಲಕರ್ಮಿಗಳನ್ನು ಸಜ್ಜುಗೊಳಿಸುತ್ತಿದೆ ಎಂದು ಸಚಿವರು ವಿವರಿಸಿದರು.

ದೇಶದಲ್ಲಿ ವಾರ್ಷಿಕ 32 ಬಿಲಿಯನ್ ಡಾಲರ್ ಮೊತ್ತದ ಆಭರಣ ವಹಿವಾಟು ನಡೆಯುತ್ತಿದೆ. ಮುಖ್ಯವಾಗಿ ಇಲ್ಲಿಂದ ಅಮೆರಿಕ, ಅರಬ್ ಸಂಯುಕ್ತ ಸಂಸ್ಥಾನ, ರಷ್ಯಾ, ಸಿಂಗಪುರ್ ಮತ್ತು ಹಾಂಕಾಂಗ್ ಮಾರುಕಟ್ಟೆಗೆ ಹೆಚ್ಚಿನ ಆಭರಣಗಳನ್ನು



ಕಳುಹಿಸಲಾಗುತ್ತಿದೆ. ಉಡುಪಿಯಲ್ಲಿರುವ ಕಾಮನ್ ಫೆಸಿಲಿಟಿ ಸೆಂಟರ್ ಐದು ವರ್ಷಗಳ ಹಿಂದೆ 55 ವಿದ್ಯಾರ್ಥಿಗಳನ್ನು ಹೊಂದಿತ್ತು. ಈಗ ಅಲ್ಲಿ 400ಕ್ಕೂ ಹೆಚ್ಚು ವಿದ್ಯಾರ್ಥಿಗಳಿದ್ದು, ಅವರಿಗೆ ಹೊಸ ಬಗೆಯ ಕೌಶಲ್ಯಗಳನ್ನು ಕಲಿಸಲಾಗುತ್ತಿದೆ. ಅದರಲ್ಲೂ ಮುಖ್ಯವಾಗಿ ಮಹಿಳೆಯರು ಮತ್ತು ಯುವಜನರಿಗೆ ಆದ್ಯತೆ ನೀಡಲಾಗಿದೆ ಎಂದು ಪಾಟೀಲ ಅವರು ತಿಳಿಸಿದರು.

ಪ್ರಸ್ತುತ ಮೇಳದಲ್ಲಿ ಆಭರಣ ವಲಯದ 80 ಪ್ರಮುಖ ಕಂಪನಿಗಳು ಪಾಲ್ಗೊಂಡಿವೆ. ಇವು ಹೊಸ ಬಗೆಯ ಯಂತ್ರೋಪಕರಣಗಳು, ತಂತ್ರಜ್ಞಾನ ಮತ್ತು ಪ್ಯಾಕೇಜಿಂಗ್ ಬಗ್ಗೆ ಗಮನ ಕೇಂದ್ರೀಕರಿಸಿವೆ. ಜತೆಗೆ ಭಾರತದ 15 ಸಾವಿರ ಮತ್ತು ವಿದೇಶಗಳ 300ಕ್ಕೂ ಹೆಚ್ಚು ಆಭರಣ ಖರೀದಿದಾರರು ಭಾಗವಹಿಸುತ್ತಿದ್ದಾರೆ.

ಈಗ ಹೊಸ ಬಗೆಯ ವಿನ್ಯಾಸಗಳ ಆಭರಣಗಳಿಗೆ ಇರುವ ಬೇಡಿಕೆಯನ್ನು ತಿಳಿಸಿದರೆ, ಅಂತಹ ವಿನ್ಯಾಸಗಳನ್ನು ಅಕ್ಷಯ ತೃತೀಯ ವೇಳೆಗೆ ಸಿದ್ಧಪಡಿಸಿ, ವ್ಯಾಪಾರಿಗಳಿಗೆ ಪೂರೈಸಲಾಗುವುದು ಎಂದರು.

ರಾಜ್ಯವು ಉದ್ಯಮಸ್ನೇಹಿ ಮತ್ತು ರಫ್ತುಕೇಂದ್ರಿತ ಹೊಸ ಕೈಗಾರಿಕಾ ನೀತಿಯನ್ನು ಹೊಂದಿದೆ. ವಿದೇಶಿ ಹೂಡಿಕೆಯಲ್ಲಿ ದೇಶದಲ್ಲಿ ಮೊದಲ ಸ್ಥಾನದಲ್ಲಿರುವ ಕರ್ನಾಟಕವು ಜಿ.ಎಸ್.ಟಿ. ಸಂಗ್ರಹದಲ್ಲಿ ಎರಡನೇ ಸ್ಥಾನದಲ್ಲಿದೆ. ಇದಲ್ಲದೆ, ಉದ್ಯಮ ಬೆಳವಣಿಗೆಗೆ ಸಂಬಂಧಿಸಿದ ಇನ್ನೂ ಕೆಲವಾರು ಸೂಚ್ಯಂಕಗಳಲ್ಲಿ ರಾಜ್ಯವು ಮೇಲ್ಪಂಕ್ತಿಯಲ್ಲಿದೆ. 2033ರ ವೇಳೆಗೆ ಬೆಂಗಳೂರು ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಹೊಂದಲಿದ್ದು, ಅದಕ್ಕಾಗಿ ಈಗಾಗಲೇ ಕಾರ್ಯ ಆರಂಭವಾಗಿದೆ. ಹೀಗಾಗಿ, ಆಭರಣ ಉದ್ದಿಮೆದಾರರು ರಾಜ್ಯದಲ್ಲಿ ಹೂಡಿಕೆ ಮಾಡುವತ್ತ ಗಮನ ಹರಿಸಬೇಕು. ಈ ವಲಯದ ಬೆಳವಣಿಗೆಗೆ ಬೇಕಾದ ಎಲ್ಲಾ ಸೌಲಭ್ಯಗಳನ್ನೂ ಸರಕಾರವು ಒದಗಿಸಲಿದೆ ಎಂದು ಬೆಂಬಲದ ಮಾತುಗಳನ್ನಾಡಿದರು.

ಕಾರ್ಯಕ್ರಮದಲ್ಲಿ ಸಂಘಟನೆಯ ಅಧ್ಯಕ್ಷ ಕಿರೀಟ್ ಭನ್ಸಾಲಿ, ಸಂಚಾಲಕ ನೀರವ್ ಭನ್ಸಾಲಿ, ದಕ್ಷಿಣ ಭಾರತದ ಅಧ್ಯಕ್ಷ ಮಹೇಂದ್ರ ತಾಯಲ್, ಕಾರ್ಯಕಾರಿ ನಿರ್ದೇಶಕ ಸವ್ಯಸಾಚಿ ರಾಯ್, ಚೇತನ್ ಮೆಹತಾ, ಶ್ರೀಕಾಂತ್ ಕಾರಿ, ವಿಧಾನ ಪರಿಷತ್ ಸದಸ್ಯ ಟಿ ಎ ಶರವಣ, ಪ್ರಮುಖ ಆಭರಣೋದ್ಯಮಿಗಳಾದ ಬಿ ಎ ರಮೇಶ್, ಎ ಬಿ ಎಸ್ ಸಂಜಯ್ ಉಪಸ್ಥಿತರಿದ್ದರು.

## ಜಯನಗರ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು, ಅನ್ನದಾನ ಸೇವೆ ಮತ್ತು ಸಂಗೀತ ಸೇವೆ

**ಬೆಂಗಳೂರು :** ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠಾಧೀಶರಾದ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಜಯನಗರದ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಗುರುವಾರದ ಪ್ರಯುಕ್ತ ಬೆಳಗ್ಗೆ ಗುರುರಾಯರ ಬೃಂದಾವನಕ್ಕೆ ಅಷ್ಟೋತ್ತರ ಸಹಿತ ಪಂಚಾಮೃತ ಅಭಿಷೇಕ, ವಿಶೇಷ ಅಲಂಕಾರ, ಕನಕಾಭಿಷೇಕ, ಅನ್ನದಾನ ಸೇವೆಗಳು ಜರುಗಿದವು.

ಸಂಜೆಯ ಕಾರ್ಯಕ್ರಮದಲ್ಲಿ ರಥೋತ್ಸವ ಪಲ್ಲಕ್ಕಿ ಉತ್ಸವ ಗಜವಾಹನೋತ್ಸವ ತೊಟ್ಟಿಲು ಸೇವೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಶ್ರೀಮತಿ ವೈಷ್ಣವಿ ಕೊಪ್ಪ ಮತ್ತು ಸಂಗಡಿಗರಿಂದ ಸಂಗೀತ ಸೇವೆ ಕಾರ್ಯಕ್ರಮಗಳು ಏರ್ಪಡಿಸಿತ್ತು ಎಂದು ಶ್ರೀಮಠದ ಪುರೋಹಿತರಾದ ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು.

# ನಾಳೆ ಕರ್ನಾಟಕ ಬಂದ್

**ಬೆಂಗಳೂರು:** ರಾಜ್ಯದಲ್ಲಿ ಮಹಾರಾಷ್ಟ್ರ ಏಕೀಕರಣ ನಡೆಸುತ್ತಿರುವ ಪುಂಡಾಟಿಕೆ, ಬಸ್ ಕಂಡಕ್ಟರ್ ಮೇಲೆ ಹಲ್ಲೆ, ಮೇಕೆದಾಟು ಯೋಜನೆ, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಸೇರಿದಂತೆ ವಿವಿಧ ವಿಷಯಗಳಿಗೆ ಸಂಬಂಧಪಟ್ಟಂತೆ ನಾಳೆ ಕರ್ನಾಟಕ ಬಂದ್‌ಗೆ ವಾಟಾಳ್ ನಾಗರಾಜ್ ನೇತೃತ್ವದ ಕನ್ನಡ ಒಕ್ಕೂಟ ಬಂದ್‌ಗೆ ಕರೆ ಕೊಟ್ಟಿದೆ.

ಬೆಳಿಗ್ಗೆ 6 ರಿಂದ ಸಂಜೆ 6 ಗಂಟೆಯವರೆಗೆ ಬಂದ್‌ಗೆ ಕರೆ ನೀಡಲಾಗಿದೆ. ಆದರೆ, ಈ ಬಂದ್‌ಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಓಲಾ, ಊಬರ್ ಚಾಲಕರಿಂದ ಕೆಲ ಆಟೋ ಸಂಘಟನೆಗಳು ಬಂದ್‌ಗೆ ಬೆಂಬಲ ವ್ಯಕ್ತಪಡಿಸಿದರೆ, ಹೋಟೆಲ್ ಮಾಲೀಕರ ಸಂಘ ನೈತಿಕ ಬೆಂಬಲ ನೀಡುವುದಾಗಿ ಘೋಷಿಸಿದೆ. ಪ್ರವೀಣ್‌ಶೆಟ್ಟಿ ಬಣ ಬಂದ್‌ಗೆ ಬೆಂಬಲ ಸೂಚಿಸಿದೆ.

ಕರ್ನಾಟಕ ರಾಜ್ಯರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳು, ಬಿಎಂಟಿಸಿ, ವಿಮಾನ–ರೈಲು ಹಾರಾಟ ಎಂದಿನಂತೆ ಇರಲಿವೆ. ಸರ್ಕಾರದಿಂದ ಈ ಬಂದ್‌ಗೆ ಬೆಂಬಲ ವ್ಯಕ್ತವಾಗಿಲ್ಲ. ಅಗತ್ಯ ಸೇವೆಗಳಾದ ಹಾಲು, ಔಷಧ, ದಿನಪತ್ರಿಕೆ, ತರಕಾರಿ ಸೇವೆಗಳು ಇರಲಿವೆ.

ಚಿತ್ರಪ್ರದರ್ಶಕರು ಸಹ ಬಂದ್‌ಗೆ ತಮ್ಮ ಬೆಂಬಲ ನೀಡಿದ್ದು, ಅಂದು ಬೆಳಗಿನ ಪ್ರದರ್ಶನ ನಿಲ್ಲಿಸುತ್ತಿದ್ದಾರೆ, ಆದರೆ ಮಧ್ಯಾಹ್ನದ ನಂತರ ಎಂದಿನಂತೆ ನಡೆಯಲಿವೆ. ರಾಜಣ್ಣ ಅವರ ಕಾಲದಿಂದಲೂ ಕನ್ನಡ ನೆಲ, ಜಲ, ಭಾಷೆಗೆ ಕುತ್ತು ಬಂದಾಗ ಚಿತ್ರರಂಗ ಬೆಂಬಲ ನೀಡುತ್ತಾ ಬಂದಿದೆ. ಈಗ ರಾಜ್ಯದ ಹಿತದೃಷ್ಟಿಯಿಂದ ಮಾಡುತ್ತಿರುವ ಈ ಬಂದ್‌ಗೆ ಚಿತ್ರರಂಗದ ಎಲ್ಲಾ ವಲಯಗಳ ಬೆಂಬಲವಿದೆ. ಎಂದು ತಿಳಿಸಿದರು. ಚಲನಚಿತ್ರದ ಚಿತ್ರೀಕರಣಕ್ಕೆ ಯಾವುದೇ ನಿರ್ಬಂಧ ಇರುವುದಿಲ್ಲ.

ಬಂದ್ ಹಿನ್ನೆಲೆಯಲ್ಲಿ ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಕಟ್ಟೆಚ್ಚರ ವಹಿಸಲಾಗಿದೆ. ಮುಖ್ಯವಾಗಿ ಬೆಳಗಾವಿಯಲ್ಲಿ ಹೆಚ್ಚಿನ ಭದ್ರತೆ ಕೈಗೊಳ್ಳಲಾಗಿದೆ. ಬೆಂಗಳೂರಿನ ಆಯಕಟ್ಟಿನ ಪ್ರದೇಶಗಳಲ್ಲಿ ಪೊಲೀಸ್ ಸರ್ಪಗಾವಲು ಹಾಕಲಾಗಿದೆ. ಯಾವ ಅಪಸ್ವರವೂ ಇಲ್ಲ, ನಾಳಿನ ಬಂದ್ ಗೆ ಎಲ್ಲರ ಸಹಕಾರ ಇದೆ. ಕನ್ನಡಿಗರನ್ನ ಎತ್ತಿಕಟ್ಟುವ ಕೆಲಸವನ್ನ ಕೆಲವರು ಮಾಡ್ತಿದ್ದಾರೆ ಅದ್ಯಾವುದೂಫಲ ನೀಡಲ, ಬಂದ್ ಯಶಸ್ವಿಯಾಗುತ್ತೆ ಎಂದರು. ಕಳೆದ 20 ದಿಗಳಿಂದ ಕರ್ನಾಟಕ ಬಂದ್ ಮಾಡ್ತಿವೆ.ನೀವು ಮಾಡುವ ಕೆಲಸ ನಾವು ಮಾಡ್ತಿದ್ದೇವೆ ಎಂದು ಹೇಳಿದರು. ಕನ್ನಡ, ಜಲ, ವಿಚಾರ ಬಂದಾಗ

ಮೊದಲ ಪುಟದಿಂದ

## ಹನಿಟ್ರ್ಯಾಪ್ ಗದ್ದಲ

ವಹಿಸಿ, ಹಾಲಿ ಹೈಕೋರ್ಟ್ ನ್ಯಾಯಾಧೀಶರರಿಂದ ತನಿಖೆ ನಡೆಸಬೇಕು. ಇಲ್ಲವೇ ಸಿಬಿಐ ತನಿಖೆಗೆ ವಹಿಸಬೇಕು ಎಂದು ಆಗ್ರಹಿಸಿದರು.

ಈ ವೇಳೆ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು, ಗದ್ದಲ ಕೋಲಾಹಲದ ವಾತಾವರಣ ನಿರ್ಮಾಣವಾಯಿತು.

ಮಧ್ಯಪ್ರವೇಶಿಸಿದ ಸಭಾಧ್ಯಕ್ಷ ಯು.ಟಿ.ಖಾದರ್ ಅವರು, ಸದಸ್ಯರುಗಳಿಗೆ ಸುಮ್ಮನೇ ಇರುವಂತೆ ಗದರಿಸಿದರಾದರೂ ಯಾರೊಬ್ಬರು ಮಾತು ಕೇಳುವ ಸ್ಥಿತಿಯಲ್ಲಿರಲಿಲ್ಲ. ಈ ವೇಳೆ ಸಭಾಧ್ಯಕ್ಷರು ಮುಖ್ಯಮಂತ್ರಿಗಳಿಗೆ ಪ್ರತಿಪಕ್ಷಗಳ ಪ್ರಶ್ನೆಗಳಿಗೆ ಉತ್ತರಿಸುವಂತೆ ಸೂಚನೆ ನೀಡಿದರು.

ಈ ಸಂಬಂಧ ಉತ್ತರ ನೀಡಿದ ಸಿಎಂ ಪ್ರಕರಣ ಸಂಬಂಧ ಗೃಹ ಸಚಿವರು ಈಗಾಗಲೇ ಉನ್ನತ ಮಟ್ಟದ ತನಿಖೆ ನಡೆಸುವುದಾಗಿ ಸದನಕ್ಕೆ ಮಾಹಿತಿ ನೀಡಿದ್ದಾರೆ. ಸಮಿತಿಯೊಂದನ್ನು ರಚಿಸಿ ಸೂಕ್ತ ತನಿಖೆ ನಡೆಸಲಾಗುವುದು ಎಂದು ಹೇಳಿದರು.

ಇದೇ ವೇಳೆ ಎದ್ದು ನಿಂತು ಮಾತನಾಡಿದ ಗೃಹಸಚಿವ ಪರಮೇಶ್ವರ್, ಕೆ.ಎನ್.ರಾಜಣ್ಣ ಸದನದಲ್ಲಿ ಈ ಸಂಬಂಧ ಹೇಳಿಕೆ ನೀಡಿದ್ದಾರೆಯೇ ಹೊರತು ಇದುವರೆಗೂ ಲಿಖಿತವಾಗಿ ಯಾವ ದೂರನ್ನು ನೀಡಿಲ್ಲ ಎಂದು ಹೇಳಿದರು.

ಗೃಹ ಸಚಿವರ ಈ ಮಾತಿಗೆ ಕೆರಳಿದ ವಿರೋಧ ಪಕ್ಷದ ಸದಸ್ಯರು ಸರ್ಕಾರವನ್ನು ತೀವ್ರ ತರಾಟೆಗೆ ತೆಗೆದುಕೊಂಡು, ನಿಮ್ಮ ಸಚಿವರು ಮಾಡಿರುವ ಆರೋಪದಲ್ಲಿ ನ್ಯಾಯಾಧೀಶರ ಹೆಸರನ್ನು ಪ್ರಸ್ತಾಪಿಸಲಾಗಿದ್ದು, ನ್ಯಾಯಾಧೀಶರು ನಿಮ್ಮ ಮುಂದೆ ದೂರು ಕೊಡಲು ಸಾಧ್ಯವೇ, ಈ ಮಾತನ್ನು ಹೇಳಲು ನಿಮಗೆ ನಾಚಿಕೆಯಾಗುವುದಿಲ್ಲವೇ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹರಿಹಾಯ್ದರು. ಈ ವೇಳೆ ಗದ್ದಲ–ಕೋಲಾಹಲ ಉಂಟಾಯಿತು.

ಈ ನಡುವೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಭಾಧ್ಯಕ್ಷರ ಸೂಚನೆ ಮೇರೆಗೆ ಬಜೆಟ್‌ವಿಧೇಯಕವನ್ನು ಸಭೆಯಲ್ಲಿ ಮಂಡಿಸಿ, ವಿಧೇಯಕಕ್ಕೆ ಅಂಗೀಕಾರ ಪಡೆದುಕೊಂಡರು.

ಇದರಿಂದ ಮತ್ತಷ್ಟು ಕೆರಳಿದ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದ್ದಲ್ಲದೇ ಬಜೆಟ್ ಪ್ರತಿಗಳನ್ನು ಹರಿದು ಸಭಾಧ್ಯಕ್ಷರ ಪೀಠದತ್ತ ತೂರಿದರು.ಈ ವೇಳೆ ಆಡಳಿತ ಪಕ್ಷದ ಸದಸ್ಯರು ಸಹ ಘೋಷಣೆ ಕೂಗುತ್ತಾ ಬಿಜೆಪಿ ಸದಸ್ಯರ ವಿರುದ್ಧ ಆಕ್ರೋಶ ಹೊರ ಹಾಕಿದರು. ಗದ್ದಲ ಹೆಚ್ಚಾಗುತ್ತಿದ್ದಂತೆಯೇ ಸ್ಪೀಕರ್ ಯು.ಟಿ. ಖಾದರ್ ಅವರು ಕಲಾಪವನ್ನು 15 ನಿಮಿಷಗಳ ಕಾಲ ಮುಂದೂಡಿದರು.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ

ಪರೀಕ್ಷೆ ಭಯ ಬಿಟ್ಟು ಚೆನ್ನಾಗಿ ಉತ್ತರ ಬರೆಯಿರಿ ಎಂದು ಅವರಿಗೆ ಪ್ರೋತ್ಸಾಹ ನೀಡುತ್ತಿರುವ ದೃಶ್ಯ ಹಲವೆಡೆ ಕಂಡು ಬಂತು.

ಪ್ರಾಥಮಿಕ ಮತ್ತು ಉನ್ನತ ಶಿಕ್ಷಣ ಸಚಿವ ಮಧುಬಂಗಾರಪ್ಪ ಅವರು ಬೆಳಿಗ್ಗೆಯೇ ಹಲವು ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಪರೀಕ್ಷೆಗೂ ಮುನ್ನ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ರಾಜ್ಯದ 15,881 ಪರೀಕ್ಷಾ ಕೇಂದ್ರಗಳಲ್ಲಿ ಇಂದು 8 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರಥಮ ಭಾಷೆ ಪರೀಕ್ಷೆಯನ್ನು ಬರೆದಿದ್ದಾರೆ.

ಎಲ್ಲೂ ಕೂಡ ಯಾವುದೇ ರೀತಿಯ ಸಮಸ್ಯೆಗಳು ಎದುರಾಗಿಲ್ಲ. ಪ್ರಶ್ನೆ ಪತ್ರಿಕೆಗಳನ್ನು ಪೊಲೀಸ್ ಭದ್ರತೆಗಳೊಂದಿಗೆ ಆಯಾ ಕೇಂದ್ರಗಳಿಗೆ ಹಂಚಲಾಗಿದ್ದು, ಪರೀಕ್ಷಾ ಕೇಂದ್ರಗಳಲ್ಲಿ ವೆಬ್ ಕಾಸ್ಟಿಂಗ್, ಸಿಸಿ ಟಿವಿ ಕ್ಯಾಮೆರಾ ಸೇರಿದಂತೆ ಹಲವು ತಂತ್ರಜ್ಞಾನಗಳನ್ನು ಬಳಸಿಕೊಂಡು ಕ್ಷಣ ಕ್ಷಣದ ಮಾಹಿತಿಗಳನ್ನು ಪಡೆಯಲಾಗುತ್ತಿತ್ತು.

## ಹನಿಟ್ರ್ಯಾಪ್: ಅಶೋಕ್

ಪ್ರಶ್ನೆ. ಸಿಬಿಐ ಅಥವಾ ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು. ಹನಿಟ್ರ್ಯಾಪ್ ವಿಚಾರ ಸದನದಲ್ಲಿ ಪ್ರಸ್ತಾಪ ಆಗಿದ್ದು ಒಂದು ಗ್ಯಾಂಗ್ ಮಾಡಿದೆ ಎಂದು ಹೇಳಿದ್ದಾರೆ. ಏನಿದು ಕಳ್ಳಾಟ ನಡೆಯುತ್ತಿದ್ಯಾ? ರಾಜಣ್ಣ ಹೇಳಿಕೆ ಸದನದ ಆಸ್ತಿ ಎಂದರು.

## ಸಿಎಂ ರಾಜೀನಾಮೆ ನೀಡಲಿ

ಮುಖ್ಯಮಂತ್ರಿಗಳು ಸುಮ್ಮನೆ ನೋಡುತ್ತ ಕೂತಿದ್ದಾರೆ. ಇವತ್ತು ಅದು ಸ್ಫೋಟಗೊಂಡಿದೆ. ಸಚಿವ ಸಂಪುಟದಲ್ಲಿಯೇ ಈ ರೀತಿ ನಡೆಯುತ್ತಿರುವಾಗ ಈ ಸಚಿವ ಸಂಪುಟವನ್ನು ಏನೆಂದು ಕರೆಯಬೇಕು. ರಾಜ್ಯವನ್ನು ಆಳುವ ನೈತಿಕತೆ ಕಳೆದುಕೊಂಡಿರುವ ಕ್ರಿಮಿನಲ್ ಕ್ಯಾಬಿನೆಟ್ ರಾಜ್ಯದಲ್ಲಿದೆ ಎಂದು ಹೇಳಿದರು.

ನನ್ನ ಪ್ರಕಾರ ಈ ಅನೈತಿಕ ಚಟುವಟಿಕೆ ಮುಖ್ಯಮಂತ್ರಿಯವರ ಮೂಗಿನ ನೇರಕ್ಕೆ ನಡೆಯುತ್ತಿರುವುದರಿಂದ ಅವರು ನೈತಿಕ ಹೊಣೆ ಹೊತ್ತು ರಾಜಿನಾಮೆ ಕೊಡಬೇಕು. ಇಲ್ಲದಿದ್ದರೆ ರಾಜ್ಯದ ಜನತೆ ಯಾಕಾದರೂ ಇಂತಹ ಸರ್ಕಾರ ಅಧಿಕಾರಕ್ಕೆ ತಂದಿದ್ದೇವೆ ಎಂದು ಪಶ್ಚಾತಾಪ ಪಡುವಂತಾಗುತ್ತದೆ ಎಂದು ಹೇಳಿದರು.

ಸಹಕಾರ ಸಚಿವರು 48 ಜನರ ಸಿಡಿಗಳಿವೆ ಎಂದು ಹೇಳಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಸಚಿವ ರಾಜಣ್ಣ ಅವರಿಗೆ ಈ ಬಗ್ಗೆ ಇನ್ನೂ ಹೆಚ್ಚಿ ಮಾಹಿತಿ ಇರಬಹುದು ಅವರು ಅದೆಲ್ಲವನ್ನೂ ತನಿಖೆಗೆ ಒಪ್ಪಿಸಬೇಕು. ಈ ರೀತಿಯ ಅನೈತಿಕ ಚಟುವಟಿಕೆಗಳನ್ನು ಮಾಡುವ ಯಾವುದೇ ಪಕ್ಷದ ವ್ಯಕ್ತಿ ಇರಲಿ ಅವರ ವಿರುದ್ಧ ಕಠಿಣ ಶಿಕ್ಷೆಯಾಗಬೇಕು. ಈ ಪ್ರಕರಣದ ತನಿಖೆಯನ್ನು ಹೈಕೋರ್ಟ್‌ನ ಹಾಲಿ ಅಥವಾ ನಿವೃತ್ತ ನ್ಯಾಯಾಧೀಶರಿಂದ ತನಿಖೆ ನಡೆಸಬೇಕು. ಈ ಪ್ರಕರಣದ ಬಗ್ಗೆ ಈಗಾಗಲೇ ರಾಷ್ಟ್ರ ಮಟ್ಟದಲ್ಲಿ ಸುದ್ದಿಯಾಗಿರುವುದರಿಂದ ಕೇಂದ್ರದ ನಾಯಕರ ಗಮನಕ್ಕೂ ಬಂದಿರುತ್ತದೆ. ಈ ಪ್ರಕರಣದ ತನಿಖೆಯ ಹಾದಿಯ ನಂತರ ಮುಂದಿನ ಬೆಳವಣಿಗೆಗಳು ನಡೆಯಲಿವೆ ಎಂದು ಹೇಳಿದರು.

## ಇಲಾಖೆಯೇ ಬಂದ್

ರಾಜ್ಯಗಳಿಗೆ ನೀಡುತ್ತೇನೆ ಎಂದು ಟ್ರಂಪ್ ಈ ಹಿಂದೆ ಹೇಳಿದ್ದರು. ಈ ಭರವಸೆಯಂತೆ ಶಿಕ್ಷಣ ಇಲಾಖೆಯ ಟ್ರಂಪ್ ಮುಚ್ಚಿದ್ದರಿಂದ ಇನ್ನು ಮುಂದೆ ಶಿಕ್ಷಣದಲ್ಲಿ ಅಮೆರಿಕ ಸರ್ಕಾರದ ಹಸ್ತಕ್ಷೇಪ ಇರುವುದಿಲ್ಲ. ಸಂಪೂರ್ಣವಾಗಿ ರಾಜ್ಯಗಳಿಗೆ ಅಧಿಕಾರ ಇರಲಿದೆ.

ಶಿಕ್ಷಣ ರಾಜ್ಯಗಳಿಗೆ ಸೇರಬೇಕಿತ್ತು. ನಾವು ಮರಳಿ ಶಿಕ್ಷಣವನ್ನು ರಾಜ್ಯಗಳಿಗೆ ನೀಡಿದ್ದೇವೆ ಎಂದು ಪ್ರಕಟಿಸಿದರು. ಕಳೆದ ವಾರ ಇಲಾಖೆಯು ತನ್ನ ಅರ್ಧದಷ್ಟು ಸಿಬ್ಬಂದಿಯನ್ನು ವಜಾಗೊಳಿಸುವುದಾಗಿ ಟ್ರಂಪ್ ಘೋಷಣೆ ಮಾಡಿದ್ದರು.

ಶಿಕ್ಷಣ ಇಲಾಖೆಯು ಅಮೆರಿಕನ್ ಶಿಕ್ಷಣದ ಗುಣಮಟ್ಟವನ್ನು ಸುಧಾರಿಸುವಲ್ಲಿ ವಿಫಲವಾಗಿದೆ. 1979 ರಲ್ಲಿ ಇಲಾಖೆಯ ರಚನೆಗೆ ರಿಪಬ್ಲಿಕನ್ನರಿಂದ ಮಾತ್ರವಲ್ಲದೇ ಆಗಿನ ಅಧ್ಯಕ್ಷ ಜಿಮ್ಮಿ ಕಾರ್ಟರ್ ಅವರ ಸ್ವಂತ ಸಂಪುಟದ ಸದಸ್ಯರಿಂದ ಕೂಡ ಪ್ರತಿರೋಧ ವ್ಯಕ್ತವಾಗಿತ್ತು ಎಂದು ತಿಳಿಸಿದರು.

## ಶೀಘ್ರ ತನಿಖೆಯಾಗಲಿ

ಅವರ ನೋವನ್ನು ಅವರು ಹೇಳಿಕೊಂಡಿದ್ದಾರೆ. ಮಾಡಿದ್ದುಣ್ಣೋ ಮಾರಾಯ. ಅವರ ಪಕ್ಷದವರಿಗೆ ಹೇಳಿ ಒಂದೊಳ್ಳೆ ಆಸ್ಪತ್ರೆಗೆ ಸೇರಿಸಿ ಪರೀಕ್ಷೆ ಮಾಡಿಸಲಿ. ಅವರಿಗೆ ಒಂದಷ್ಟು ತೊಂದರೆಗಳಿವೆ" ಎಂದು ವ್ಯಂಗ್ಯವಾಡಿದರು.

**ಕರ್ನಾಟಕದ ಬಂದ್ ಅವಶ್ಯಕತೆಯಿಲ್ಲ:** ಶನಿವಾರ (ಮಾ.22) ಕರ್ನಾಟಕ ಬಂದ್ ಬಗ್ಗೆ ಕೇಳಿದಾಗ, "ರಾಜ್ಯದ ಹಿತಕ್ಕೆ ಒಳ್ಳೆ ಕೆಲಸಕ್ಕೆ ಏನಿದ್ದರೂ ನಾವು ಬೆಂಬಲ ನೀಡುತ್ತೇವೆ. ಕಾನೂನಿನಲ್ಲಿ ಇರುವ ಅವಕಾಶಗಳನ್ನು ಉಪಯೋಗಿಸಿಕೊಳ್ಳಬೇಕು. ಯಾವ ಗಲಾಟೆಗಳನ್ನೂ ಮಾಡದೆ, ಯಾವ ಬಂದ್ ಕೂಡ ಮಾಡದೇ ದಯವಿಟ್ಟು ಎಲ್ಲರೂ ಶಾಂತರೀತಿಯಿಂದ ಇರಬೇಕು ಎಂದು ಮನವಿ ಮಾಡುತ್ತೇನೆ" ಎಂದು ಹೇಳಿದರು.

## ಏರ್ಪೋರ್ಟ್ ಬಂದ್

ಪರಿಸ್ಥಿತಿ ನಿಯಂತ್ರಿಸಲು ಎಲ್ಲಾ ಪ್ರಯತ್ನ ನಡೆಯುತ್ತಿದೆ" ಎಂದು ಹೇಳಿದರು.

ವಿಮಾನ ನಿಲ್ದಾಣ ಬಂದ್ ಮಾಡಿರುವುದರಿಂದ ಸಾವಿರಾರು ವಿಮಾನಗಳ ಹಾರಾಟದಲ್ಲಿ ವ್ಯತ್ಯಯ ಉಂಟಾಗಿದೆ. ದಕ್ಷಿಣ ಮತ್ತು ಸೆಂಟ್ರಲ್ ಇಂಗ್ಲೆಂಡ್‌ನ ನಾಲ್ಕು ಮಿಲಿಯನ್ ಮನೆಗಳಿಗೆ ವಿದ್ಯುತ್ ಪೂರೈಕೆ ಮಾಡುವ ಸ್ಕಾಟಿಶ್ ಮತ್ತು ಸದರ್ನ್ ಎಲೆಕ್ಟ್ರಿಸಿಟಿ ನೆಟ್‌ವರ್ಕ್, ಹಲವು ಪ್ರದೇಶದಲ್ಲಿ ತುರ್ತು ಸೇವೆಗಳನ್ನು ಪೂರೈಸುವ ಕಾರ್ಯ ಸಾಗುತ್ತಿದೆ ಎಂದು ಹೇಳಿದೆ. ಲಂಡನ್ ಫೈರ್ ಬ್ರಿಗೇಡ್ ವರದಿ ಪ್ರಕಾರ, ಟ್ರಾನ್ಸ್‌ಫಾರ್ಮರ್‌ನೊಳಗೆ ಬೆಂಕಿ ಕಾಣಿಸಿಕೊಂಡಿದ್ದು, ಇದು ದೊಡ್ಡ ಪ್ರಮಾಣದಲ್ಲಿ ತುರ್ತು ಪರಿಸ್ಥಿತಿ ನಿರ್ಮಾಣವಾಗಿದೆ. 10 ಅಗ್ನಿಶಾಮಕದಳದ ವಾಹನ ಮತ್ತು ಸಿಬ್ಬಂದಿಗಳನ್ನು ಸ್ಥಳದಲ್ಲಿ ನಿಯೋಜಿಸಲಾಗಿದೆ. ದಟ್ಟ ಹೊಗೆ ನಿರ್ಮಾಣವಾಗಿರುವ ಕಾರಣ ಈ ಪ್ರದೇಶದ ಜನರು ಮನೆ ಮತ್ತು ಕಿಟಕಿಗಳ ಬಾಗಿಲು ಬಂದ್ ಮಾಡುವಂತೆ ಸೂಚಿಸಲಾಗಿದೆ. ಹೀಥ್ರೂ ಯುಕೆಯ ಅತಿದೊಡ್ಡ ವಿಮಾನ ನಿಲ್ದಾಣವಾಗಿದ್ದು, ಪ್ರತಿನಿತ್ಯ ಇಲ್ಲಿಂದ 1,300ಕ್ಕೂ ಹೆಚ್ಚು ವಿಮಾನಗಳ ಹಾರಾಟ ನಡೆಯುತ್ತದೆ.

## ಸಿಸಿಟಿವಿ ಕ್ಯಾಮೆರಾ ನಾಶ

ರಾತ್ರಿ ಕಿಡಿಗೇಡಿಗಳು ಪರೀಕ್ಷಾ ಕೇಂದ್ರಕ್ಕೆ ಬಂದು ಗೇಟ್, ಕೊಠಡಿಗಳ ಬಾಗಿಲು ಮುರಿದು, ಕೊಠಡಿಗಳಿಗೆ ಅಳವಡಿಸಿದ್ದ ಸಿಸಿಟಿವಿ ಕ್ಯಾಮೆರಾಗಳನ್ನು ಕಿತ್ತು ಮತ್ತೆ ಜೋಡಿಸಿದ್ದಾರೆ. 10 ಕೊಠಡಿಗಳಲ್ಲಿದ್ದ 14 ಕ್ಯಾಮೆರಾಗಳ ಪೈಕಿ 6 ಕ್ಯಾಮೆರಾಗಳನ್ನು ಕಿತ್ತೆಸೆದಿದ್ದಾರೆ. ಪೊಲೀಸರು ಹಾಗೂ ಅಧಿಕಾರಿಗಳು ಪರೀಕ್ಷಾ ಕೇಂದ್ರಕ್ಕೆ ದೌಡಾಯಿಸಿ ಪರಿಶೀಲನೆ ನಡೆಸಿ, ನಾಶಪಡಿಸಲಾಗಿದ್ದ ಸಿಸಿಟಿವಿ ಕ್ಯಾಮೆರಾಗಳನ್ನು ಮತ್ತೆ ಜೋಡಿಸಿದ್ದು, ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಅನುವು ಮಾಡಿಕೊಟ್ಟಿದ್ದಾರೆ.

## ವೀಕ್ಷಣೆ ಆಧಾರವಲ್ಲ

ಹೈಕೋರ್ಟ್ ಪೀಠ ಪ್ರತಿಪಾದಿಸಿದೆ.'ಮದುವೆಯಾದ ನಂತರವೂ ಮಹಿಳೆಗೆ ತನ್ನ ಸ್ವಂತಿಕೆ ಮತ್ತು ವ್ಯಕ್ತಿತ್ವ ಉಳಿಸಿಕೊಳ್ಳುವ ಹಕ್ಕಿದೆ. ಹೆಂಡತಿ ಆದ ಮಾತ್ರಕ್ಕೆ ಮಹಿಳೆಯ ಅಸ್ಮಿತೆಗೆ ಕುತ್ತು ತರುವಂತಿಲ್ಲ' ಎಂದೂ ಹೇಳಿದೆ.' ನೀಲಿ ಚಿತ್ರದ ವ್ಯಸನವು ಕೆಟ್ಟದು ಮತ್ತು ನೈತಿಕವಾಗಿ ಸಮರ್ಥನೀಯವಲ್ಲ. ಆದರೆ, ಇದು ವಿಚ್ಛೇದನಕ್ಕೆ ಕಾನೂನಿನ ಆಧಾರವಾಗುವುದಿಲ್ಲ'. 'ಪುರುಷರಲ್ಲಿ ಹಸ್ತ ಮೈಥುನವನ್ನು ಸಾರ್ವತ್ರಿಕವೆಂದು ಒಪ್ಪಿಕೊಂಡಾಗ, ಮಹಿಳೆಯರು ಹಸ್ತಮೈಥುನ ಮಾಡಿಕೊಳ್ಳುವುದನ್ನು ಕಳಂಕವಾಗಿ ಪರಿಗಣಿಸಲಾಗದು' ಎಂದು ಪೀಠವು ತನ್ನ ತೀರ್ಪಿನಲ್ಲಿ ಹೇಳಿದೆ.

ವಿಚ್ಛೇದನ ನೀಡಲು ನಿರಾಕರಿ ಸಿದ ಕೆಳ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ವ್ಯಕ್ತಿಯೊಬ್ಬರು ಸಲ್ಲಿಸಿರುವ ಮೇಲ್ಮನವಿಯನ್ನು ವಜಾಗೊಳಿಸಿದ ನ್ಯಾಯಪೀಠ, 'ಸ್ವಯಂ ಆನಂದವು ನಿಷಿದ್ಧವಲ್ಲ' ಎಂದು ತೀರ್ಪಿನಲ್ಲಿ ಹೇಳಿದೆ.

## ಗೋದಾಮು ಸ್ಫೋಟ

ಗೊಂಡಿಲ್ಲ. ಇದು ಬೆಂಕಿಗೂ ಕಾರಣವಾಯಿತು ಎಂದು ಅಗ್ನಿಶಾಮಕ ದಳದ ಅಧಿಕಾರಿ ತಿಳಿಸಿದ್ದಾರೆ.

ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಸ್ಥಳಕ್ಕೆ ಧಾವಿಸಿ ಎರಡು ಗಂಟೆಗಳಲ್ಲಿ ಬೆಂಕಿ ಹರಡುವುದನ್ನು ನಿಯಂತ್ರಿಸಿದವು ಸ್ಥಳಕ್ಕೆ ಭೇಟಿ ನೀಡಿದ ದಕ್ಷಿಣ ಜಿಲ್ಲಾಧಿಕಾರಿ ಎಗ್ನಾ ಕ್ಲೀಟಸ್ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಸಂಬಂಧಪಟ್ಟ ಅಧಿಕಾರಿಗಳು ಸ್ಥಳವನ್ನು ಪರಿಶೀಲಿಸಲಿದ್ದಾರೆ ಎಂದು ಹೇಳಿದರು. ಘಟನೆಗೆ ಕಾರಣವನ್ನು ಇನ್ನೂ ಗುರುತಿಸಲಾಗಿಲ್ಲ ಎಂದು ಕ್ಲೀಟಸ್ ಹೇಳಿದರು.ತಡರಾತ್ರಿ ಸ್ಥಳಕ್ಕೆ ಭೇಟಿ ನೀಡಿದ ಕೆಪೆಮ್ ಶಾಸಕ ಆಲ್ಟೋನ್ ಡಿ ಕೋಸ್ಟಾ, ಸ್ಫೋಟವು ಎಷ್ಟು ಪ್ರಬಲವಾಗಿದೆಯೆಂದರೆ ನಕ್ವೆರಿ–ಬೆತುಲ್ ಗ್ರಾಮದ ಹಲವಾರು ಮನೆಗಳಲ್ಲಿ ಬಿರುಕುಗಳು ಕಾಣಿಸಿಕೊಂಡಿವೆ ಎಂದು ಪಿಟಿಐಗೆ ತಿಳಿಸಿದ್ದಾರೆ. ಸ್ಫೋಟದ ಶಬ್ದದಿಂದಾಗಿ, ಸ್ಥಳೀಯರು ಭಯಭೀತರಾಗಿ ತಮ್ಮ ಮನೆಗಳಿಂದ ಹೊರಗೆ ಓಡಿಹೋದರು. ಸ್ಫೋಟದಿಂದ ಉಂಟಾದ ಬೆಂಕಿಯನ್ನು ಕೆನಕೋನಾ ತಾಲ್ಲೂಕಿನ ಅಗೊಂಡಾ ಬೀಚ್ ನಲ್ಲಿಯೂ ಕಂಡುಬಂತು ಎನ್ನಲಾಗಿದೆ.

## ಸಿಬಿಐ ತನಿಖೆಗೆ ಆಗ್ರಹ

ಸದನ ಮುಗಿದ ಬಳಿಕ ಹೊರಕ್ಕೆ ಬಂದ ಗೃಹ ಸಚಿವರು, ತಮಗೆ ಅಧಿಕೃತವಾಗಿ ಯಾವುದೇ ಅಧಿಕಾರಿಗಳು ಮಾಹಿತಿ ನೀಡಿಲ್ಲ ಎಂದಿದ್ದಾರೆ ಎಂದು ವಿವರಿಸಿದರು.

ಅಧಿಕಾರಿಗಳು ಮಾಹಿತಿ ಕೊಟ್ಟ ಮೇಲೆ ಅದರ ಕುರಿತು ಆಲೋಚಿಸುವುದಾಗಿ ತಿಳಿಸಿ ದ್ವಂದ್ವ ನೀತಿ ಪ್ರದರ್ಶನ ಮಾಡಿದ್ದಾರೆ. ನಾವು ಸದನದಲ್ಲಿ ಮುಖ್ಯಮಂತ್ರಿಗಳಿಂದ ಉತ್ತರ ಪಡೆಯುವ ಪ್ರಯತ್ನ ಮಾಡಿದ್ದೇವೆ. ಅವರು ಯಾವುದೇ ರೀತಿ ಸರಿಯಾದ ಉತ್ತರ ಕೊಟ್ಟಿಲ್ಲ ಎಂದು ಟೀಕಿಸಿದರು. ಇದೊಂದು ಗಂಭೀರ ಪ್ರಕರಣ. ಇದು ಸದನದ 224 ಶಾಸಕರ, ರಾಜ್ಯದ ಗೌರವದ ಪ್ರಶ್ನೆ. ಬಿಜೆಪಿ ಹಾಗೂ ಜೆಡಿಎಸ್ ಒಟ್ಟಾಗಿ ಪ್ರತಿಭಟಿಸುವುದಾಗಿ ತಿಳಿಸಿದರು.

ರಾಜ್ಯದಲ್ಲಿ ಅಲ್ಪಸಂಖ್ಯಾತರಿಗೆ ಸರಕಾರಿ ಕಾಮಗಾರಿಗಳಲ್ಲಿ ಶೇ 4 ಮೀಸಲಾತಿ ನೀಡಿದ ಬಗ್ಗೆ ಮುಖ್ಯಮಂತ್ರಿಗಳು ಹೇಳಿಕೆ ಕೊಟ್ಟಿದ್ದಾರೆ. ಇದರ ವಿರುದ್ಧ ನಾವು ರಾಜ್ಯಾದ್ಯಂತ ಜನಾಂದೋಲನಕ್ಕೆ ಕರೆ ಕೊಡಲಿದ್ದೇವೆ ಎಂದು ಪ್ರಕಟಿಸಿದರು. ಬಿಜೆಪಿ– ಜೆಡಿಎಸ್ ಪಕ್ಷಗಳು ಮುಸಲ್ಮಾನರ ವಿರೋಧಿ ಅಲ್ಲ; ಆದರೆ, ಹಿಂದೂಗಳಿಗೆ ಅಪಮಾನ ಮಾಡುವ ರೀತಿಯಲ್ಲಿ ಹಣಕಾಸಿನ ಸಚಿವರಾದ ಮುಖ್ಯಮಂತ್ರಿಗಳು ನಡೆದುಕೊಳ್ಳುತ್ತಿದ್ದಾರೆ. ಇದನ್ನು ನಾವು ಧಿಕ್ಕರಿಸುತ್ತಿದ್ದೇವೆ ಎಂದು ತಿಳಿಸಿದರು.

ವಿದೇಶಕ್ಕೆ ವಿದ್ಯಾಭ್ಯಾಸಕ್ಕೆ ಹೋಗುವ ಮುಸಲ್ಮಾನರಿಗೆ ಕೊಡುವ ಮೊತ್ತವನ್ನು 20 ಲಕ್ಷದಿಂದ 30 ಲಕ್ಷಕ್ಕೆ ಏರಿಸಿದ್ದಾರೆ. ಹಿಂದೂಗಳಲ್ಲಿ ಬಡವರಿಲ್ಲವೇ? ಅವರು ಹೊರದೇಶಕ್ಕೆ ವಿದ್ಯಾಭ್ಯಾಸಕ್ಕೆ ಹೋದರೆ ಅವರಿಗೆ ಹಣಕಾಸಿನ ಅವಶ್ಯಕತೆ ಇಲ್ಲವೇ? ಎಂದು ಕೇಳಿದರು. ಮುಸಲ್ಮಾನ ಹೆಣ್ಮಕ್ಕಳ ಆತ್ಮರಕ್ಷಣೆಗಾಗ್ಗಿ ಹಣ ಇಟ್ಟಿದ್ದಾರೆ. ರಾಜ್ಯದಲ್ಲಿ ಲವ್ ಜಿಹಾಗೆ ಬಲಿ ಆಗುತ್ತಿರುವುದು ಹಿಂದೂ ಹೆಣ್ಮಕ್ಕಳೇ ಹೊರತು ಮುಸ್ಲಿಂ ಹೆಣ್ಮಕ್ಕಳಲ್ಲ ಎಂದು ಗಮನ ಸೆಳೆದರು.

ಮುಸಲ್ಮಾನರ ಓಲೈಕೆ ಮೂಲಕ ಧರ್ಮಗಳ ನಡುವೆ ಬೆಂಕಿ ಹಚ್ಚಲು ಮುಖ್ಯಮಂತ್ರಿಗಳು ಹೊರಟಿದ್ದು, ಇದನ್ನು ನಾವು ವಿರೋಧಿಸುತ್ತೇವೆ. ಈ ಎಲ್ಲ ವಿಚಾರಗಳನ್ನು ಮುಂದಿಟ್ಟು ಬಿಜೆಪಿ– ಜೆಡಿಎಸ್ ರಾಜ್ಯವ್ಯಾಪಿ ಹೋರಾಟ ಮಾಡಲಿದೆ. ಓಲೈಕೆ ರಾಜಕಾರಣಕ್ಕೆ ಇತಿಶ್ರೀ ಹಾಕಬೇಕು ಎಂದು ಒತ್ತಾಯಿಸಿದರು.

# ಚರ-ಸ್ಥಿರ ಸ್ವತ್ತುಗಳ ನೋಂದಣಿಗೆ ಕಾವೇರಿ-2.0ಯಿಂದ ಸಾರ್ವಜನಿಕರಿಗೆ ಕಿರಿಕಿರಿ; ಮುಖ್ಯಮಂತ್ರಿಗಳಿಗೆ ಮನವಿ

**ಬೆಂಗಳೂರು:** ರಾಜ್ಯ ಸರ್ಕಾರದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಚರ-ಸ್ಥಿರ ಸ್ವತ್ತುಗಳ ದಸ್ತಾವೇಜುಗಳ ನೋಂದಣಿಗೆ ಜಾರಿಗೊಳಿಸಿದ ಕಾವೇರಿ 2.0 ತಂತ್ರಾಂಶದಿಂದ ಸಾರ್ವಜನಿಕರು ಹಾಗೂ ಪತ್ರ ಬರಹಗಾರರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದು ಇವುಗಳನ್ನು ಪರಿಹರಿಸಬೇಕೆಂದು ಚರ ಸ್ಥಿರ ಸ್ವತ್ತುಗಳ ನೋಂದಣಿ ಸಂಘ ಒತ್ತಾಯಿಸಿದೆ.

ಪ್ರೆಸ್ ಕ್ಲಬ್ ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪರವಾನಗಿ ಪಡೆದ ಪತ್ರ ಬರಹಗಾರರ ಒಕ್ಕೂಟ ಅಧ್ಯಕ್ಷ ಡಿ.ಕೆ.ಸಂಗಮೇಶ್ ಎಲಿಗಾರ್, ಉಪಾಧ್ಯಕ್ಷ ನವೀನ್ ಕುಮಾರ್ ಎನ್ ಮಾತನಾಡಿ, ರಾಜ್ಯ ಸರ್ಕಾರ ನೋಂದಣಿ ಇಲಾಖೆಯಲ್ಲಿ ಕಾವೇರಿ-2.0 ತಂತ್ರಾಂಶ ಜಾರಿಗೊಳಿಸಿದ ನಂತರ ಸಾರ್ವಜನಿಕರಿಗೆ ಸಿಟಿಜನ್ ಲಾಗಿನ್ ವ್ಯವಸ್ಥೆ ಕಲ್ಪಿಸಿರುವುದು ಸರಿಯಷ್ಟೆ. ಸಿಟಿಜನ್ ಲಾಗಿನ್ ನಿಂದ ಯಾರು ಬೇಕಾದರೂ ನೋಂದಣಿ ದಸ್ತಾವೇಜುಗಳನ್ನು ಅಪ್‌ಲೋಡ್ ಮಾಡಬಹುದಾಗಿರುತ್ತದೆ. ಇದರಿಂದ ಸೈಬರ್, ಡಿ.ಟಿ.ಪಿ. ಸೆಂಟರ್ ನವರು ದಸ್ತಾವೇಜುಗಳ ಬಗ್ಗೆ ಯಾವುದೇ ಮಾಹಿತಿ ಇಲ್ಲದೇ ಇರುವ ಅನಧಿಕೃತ ವ್ಯಕ್ತಿಗಳು ದಸ್ತಾವೇಜುಗಳನ್ನು ಮನ ಬಂದಂತೆ ಅಪ್‌ಲೋಡ್ ಮಾಡಿ ತಪ್ಪು ತಪ್ಪಾಗಿ ಆಸ್ತಿಯನ್ನು ಇನ್ಯಾವುದೋ ಇಂಡೆಕ್ಸ್‌ನಲ್ಲಿ ರಿಜಿಸ್ಟರ್ ಮಾಡಿಸುತ್ತಿರುವುದು ಕಂಡು



ಬಂದಿದೆ,ಅನಧಿಕೃತ ವ್ಯಕ್ತಿಗಳ ಹಾವಳಿ ಹೆಚ್ಚಾಗಿ ಎಲ್ಲಾ ರೀತಿಯಿಂದಲೂ ಅನಧಿಕೃತ ವ್ಯಕ್ತಿಗಳಿಂದಲೇ ಕಛೇರಿಗೆ ತೊಂದರೆಯಾಗಿ ಇದರಿಂದ ಸರ್ಕಾರದ ಬೊಕ್ಕಸಕ್ಕೆ ಮುದ್ರಾಂಕ ಶುಲ್ಕ ಮತ್ತು ನೋಂದಣಿ ಶುಲ್ಕ ಸಂಗ್ರಹವಾಗದೆ ನಷ್ಟ ಉಂಟಾಗುತ್ತಿದೆ ಎಂದರು.

ರಾಜ್ಯದ ಬಹುತೇಕ ಗ್ರಾಮಾಂತರ ಪ್ರದೇಶದ ರೈತಾಪಿ ವರ್ಗದ ಜನ ಇ-ಮೇಲ್ ಐಡಿ ಹೊಂದದೇ ಇರುವುದರಿಂದ ಹಾಗೂ ಇ-ಮೇಲ್, ಕಂಪ್ಯೂಟರ್ ಬಳಸುವ ತಿಳುವಳಿಕೆ ಅನುಭವ ಇಲ್ಲದೇ ಇರುವುದರಿಂದ ಸಿಟಿಜನ್ ಲಾಗಿನ್ ನಲ್ಲಿ ತಮಗೆ ಸಂಬಂಧಿಸಿದ ದಸ್ತಾವೇಜುಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಕಷ್ಟ ಸಾಧ್ಯವಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಅಧಿಕೃತ ಪರವಾನಿಗೆ ಪಡೆದ ಸುಮಾರು 24000 ಪತ್ರ ಬರಹಗಾರರು ಕರ್ತವ್ಯ ನಿರ್ವಹಿಸುತ್ತಿದ್ದು. ನಮ್ಮ ಜೊತೆಯಲ್ಲಿ ಸಹಾಯಕರಾಗಿ ಕೆಲಸ ಮಾಡುತ್ತಿರುವವರು. ನಮ್ಮ ಮತ್ತು ಅವರ ಕುಟುಂಬದವರು ಸೇರಿ ಸುಮಾರು 4 ಲಕ್ಷ ಜನ ಮೇಲ್ಪಟ್ಟು ಇದೇ ಉದ್ಯೋಗದ ಮೇಲೆ ಅವಲಂತರಾಗಿರುತ್ತೇವೆ. ನಮ್ಮಗಳಿಗೆ ಈ ಕೆಲಸವನ್ನು ಬಿಟ್ಟು ಬೇರೆ ಯಾವುದೇ ರೀತಿ ಉದ್ಯೋಗ ಬರುವುದಿಲ್ಲ ಹಾಗೂ ಇರುವುದಿಲ್ಲ.

ನಮ್ಮ ನೆರೆ ರಾಜ್ಯವಾದ ಆಂಧ್ರಪ್ರದೇಶ ಮತ್ತು ತೆಲಂಗಾಣದಲ್ಲಿ ಈಗಾಗಲೆ ಪತ್ರಬರಹಗಾರರಿಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ವೆಂಡರ್ ಲಾಗಿನ್ ನೀಡಿದ್ದು ಅದರಂತೆ ಅವರು ಕಾರ್ಯನಿರ್ವಹಿಸುತ್ತಿದ್ದಾರೆ. ಈ ಮನವಿಯೊಂದಿಗೆ ಆಂಧ್ರಪ್ರದೇಶ-ತೆಲಂಗಾಣದಲ್ಲಿ ಸರ್ಕಾರದವರು ನೀಡಿರುವ ವೆಂಡರ್ ಲಾಗಿನ್ ಪೋಟೋ ಪ್ರತಿಯನ್ನು ಸಹ ಲಗತ್ತಿಸಲಾಗಿದೆ ಅಧಿಕೃತ ಪರವಾನಿಗೆ ಪಡೆದ ಪತ್ರ ಬರಹಗಾರರಿಗೆ ಪ್ರತ್ಯೇಕ ಆಜಜಜ ತಿಡುಣಜಡಿ ಐಠರುಟಿ ನೀಡಬೇಕು ಎಂದು ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗುವುದು ಎಂದು ತಿಳಿಸಿದರು.

ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಧರ್ಮರಾಜ್ ವಿ. ಏಕಬೋಟೆ, ಸಹ ಕಾರ್ಯದರ್ಶಿ ಕರಿಬಸಪ್ಪ ಬಳ್ಳಿ, ಈ ಕೃಷ್ಣಮೂರ್ತಿ, ವಿನೋದಗೌಡ ಸಿ ಪಾಟೀಲ್, ಖಜಾಂಚಿ ಡಿ.ಆರ್.ಗಿರಿರಾಜು, ಸಂಘಟನಾ ಕಾರ್ಯದರ್ಶಿ ಶಿವಪುತ್ರಪ್ಪ ಗುಸಪಗಾಯಿ, ಕೆ.ಗಂಗಾಧರ್, ಸಂಚಾಲಕರಾದ ಮಲಕಪ್ಪ ಪಾಟೀಲ್, ಶ್ರೀಮತಿ ರುಕ್ಮಿಣಿ ಚೆಲುವಾದಿ, ಎನ್.ಎಮ್.ಪಂಪಾಪತಿ, ಗುರುನಾಥ್ ಯಾತಗೇರಿ, ಬಿ. ಲಕ್ಷ್ಮಣ , ಜಿ.ಜಿ. ಜಯಕುಮಾರ್, ನಾಗರಾಜ್ .ಟಿ. ನಿರ್ದೇಶಕರುಗಳು ಹಾಗೂ ಜಿ. ಎನ್. ಮಂಜುನಾಥ್, ಎಚ್.ಆರ್ ಸಂಪತ್ ಕುಮಾರ್, ವಿಜಯ ಸಾರಥಿ, ಹಾಗೂ ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಬಂದಿದ್ದ ಪತ್ರ ಬರಹಗಾರರು ಉಪಸ್ಥಿತರಿದ್ದರು.

## ಸ್ವಾತಂತ್ರ್ಯ ಉದ್ಯಾನವನದಲ್ಲಿ ಇಂದಿನಿಂದ ಮೂರು ದಿನಗಳ ಕಾಫಿ ಸಂತೆ




**ಬೆಂಗಳೂರು:** ಮಹಿಳಾ ಕಾಫಿ ಅಲಯನ್ಸ್ ಡಬ್ಲ್ಯೂ ಸಿ ಎಐ ವತಿಯಿಂದ ಶುಕ್ರವಾರದಿಂದ ಸ್ವಾತಂತ್ರ್ಯ ಉದ್ಯಾನವನದಲ್ಲಿ ಮೂರು ದಿನಗಳ ಕಾಲ "ಕಾಫಿ ಸಂತೆ" ನಡೆಯಲಿದೆ.

ಪ್ರೆಸ್ ಕ್ಲಬ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಬ್ಲ್ಯು ಸಿಎಐ ಮಾಜಿ ಸಂಸ್ಥಾಪಕ ಅಧ್ಯಕ್ಷೆ ಸುನಾಲಿನಿ ಮೆನನ್, ಕಾಫಿ ಎಸ್ಟೇಟ್ ಗಳಲ್ಲಿ ಕೆಲಸ ಮಾಡುವ ಮಹಿಳಾ ಕೆಲಸಗಾರರಿಗೆ ಸಹಾಯ ಹಸ್ತ ಚಾಚುವ ಉದ್ದೇಶದಿಂದ ಕಾಫಿ ಸಂತೆ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ, ನೂರಕ್ಕೂ ಅಧಿಕ ಕಾಫಿ ಬೆಳೆಗಾರರು, ಹಂಚಿಕೆದಾರರು,ಕಾಫಿ ಉತ್ಪನ್ನಗಳ ತಯಾರಕರು ಭಾಗವಹಿಸಲಿದ್ದು,ನೂರಕ್ಕೂ ಅಧಿಕ ಮಳಿಗೆಗಳು ಪ್ರದರ್ಶನದಲ್ಲಿರಲಿವೆ,ವಿವಿಧ ರಾಜ್ಯಗಳಿಂದ ಬೆಳೆಗಾರರು, ಉತ್ಪಾದಕರು ಪಾಲ್ಗೋಳಲಿದ್ದಾರೆ ಎಂದು ತಿಳಿಸಿದರು.

23ರಂದು "ಚೀರ್ಸ್ ಟು ಕಾಫಿ" ಮಹಿಳಾ ಕಾಫಿ ಚಾಂಪಿಯನ್ ಷಿಪ್ ಮತ್ತು ರೋಬೋಸ್ಟ್ ಬ್ರಿವೇರ್ಸ್ ಸ್ಕಿಲ್ ಚಾಂಪಿಯನ್ ಷಿಪ್ ಪ್ರಶಸ್ತಿ ನೀಡಲಾಗುತ್ತದೆ ಎಂದು ಹೇಳಿದರು.

# ಮೇ7ರಿಂದ ದಾವಣಗೆರೆಯಲ್ಲಿ ಅಂತರಾಷ್ಟ್ರೀಯ ಕನ್ನಡ ಸಮ್ಮೇಳನ

**ಬೆಂಗಳೂರು:** ದಾವಣಗೆರೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ವಿಶ್ವ ಕನ್ನಡಿಗರ ಟ್ರಸ್ಟ್ ವತಿಯಿಂದ ದಾವಣಗೆರೆ ನಗರದಲ್ಲಿ ಮೇ 7ರಿಂದ 12 ರವರೆಗೆ 6 ದಿನಗಳ ಕಾಲ ಅಂತರಾಷ್ಟ್ರೀಯ ಕನ್ನಡ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ದಾವಣಗೆರೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಬಿ.ವಾಮದೇವಪ್ಪ ತಿಳಿಸಿದರು.

ಪ್ರೆಸ್‌ಕ್ಲಬ್‌ನಲ್ಲಿಂದು ಪತ್ರಿಕಾಗೋಷ್ಟಿಯಲ್ಲಿ ಮಾತನಾಡಿದ ಅವರು, ಆರು ದಿನಗಳೂ ವಿಭಿನ್ನ ಸಮ್ಮೇಳನಗಳನ್ನು ನಡೆಸಲಾಗುತ್ತಿದ್ದು ಮೇ 7ರಂದು ಸಾಹಿತ್ಯ ಸಮ್ಮೇಳನ, ಮೇ 8ರಂದು ಯೂಟ್ಯೂಬರ್ಸ್ ಸಮ್ಮೇಳನ. ಮೇ 9 ರಂದು ಶಿಕ್ಷಣ ಸಮ್ಮೇಳನ, ಮೇ 10 ರಂದು ಸಿನಿ ಸಾಹಿತ್ಯ ಹಾಗೂ ಕಲಾವಿದರ ಸಮ್ಮೇಳನ, ಮೇ 11 ರಂದು ಕೃಷಿ ಸಮ್ಮೇಳನ ಹಾಗೂ ಮೇ 12 ರಂದು ಉದ್ಯೋಗ ಮೇಳ ನಡೆಸಲಾಗುವುದು ಎಂದು ತಿಳಿಸಿದರು.

ಪ್ರತಿ ದಿನವೂ ಮೂರು ವಿಭಿನ್ನ ಸಮ್ಮೇಳನಗಳನ್ನು ನಡೆಸಲು ಮೂರು ವೇದಿಕೆಗಳನ್ನು ಸಿದ್ಧಪಡಿಲಾಗುವುದು. ಬಸವಣ್ಣನವರ ವೇದಿಕೆ, ಸರ್ವಜ್ಞ ವೇದಿಕೆ ಹಾಗೂ ರಾಣಿ ಚೆನ್ನಮ್ಮ ಎಂಬ ಮೂರು ವೇದಿಕೆಗಳಲ್ಲಿ ಆರು ದಿನಗಳ ಕಾಲ ಬೆಳಿಗ್ಗೆ 10.00 ರಿಂದ ರಾತ್ರಿ 10.00 ಗಂಟೆಯವರೆಗೆ ನಿರಂತರ ಕಾರ್ಯಕ್ರಮಗಳು ನಡೆಯಲಿದ್ದು ಹಿರಿಯ ಹಾಗೂ ನವ ಸಾಹಿತಿಗಳನ್ನು ರಾಜ್ಯಾದ್ಯಂತ ಗುರುತಿಸುವ ವಿಶಿಷ್ಟ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಹೊಸ ಸಾಹಿತಿಗಳಿಗೂ ವೇದಿಕೆಯನ್ನು ಒದಗಿಸಿಕೊಡಬೇಕು ಹಾಗೂ ಸಾಹಿತ್ಯ




ಅಭಿರುಚಿ ಬೆಳೆಸಬೇಕು ಎಂಬ ನಿಟ್ಟಿನಲ್ಲಿ ಮೇ 7ರಂದು ನವ ಲೇಖಕರ ಮೇಳ, ಪ್ರಕಾಶಕರ ಮೇಳ ಹಾಗೂ ಸಾಮಾಜಿಕ ಬರಹಗಾರರ ಮೇಳ ಆಯೋಜಿಸಲಾಗಿದೆ. ಎಲ್ಲಾ ರೀತಿಯ ನೊಂದಣಿ ಮಾಡಿಕೊಳ್ಳಲು ಅತ್ಯಂತ ಶೀಘ್ರದಲ್ಲಿ ವೆಬ್‌ಸೈಟ್ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದ ಯಶಸ್ಸಿಗೆ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಗಣಿ ಮತ್ತು ಭೂ ವಿಜ್ಞಾನ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಸಂಪೂರ್ಣ ಸಹಕಾರ ನೀಡಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನೂ ಕಾರ್ಯಕ್ರಮಕ್ಕೆ ಆಹ್ವಾನಿಸಿ ಜಿಲ್ಲಾ ಆಡಳಿತದ ಸಂಪೂರ್ಣ ಸಹಕಾರ ನೀಡುವ ಬಗ್ಗೆ ಭರವಸೆ ನೀಡಿದ್ದಾರೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷರಾದ ನಾಡೋಜ ಡಾ. ಮಹೇಶ್ ಜೋಶಿ ಅವರು ಸಹ ಪರಿಷತ್ತಿನ ವತಿಯಿಂದ ಸಂಪೂರ್ಣ ಸಹಕಾರ ನೀಡಲಿದ್ದಾರೆ.ಸಾಹಿತಿಗಳು ಹಾಗೂ ಸಿನಿಮಾ ನಟರು ಆಗಿರುವ ಗುರುರಾಜ್ ಹೊಸಕೋಟೆ ಅವರು ಮಾತನಾಡಿ ಸಾಹಿತಿಗಳು ಎಂದರೆ ಲೇಖಕರು, ಸಿನಿಮಾಗಳಿಗೆ ಕಥೆ, ಚಿತ್ರಕಥೆ, ಸಂಭಾಷಣೆ, ಹಾಡುಗಳನ್ನು ಬರೆಯುವವರು ಹಾಗೂ ಜಾನಪದ, ಕಲೆ ಹೀಗೆ ಎಲ್ಲಾ ಪ್ರಕಾರದ ಸಾಹಿತಿಗಳನ್ನು ಈ ಸಮ್ಮೇಳನದಲ್ಲಿ ಭಾಗವಹಿಸುವಂತೆ ಮಾಡುವ ಉದ್ದೇಶದಿಂದ ಮೇ 10 ರಂದು ಸಿನಿಮಾ ಸಾಹಿತ್ಯ ಹಾಗೂ ಕಲಾವಿದರ ಸಮ್ಮೇಳನ ನಡೆಸುತ್ತಿದ್ದು ಎಲ್ಲಾ ಸಾಹಿತಿಗಳು ಹಾಗೂ ಕಲಾವಿದರು ಈ ಸಮ್ಮೇಳನದಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿಕೊಂಡರು.

ಭಾರತದ ಹಲವಾರು ರಾಜ್ಯ ಹಾಗೂ ವಿಶ್ವದ ಹಲವು ದೇಶಗಳಲ್ಲಿರುವ ಪ್ರಮುಖ ಕನ್ನಡ ಸಾಹಿತಿಗಳು ಮತ್ತು ಕನ್ನಡ ಸಂಘಟನೆಕಾರರನ್ನು ಈ ಸಮ್ಮೇಳನಕ್ಕೆ ಆಹ್ವಾನಿಸಲಾಗುವುದು. ರಾಜ್ಯದ ಎಲ್ಲಾ ಜನತೆಯೂ ಈ ಸಮ್ಮೇಳನದಲ್ಲಿ ಭಾಗವಹಿಸಿ ಈ ಸಮ್ಮೇಳನವನ್ನು ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ವಿಶ್ವ ಕನ್ನಡಿಗರ ಟ್ರಸ್ಟ್‌ನ ಕಾರ್ಯದರ್ಶಿ ಲೋಕೇಶ್ ಮಾತನಾಡಿ ಎಲ್ಲಾ ರಂಗದ ಸಾಹಿತಿಗಳು ಹಾಗೂ ಕಲಾವಿದರು ಭಾಗವಹಿಸಲು ಅನುಕೂಲವಾಗುವಂತೆ ವೆಬ್‌ಸೈಟ್‌ನಲ್ಲಿ ನೊಂದಣಿ ಮಾಡಿಕೊಳ್ಳಲು ಅತ್ಯಂತ ಶೀಘ್ರದಲ್ಲಿಯೇ ವೆಬ್ ಸೈಟ್ ಬಿಡುಗಡೆ ಮಾಡಲಾಗುವುದು. ರಾಜ್ಯದ ಎಲ್ಲಾ ಸಾಹಿತಿಗಳು, ಕಲಾವಿದರು, ಪತ್ರಕರ್ತರು, ಕನ್ನಡಾಭಿಮಾನಿಗಳು ಸಂಪೂರ್ಣ ಸಹಕಾರ ನೀಡಿ ಈ ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿಕೊಂಡರು.

ಅಂತರಾಷ್ಟ್ರೀಯ ಕನ್ನಡ ಸಮ್ಮೇಳನದ ಸಂಚಾಲಕರಾದ ಆನಂದಗೌಡ ಅವರು ಆರು ದಿನಗಳು ನಡೆಯಲಿರುವ ಈ ಸಮ್ಮೇಳನದಲ್ಲಿ ಪ್ರತಿಯೊಬ್ಬ ಕನ್ನಡಿಗರೂ ಪಾಲ್ಗೊಂಡು ಹೊಸ ಇತಿಹಾಸ ಬರೆಯಬೇಕು. ಸಮ್ಮೇಳನದ ಜೊತೆಗೆ ಅಂತರಾಷ್ಟ್ರೀಯ ವಸ್ತು ಪ್ರದರ್ಶನವೂ ನಡೆಯಲಿದ್ದು ಇದೊಂದು ವಿಶಿಷ್ಟ ಕಾರ್ಯಕ್ರಮವಾಗಲಿದೆ ಎಂದು ತಿಳಿಸಿದರು. ಚಲನಚಿತ್ರ ನಿರ್ದೇಶಕರಾದ ಶಿವರಾಜ್ ಹೊಸಕೆರೆಯವರು ರಾಜ್ಯದಲ್ಲಿಯೇ ಇದೊಂದು ವಿಶಿಷ್ಟ ಕಾರ್ಯಕ್ರಮವಾಗಲಿದ್ದು ಚಲನಚಿತ್ರ ಹಾಗೂ ರಂಗಭೂಮಿಯ ಎಲ್ಲಾ ಸಾಹಿತಿಗಳು ಹಾಗೂ ಕಲಾವಿದರು ಭಾಗವಹಿಸಿ ಈ ಕಾರ್ಯಕ್ರಮವನ್ನು ಅತ್ಯಂತ ಅರ್ಥಪೂರ್ಣ ಕಾರ್ಯಕ್ರಮವನ್ನಾಗಿ ಮಾಡುವುದು ಎಲ್ಲರ ಜವಾಬ್ದಾರಿ ಎಂದು ತಿಳಿಸಿದರು.

ಗುರುರಾಜ್ ಹೊಸಕೋಟೆ ಮತ್ತಿತರರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಹನಿ ಟ್ರ್ಯಾಪ್ ಹಿಂದಿರುವ ಪ್ರಮುಖ ಮಂತ್ರಿ ಯಾರೆಂಬುದು ಪತ್ತೆಯಾಗಲಿ

**ಬೆಂಗಳೂರು:** ವಿಧಾನಸಭೆಯಲ್ಲಿ ನಿನ್ನೆ ರಾಜ್ಯ ಸರ್ಕಾರದ ಸಹಕಾರ ಇಲಾಖೆಯ ಹಿರಿಯ ಸಚಿವ ಕೆ. ಎನ್. ರಾಜಣ್ಣ ತಮ್ಮ ಮೇಲೆ ಹನಿ ಟ್ರ್ಯಾಪ್ ಮಾಡುವ ಸಂಚು ನಡೆಯುತ್ತಿದ್ದು ಇದೇ ರೀತಿ 48 ರಾಜಕೀಯ ವ್ಯಕ್ತಿಗಳ ವಿರುದ್ಧ ಷಡ್ಯಂತ್ರ ರಚಿಸುತ್ತಿದ್ದಾರೆ ಎಂದು ವಿಧಾನಸಭೆಯಲ್ಲಿ ಪ್ರಮುಖ ಮಂತ್ರಿ ಒಬ್ಬರ ವಿರುದ್ಧ ಆರೋಪ ಮಾಡಿದ್ದಾರೆ. ಬಿಜೆಪಿಯ ಪ್ರಮುಖ ಶಾಸಕ ಬಸವರಾಜ ಪಾಟೀಲ್ ಯತ್ನಾಳ್, ಮುನಿರತ್ನಂ ಸೇರಿದಂತೆ ಅನೇಕ ಶಾಸಕರುಗಳು ಈ ಬಗ್ಗೆ ಚರ್ಚೆಯು ಸಹ ನಡೆದಿದೆ. ಇಂತಹ ಗಂಭೀರ ಆರೋಪದ ಹಿಂದಿರುವ ಪ್ರಮುಖ ಮಂತ್ರಿ ಯಾರೆಂಬುದನ್ನು ಕೂಡಲೇ ಸರ್ಕಾರ ಸೂಕ್ತ ಪ್ರಾಧಿಕಾರಗಳಿಂದ ಪತ್ತೆ ಹಚ್ಚಿ ಕಠಿಣ ಶಿಕ್ಷೆಗೆ ಒಳಪಡಿಸಬೇಕೆಂದು ಆಮ್ ಆದ್ಮಿ ಪಕ್ಷದ ರಾಜ್ಯ ಕಾರ್ಯಾಧ್ಯಕ್ಷ ಸೀತಾರಾಮ್ ಗುಂಡಪ್ಪ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಅಗ್ರಹಿಸಿದರು.



ತನ್ನ ರಾಜಕೀಯ ಉದ್ದೇಶಕ್ಕಾಗಿ ಇತರರನ್ನು ಬಲಿಕೊಡುವಂತಹ ಕೆಟ್ಟ ಪ್ರವೃತ್ತಿ ರಾಜ್ಯದಲ್ಲಿ ಅನೇಕ ವರ್ಷಗಳಿಂದ ಮುಂದುವರಿದುಕೊಂಡು ಬರುತ್ತಲೇ ಇದೆ. ಈಗಲಾದರೂ ಈ ಅನಿಷ್ಟ ರಾಜಕೀಯ ಷಡ್ಯಂತ್ರ ಗಳಿಗೆ ಬಲಿ ಹಾಕಲು ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡಲೇ ಕ್ರಮ ತೆಗೆದುಕೊಳ್ಳಬೇಕು. ಹೈಕೋರ್ಟ್ ಅಥವಾ ಸುಪ್ರೀಂ ಕೋರ್ಟಿನ ಹಾಲಿ ನ್ಯಾಯಾಧೀಶರುಗಳ ಆಯೋಗವನ್ನು ರಚನೆ ಮಾಡಿ ಈ ಷಡ್ಯಂತ್ರ ಗಳ ಹಿಂದಿರುವ ಪ್ರಮುಖ ಮಂತ್ರಿ ಹಾಗೂ ಕಿಂಗ್ ಪಿನ್ ಯಾರೆಂಬುದನ್ನು ಜನತೆಗೆ ಮತ್ತೆ ಹಚ್ಚಿ ನೀಡಬೇಕು ಮತ್ತು ಇವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕೆಂದು ಸೀತಾರಾಮ್ ಗುಂಡಪ್ಪ ಅಗ್ರಹಿಸಿದರು.

ವಿಧಾನಸಭೆಯಲ್ಲಿ ಬಜೆಟ್ ಮೇಲಿನ ಚರ್ಚೆಯು ಸಂಪೂರ್ಣವಾಗಿ ಸರ್ಕಾರದ ಬೆಲೆ ಏರಿಕೆ ನೀತಿ ಹಾಗೂ ವೈಫಲ್ಯ ಗಳು ಬಟಾ ಬಯಲಾಗಿದೆ. ಜನತೆಯ ಮುಂದೆ ತಮ್ಮ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ಸದನದ ಕಡೆಯ ದಿವಸ ಈ ರೀತಿಯ ಬಾಂಬ್ ಹಾಕಿ ಜನತೆಯ ಗಮನವನ್ನು ಬೇರೆಡೆಗೆ ಸೆಳೆಯುವ ದುರುದ್ದೇಶವೂ ಸಹ ಕೂಡಿರಬಹುದು ಎಂದು ಸೀತಾರಾಮ್ ಗುಂಡಪ್ಪ ಅನುಮಾನ ವ್ಯಕ್ತಪಡಿಸಿದರು.

## ಮಹಿಳಾ ಸಾಧಕರಿಗೆ ಬೆಳವಾಡಿ ಮಲ್ಲಮ್ಮ ಪ್ರಶಸ್ತಿ ಪ್ರಧಾನ



**ಬೆಂಗಳೂರು:** ಕರುನಾಡ ವಿಜಯ ಸೇನೆವತಿಯಿಂದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಮಹಿಳಾ ಸಾಧಕರಿಗೆ ಬೆಳವಾಡಿ ಮಲ್ಲಮ್ಮ ಪ್ರಶಸ್ತಿ ನೀಡಿ ಗೌರವಿಸಲಾಯಿತು.


ಜಾನಪದ ಗಾಯಕಿ ಸವಿತಕ್ಕ ಸೇರಿದಂತೆ ವಿವಿಧ ಸಾಧಕ ಮಹಿಳೆಯರನ್ನು ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಸುಮಂಗಲಿ ಸೇವಾಶ್ರಮದ ಅಧ್ಯಕ್ಷೆ ಎಸ್.ಜಿ.ಸುಶೀಲಮ್ಮ,ಕರುನಾಡ ವಿಜಯ ಸೇನೆ ರಾಜ್ಯ ಘಟಕದ ಅಧ್ಯಕ್ಷ ಎಚ್. ಎನ್.ದೀಪಕ್,ಮಾಜಿ ಸಚಿವೆ ರಾಣಿ ಸತೀಶ್,ವಿಜಯ ಸೇನೆ ಮಹಿಳಾ ಘಟಕದ ಅಧ್ಯಕ್ಷೆ ಕೆ.ಗಂಗರಾಜಮ್ಮ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಸ್ಮಾರ್ಟ್ ಮೀಟರ್ ಟೆಂಡರ್‌ನಲ್ಲಿ ಸಾವಿರಾರು ಕೋಟಿ ಅವ್ಯವಹಾರ

**ಬೆಂಗಳೂರು:** ಸ್ಮಾರ್ಟ್ ಮೀಟರ್ ಟೆಂಡರ್‌ನಲ್ಲಿ ಸುಮಾರು 7,500 ಕೋಟಿ ರೂ. ಅವ್ಯವಹಾರವಾಗಿದೆ ಎಂದು ಅಶ್ವತ್ಥ್ ನಾರಾಯಣ್ ಗಂಭೀರ ಆರೋಪ ಮಾಡಿದ್ದಾರೆ. ಈ ಆರೋಪ ಅಲ್ಲಗಳೆದ ಇಂಧನ ಸಚಿವ ಕೆ.ಜೆ.ಜಾರ್ಜ್, ತನಿಖೆ ನಡೆಸುತ್ತೇನೆ ಎಂದು ತಿಳಿಸಿದರು.

ವಿಧಾನಸಭೆಯಲ್ಲಿ ಬಜೆಟ್ ಮೇಲಿನ ಚರ್ಚೆ ವೇಳೆ ಮಾತನಾಡುತ್ತಾ ವಿಷಯ ಪ್ರಸ್ತಾಪಿಸಿದ ಅಶ್ವತ್ಥ್ ನಾರಾಯಣ್, ಎಸ್ಕಾಂಗಳಲ್ಲಿ ವಾರ್ಷಿಕ ಒಂಭತ್ತು ಲಕ್ಷ ಸ್ಮಾರ್ಟ್ ಮೀಟರ್ ಅಳವಡಿಸುವ ಗುರಿ ಇಟ್ಕೊಂಡಿದ್ದಾರೆ. ಸ್ಮಾರ್ಟ್ ಮೀಟರ್ ಅಳವಡಿಕೆ ಮುಖ್ಯ ಉದ್ದೇಶ ವಿದ್ಯುತ್ ಪ್ರಸರಣೆಯ ನಷ್ಟದ ದಾಖಲೀಕರಣ ಮಾಡಲು ಮನೆಗಳಿಗೆ ಸ್ಮಾರ್ಟ್ ಮೀಟರ್ ಕಡ್ಡಾಯ ಮಾಡಿದ್ದಾರೆ. ಮೊದಲು ಹಾಲಿ ಗ್ರಾಹಕರ ಮನೆಗಳಲ್ಲಿ ಅಳವಡಿಕೆ ಮಾಡಬೇಕು ನಂತರ ಹೊಸ ಗ್ರಾಹಕರಿಗೆ ಕಡ್ಡಾಯ ಮಾಡಬೇಕು. ಸರ್ಕಾರ ತರಾತುರಿಯಲ್ಲಿ ನಿಯಮ ಮೀರಿ ಸ್ಮಾರ್ಟ್ ಮೀಟರ್ ಕಡ್ಡಾಯ ಮಾಡಿದೆ. ಕೆಇಆರ್‌ಸಿಯಲ್ಲಿ ಇದಕ್ಕೆ ನಿಯಮಗಳೇ ಇಲ್ಲ ಎಂದರು.



ಸ್ಮಾರ್ಟ್ ಮೀಟರ್ ಅಳವಡಿಕೆಯಲ್ಲಿ ಎಲ್ಲಾ ನಿಯಮಗಳ ಉಲ್ಲಂಘನೆ ಮಾಡಲಾಗಿದೆ. ಏಳೂವರೆ ಸಾವಿರ ಕೋಟಿಯ ಅಕ್ರಮ ಇದಾಗಿದೆ. ನಾಳೆ ಬೆಳಗ್ಗೆ ಸಚಿವರು ಉತ್ತರ ಕೊಡಲಿ. ನಂತರ ಸದನ ಸಮಿತಿ ಮಾಡಲಿ. ಈ ಬಗ್ಗೆ ತನಿಖೆಯಾಗಲಿ ಎಂದು ಅಶ್ವಥ್ ನಾರಾಯಣ್ ಆಗ್ರಹಿಸಿದರು.

ಸ್ಮಾರ್ಟ್ ಮೀಟರ್ ಕಡ್ಡಾಯ ಮಾಡುವಂತಿಲ್ಲ. ಆದರೆ ಸರ್ಕಾರ ಕಡ್ಡಾಯ ಮಾಡಿದೆ. ಮೀಟರ್ ದರ ನಿಗದಿಯಲ್ಲೂ ವ್ಯತ್ಯಾಸವಿದೆ. ಸಿಂಗಲ್ ಪೇಸ್ ಸ್ಮಾರ್ಟ್ ಮೀಟರ್‌ಗೆ 4,998 ರೂ. ದರ ನಿಗದಿ ಮಾಡಲಾಗಿದೆ. ತ್ರೀ ಪೇಸ್ ಸ್ಮಾರ್ಟ್ ಮೀಟರ್‌ಗೆ 8,889 ರೂ. ನಿಗದಿ ಮಾಡಲಾಗಿದೆ. ಸಾಫ್ಟ್‌ವೇರ್ ತ್ರಿಪೇಸ್‌ಗೆ 18,160 ರೂ. ನಿಗದಿ ಮಾಡಲಾಗಿದೆ ಎಂದು ಆರೋಪಿಸಿದರು.

ಎಲೆಕ್ಟ್ರಿಕ್ ಪೋಲ್ ತಯಾರು ಮಾಡುವವನಿಗೆ ಟೆಂಡರ್ ನೀಡಲಾಗಿದೆ. ರಾಜಶ್ರೀ ಎಂಬ ಸಂಸ್ಥೆಗೆ ಗುತ್ತಿಗೆ ನೀಡಲಾಗಿದೆ. ಮೂರು ಎಸ್ಕಾಂಗಳ ವ್ಯಾಪ್ತಿಯಲ್ಲಿ ರಾಜಶ್ರೀ ಪತ್ರ ಕೊಟ್ಟರೆ ಮಾತ್ರ ಟೆಂಡರ್ ಕೊಡಬೇಕು. ಉತ್ಪಾದಕರಿಂದಲೇ ಟೆಂಡರ್ ಕರೆದು ಏಕೆ ಸ್ಮಾರ್ಟ್ ಮೀಟರ್ ಸರಬರಾಜು ಮಾಡಬಾರದು?. ಉತ್ತರ ಪ್ರದೇಶ ಸರ್ಕಾರ ಬ್ಲ್ಯಾಕ್ ಲಿಸ್ಟ್ ಮಾಡಿದ ಸಂಸ್ಥೆಗೆ ಸ್ಮಾರ್ಟ್ ಮೀಟರ್ ಟೆಂಡರ್ ಕೊಡಲಾಗಿದೆ. ಸದನ ಸಮಿತಿ ಮಾಡಿ ತನಿಖೆ ಮಾಡಲಿ. ಇದು 7,500 ಕೋಟಿ ರೂ. ಅವ್ಯವಹಾರವಾಗಿದೆ ಎಂದು ದೂರಿದರು.

ಈ ಬಗ್ಗೆ ಮಾಹಿತಿ ಪಡೆದು ನಾಳೆ ನಾನು ಸದನದಲ್ಲಿ ಉತ್ತರ ಕೊಡುತ್ತೇನೆ. ಇದರಲ್ಲಿ ಏನಾದರು ತಪ್ಪಾಗಿದ್ದರೆ ನಾನು ತನಿಖೆಗೆ ಆದೇಶ ನೀಡುತ್ತೇನೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು.

# ನೋಟರಿಗಳ ನೇಮಕಾತಿಯಲ್ಲಿ ಮೀಸಲಾತಿ ತಿದ್ದುಪಡಿ ಮಸೂದೆ ಅಂಗೀಕಾರ

ಬೆಂಗಳೂರು: ರಾಜ್ಯ ನೋಟರಿಗಳ ನೇಮಕಾತಿಯಲ್ಲಿ ಮೀಸಲಾತಿ ಕಲ್ಪಿಸುವ ನೋಟರಿಗಳ (ಕರ್ನಾಟಕ ತಿದ್ದುಪಡಿ) ವಿಧೇಯಕ, 2025 ವಿಧಾನಸಭೆಯಲ್ಲಿ ಅಂಗೀಕಾರಗೊಂಡಿದೆ.. ಕರ್ನಾಟಕ ರಾಜ್ಯಕ್ಕೆ ಅನ್ವಯವಾಗುವಂತೆ ನೋಟರಿಗಳ ನೇಮಕಾತಿಗಳಲ್ಲಿ ಅನುಸೂಚಿತ ಜಾತಿಗಳು, ಅನುಸೂಚಿತ ಪಂಗಡಗಳು, ಇತರ ಹಿಂದುಳಿದ ವರ್ಗಗಳಿಗೆ ಸೇರಿದ ಅರ್ಜಿದಾರರಿಗೆ ಮೀಸಲಾತಿಗಾಗಿ ಹಾಗೂ ಮಹಿಳೆಯರಿಗೆ ಮತ್ತು ದೈಹಿಕ ವಿಕಲಚೇತನ ವ್ಯಕ್ತಿಗಳಿಗೆ ಸಮತಲ ಮೀಸಲಾತಿಗಾಗಿ ಉಪಬಂಧಗಳನ್ನು ಕಲ್ಪಿಸಲು, ನೋಟರಿಗಳ ಅಧಿನಿಯಮ, 1952 (1952ರ ಕೇಂದ್ರ ಅಧಿನಿಯಮ 53)ನ್ನು ತಿದ್ದುಪಡಿ ವಿಧೇಯಕ ಇದಾಗಿದೆ.

ನೋಟರಿಗಳನ್ನು ನೇಮಕ ಮಾಡುವಾಗ ರಾಜ್ಯ ಸರ್ಕಾರ, ಅನುಸೂಚಿತ ಜಾತಿಗಳು, ಅನುಸೂಚಿತ ಪಂಗಡಗಳು, ಇತರ ಹಿಂದುಳಿದ ವರ್ಗಗಳಿಗೆ ಸೇರಿದ ಅರ್ಜಿದಾರರಿಗೆ ಮೀಸಲಾತಿಯನ್ನು ಹಾಗೂ ಮಹಿಳೆಯರಿಗೆ ಮತ್ತು ದೈಹಿಕ ವಿಕಲಚೇತನ ವ್ಯಕ್ತಿಗಳಿಗೆ ಸಮತಲ ಮೀಸಲಾತಿಯನ್ನು ರಾಜ್ಯ ಸರ್ಕಾರ ಕಾಲಕಾಲಕ್ಕೆ ಒದಗಿಸಬಹುದಾಗಿದೆ. ಒಂದು ವೇಳೆ ಪ್ರವರ್ಗಗಳಿಂದ ಅಭ್ಯರ್ಥಿಗಳು ಲಭ್ಯವಿರದಿದ್ದಲ್ಲಿ ಆಗ ಅಂಥ ಹುದ್ದೆಗಳನ್ನು ಸಾಮಾನ್ಯ ಪ್ರವರ್ಗಕ್ಕೆ ಸೇರಿದ ವ್ಯಕ್ತಿಗಳಿಂದ ತುಂಬಬಹುದಾಗಿದೆ.

ಆ ಮೂಲಕ ರಾಜ್ಯದಲ್ಲಿರುವ ನೋಟರಿಗಳ ನೇಮಕಾತಿಯಲ್ಲಿ ಎಸ್‌ಸಿ, ಎಸ್‌ಟಿ ಹಾಗೂ ಒಬಿಸಿ ವರ್ಗಗಳಿಗೆ ಮೀಸಲಾತಿ ಒದಗಿಸಲಾಗುವುದು. ಇದರ ಜತೆಗೆ ಮಹಿಳೆಯರು ಹಾಗೂ ವಿಕಲಚೇತನರಿಗೂ ಸಮತಳ ಮೀಸಲಾತಿ ಆಧಾರದಲ್ಲಿ ನೋಟರಿ ಹುದ್ದೆಗಳಿಗೆ ನೇಮಕಾತಿಗೆ ಅವಕಾಶ ಸಿಗಲಿದೆ.

# ದೊಡ್ಡ ಮೊತ್ತದ ಹಣ ಪತ್ತೆ: ದೆಹಲಿ ಹೈಕೋರ್ಟ್ ನ್ಯಾಯಮೂರ್ತಿ ವರ್ಮಾ ವರ್ಗಾವಣೆ

**ನವದೆಹಲಿ:** ಹೈಕೋರ್ಟ್ ನ್ಯಾಯಾಧೀಶರೊಬ್ಬರ ಬಂಗಲೆಯಲ್ಲಿ ದೊಡ್ಡ ಪ್ರಮಾಣದ ಹಣ ಪತ್ತೆಯಾದ ನಂತರ ಅವರನ್ನು ಸುಪ್ರೀಂ ಕೋರ್ಟ್ ಕೊಲಿಜಿಯಂ ಶಿಫಾರಸಿನ ಮೇರೆಗೆ ಬೇರೆಡೆ ವರ್ಗಾವಣೆ ಮಾಡಲಾಗಿದೆ.

ನ್ಯಾ.ಯಶವಂತ್ ವರ್ಮಾ ಅವರನ್ನು ಅವರ ಮಾತೃ ನ್ಯಾಯಾಲಯವಾದ ಅಲಹಾಬಾದ್ ಹೈಕೋರ್ಟ್‌ಗೆ ವಾಪಸ್ ಕಳುಹಿಸಲಾಗಿದೆ.

'ಬಂಗಲೆಯಲ್ಲಿ ಲೆಕ್ಕವಿಲ್ಲದ ನಗದು ಪತ್ತೆ': ನ್ಯಾಯಮೂರ್ತಿ ವರ್ಮಾ ಅವರು ನಗರದಲ್ಲಿ ಇಲ್ಲದಿದ್ದಾಗ ಅವರ ಅಧಿಕೃತ ನಿವಾಸದಲ್ಲಿ ಬೆಂಕಿ ಕಾಣಿಸಿಕೊಂಡಿತ್ತು ಎಂದು ಮೂಲಗಳು ತಿಳಿಸಿವೆ. ನಂತರ ಅವರ ಕುಟುಂಬ ಸದಸ್ಯರು ಅಗ್ನಿಶಾಮಕ ದಳ ಮತ್ತು ಪೊಲೀಸರಿಗೆ ಮಾಹಿತಿ ನೀಡಿದ್ದರು. ಬೆಂಕಿಯನ್ನು ನಂದಿಸಿದ ನಂತರ, ಅಗ್ನಿಶಾಮಕ ದಳದ ಸಿಬ್ಬಂದಿಯು ಬಂಗಲೆಯ ವಿವಿಧ ಕೋಣೆಗಳಲ್ಲಿ ಭಾರಿ ಪ್ರಮಾಣದ ಹಣವನ್ನು ಪತ್ತೆ ಮಾಡಿದ್ದಾರೆ. ಬಂಗಲೆಯಲ್ಲಿ ಲೆಕ್ಕವಿಲ್ಲದ ನಗದು ಪತ್ತೆಯಾಗಿದೆ ಎಂದು ಘಟನಾ ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಸುಪ್ರೀಂ ಕೋರ್ಟ್ ತ್ವರಿತ ಕ್ರಮ: ಈ ಬಗ್ಗೆ ಮಾಹಿತಿ ಪಡೆದ ಭಾರತದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು ಕೊಲಿಜಿಯಂ ಸಭೆ ನಡೆಸಿದರು. ನ್ಯಾಯಮೂರ್ತಿ ವರ್ಮಾ ಅವರನ್ನು ಅಲಹಾಬಾದ್ ಹೈಕೋರ್ಟ್‌ಗೆ ವರ್ಗಾಯಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಧರಿಸಲಾಯಿತು. ವರ್ಮಾ ಅವರು ಈ ಹಿಂದೆ ಅಕ್ಟೋಬರ್ 2021ರವರೆಗೆ ಅಲಹಾಬಾದ್ ಹೈಕೋರ್ಟ್‌ನಲ್ಲಿ ಸೇವೆ ಸಲ್ಲಿಸಿದ್ದರು.

ನ್ಯಾ.ವರ್ಮಾ ವಿರುದ್ಧ ತನಿಖೆಯನ್ನು ಪ್ರಾರಂಭಿಸುವ ಬಗ್ಗೆ ಮತ್ತು ಅವರ ವಿರುದ್ಧ ವಾಗ್ದಂಡನೆ ಪ್ರಕ್ರಿಯೆಯನ್ನು ಪ್ರಾರಂಭಿಸುವ ಬಗ್ಗೆಯೂ ಚರ್ಚೆಗಳು ನಡೆಯುತ್ತಿವೆ ಎಂದು ಮೂಲಗಳು ತಿಳಿಸಿವೆ.

# ಕೆಎಎಸ್ ಪೂರ್ವಭಾವಿ ಮರು ಪರೀಕ್ಷೆಗೆ ನಕಾರ

**ಬೆಂಗಳೂರು:** ಗೆಜೆಟೆಡ್ ಪ್ರೊಬೇಷನರಿ ಅಧಿಕಾರಿಗಳ (ಕೆಎಎಸ್) 384 ಗ್ರೂಪ್ ಎ ಮತ್ತು ಬಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಪೂರ್ವಭಾವಿ ಮರುಪರೀಕ್ಷೆಗೆ ಆದೇಶ ನೀಡಲು ನಿರಾಕರಿಸಿದ ಕರ್ನಾಟಕ ಆಡಳಿತ ನ್ಯಾಯಮಂಡಳಿ(ಕೆಎಟಿ), ಪ್ರಶ್ನೆ ಪತ್ರಿಕೆಯ ಅನುವಾದದಲ್ಲಿ ಆಗಿರುವ ಲೋಪಗಳ ಬಗ್ಗೆ ತಜ್ಞರ ಸಮಿತಿ ಮರುಪರಿಶೀಲಿಸಿ ತೀರ್ಮಾನಿಸಬಹುದು ಎಂದು ತಿಳಿಸಿದೆ.

ಈ ಆದೇಶದಿಂದಾಗಿ ಕೆಎಎಸ್ ಮುಖ್ಯ ಪರೀಕ್ಷಾ ಪ್ರಕ್ರಿಯೆಯನ್ನು ಮುಂದುವರಿಸಲು ಕರ್ನಾಟಕ ಲೋಕಸೇವಾ ಆಯೋಗ(ಕೆಪಿಎಸ್ಸಿ)ದ ಹಾದಿ ಸುಗಮವಾಗಿದ್ದು, ನಿಗದಿಯಂತೆ ಇದೇ 28ರಿಂದ ಮುಖ್ಯ ಪರೀಕ್ಷೆಗಳು ನಡೆಯಲಿವೆ.

ಪವಿತ್ರಾ ಮತ್ತಿತರ ಅಭ್ಯರ್ಥಿಗಳು ಸಲ್ಲಿಸಿದ್ದ ಅರ್ಜಿಗಳ ಕುರಿತು ವಾದ-ಪ್ರತಿವಾದ ಆಲಿಸಿ ಕಾಯ್ದಿರಿಸಿದ್ದ ತೀರ್ಪನ್ನು ನ್ಯಾಯಾಂಗ ಸದಸ್ಯ ಎಸ್.ವೈ.ವಟವಟಿ ಮತ್ತು ಆಡಳಿತ ಸದಸ್ಯೆ ಡಾ.ಅಮಿತಾ ಪ್ರಸಾದ್ ಅವರಿದ್ದ ದ್ವಿಸದಸ್ಯ ಪೀಠ ತಿಳಿಸಿದೆ.

ಅಲ್ಲದೇ, ಆಯೋಗ ಸಲ್ಲಿಸಿರುವ ಎಲ್ಲಾ ಅಂಶಗಳನ್ನು ಪರಿಶೀಲಿಸಿದ ಬಳಿಕ ಈಗಾಗಲೇ ಒಮ್ಮೆ ಪರೀಕ್ಷೆ ರದ್ದುಗೊಳಿಸಿ, ಮರು ಪೂರ್ವಭಾವಿ ಪರೀಕ್ಷೆ ನಡೆಸಲಾಗಿದೆ. ಈ ಹಂತದಲ್ಲಿ ಪೂರ್ವಭಾವಿ ಪರೀಕ್ಷೆಗೆ ಆದೇಶಿಸಲು ಸಾಧ್ಯವಿಲ್ಲ. ಅಲ್ಲದೆ, ಪ್ರಶ್ನೆಪತ್ರಿಕೆಯನ್ನು ಇಂಗ್ಲಿಷ್‌ನಿಂದ ಕನ್ನಡ ಅನುವಾದ ಮಾಡುವಲ್ಲಿ ಲೋಪವಿರುವುದು ನಿಜ. ಅದಕ್ಕೆ ಸಂಬಂಧಿಸಿದಂತೆ ತಜ್ಞರ ಸಮಿತಿ ಕೃಪಾಂಕ ನೀಡಿದೆ. ಕನ್ನಡ ಅನುವಾದದಲ್ಲಿ ಗೊಂದಲವಿದ್ದರೆ ಇಂಗ್ಲಿಷ್ ಪ್ರಶ್ನೆ ಪರಿಗಣಿಸಲು ಸೂಚನೆಯಿದೆ. ಅರ್ಜಿ ಸಂಖ್ಯೆ 285ರಿಂದ 308/2025ಗಳಲ್ಲಿಅನುವಾದದ ಕೆಲ ಹೊಸ ಲೋಪಗಳನ್ನು ಗುರುತಿಸಿದ್ದಾರೆ. ಆ ಬಗ್ಗೆ ಮಾತ್ರ ತಜ್ಞರ ಸಮಿತಿ ಮರುಪರಿಶೀಲಿಸಿ ತೀರ್ಮಾನಿಸಬಹುದು. ಒಂದು ವಾರದಲ್ಲಿಈ ಬಗ್ಗೆ ಕ್ರಮ ಕೈಗೊಳ್ಳಲು ಕೆಪಿಎಸ್ಸಿಗೆ ಸೂಚಿಸಿ ಅರ್ಜಿ ಇತ್ಯರ್ಥಪಡಿಸಿದೆ.

ಪ್ರಕರಣದ ಹಿನ್ನೆಲೆ: ಕೆಪಿಎಸ್ಸಿ 2024ರ ಆ.27ಕ್ಕೆ ಪೂರ್ವಭಾವಿ ಪರೀಕ್ಷೆ ನಡೆಸಿತ್ತು. ಆಗ ಪ್ರಶ್ನೆಪತ್ರಿಕೆಯನ್ನು ಆಂಗ್ಲಭಾಷೆಗೆ ಅನುವಾದ ಮಾಡುವಾಗ ಭಾರಿ ಲೋಪಗಳಾದ ಹಿನ್ನೆಲೆಯಲ್ಲಿ ಪರೀಕ್ಷೆಯನ್ನು ರದ್ದುಗೊಳಿಸಲಾಗಿತ್ತು. ನಂತರ ಕೆಪಿಎಸ್ಸಿ 2024ರ ಡಿ.29ಕ್ಕೆ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳಿಗೆ 553 ಪರೀಕ್ಷಾ ಕೇಂದ್ರಗಳಲ್ಲಿ ಪೂರ್ವಭಾವಿ ಮರು ಪರೀಕ್ಷೆ ನಡೆಸಿತ್ತು. 2.10 ಲಕ್ಷ ಅಭ್ಯರ್ಥಿಗಳು ನೋಂದಾಯಿಸಿದ್ದರು. ಈ ಪೈಕಿ 1.05 ಲಕ್ಷ (ಶೇ.47.7) ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಆ ಪರೀಕ್ಷೆಯಲ್ಲೂ ಸುಮಾರು 59 ಪ್ರಶ್ನೆಗಳ ಅನುವಾದದಲ್ಲಿ ದೋಷಗಳಾಗಿವೆ. ಹಾಗಾಗಿ, ಪರೀಕ್ಷೆ ರದ್ದುಗೊಳಿಸಬೇಕು ಎಂದು ಅಭ್ಯರ್ಥಿಗಳು ಕೆಎಟಿ ಮೊರೆ ಹೋಗಿದ್ದರು. ಆಯೋಗ ಫೆ.10ರಂದು ಪೂರ್ವಭಾವಿ ಪರೀಕ್ಷಾ ಫಲಿತಾಂಶವನ್ನು ಪ್ರಕಟಿಸಿ, 1:15ರ ಅನುಪಾತದಲ್ಲಿಅಭ್ಯರ್ಥಿಗಳನ್ನು ಮುಖ್ಯ ಪರೀಕ್ಷೆಗೆ ಆಯ್ಕೆ ಮಾಡಿತ್ತು. ಇದನ್ನು ಪ್ರಶ್ನಿಸಿ ಕೆಎಟಿಗೆ ಅರ್ಜಿ ಸಲ್ಲಿಸಲಾಗಿತ್ತು.

# ಧೈರ್ಯವಾಗಿ ಪರೀಕ್ಷೆ ಎದುರಿಸಲು ವಿದ್ಯಾರ್ಥಿಗಳಿಗೆ ಜಿಲ್ಲಾಧಿಕಾರಿ ಹಾರೈಕೆ

**ರಾಮನಗರ:** ಮಾ.21ರ ಶುಕ್ರವಾರದಿಂದ ಎಸ್ಎಸ್ಎಲ್ಸಿ ಪರೀಕ್ಷೆಗಳು ಪ್ರಾರಂಭಗೊಳ್ಳಲಿದ್ದು, ಜಿಲ್ಲೆಯ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಅಗತ್ಯ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದೆ ಈ ಬಾರಿ ಜಿಲ್ಲೆಯಲ್ಲಿ ಒಟ್ಟು 13,804 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದು, ಯಾವುದೇ ಭಯವಿಲ್ಲದೇ, ಧೈರ್ಯವಾಗಿ ಪರೀಕ್ಷೆ ಬರೆಯುವಂತೆ ಜಿಲ್ಲಾಧಿಕಾರಿಗಳಾದ ಯಶವಂತ್ ವಿ. ಗುರುಕರ್ ಅವರು ಶುಭ ಹಾರೈಸಿದ್ದಾರೆ.

ಈ ಕುರಿತಂತೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು ಚನ್ನಪಟ್ಟಣ–3,258, ಕನಕಪುರ–4,254, ಮಾಗಡಿ–2,621 ಮತ್ತು ರಾಮನಗರ–3,621 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ, ಮಾ. 21ರಂದು ಪ್ರಥಮ ಭಾಷೆ, ಮಾ. 24ರಂದು ಗಣಿತ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.15ರ ವರೆಗೆ ನಡೆಯಲಿದೆ. ಮಾ. 26ರಂದು ದ್ವಿತೀಯ ಭಾಷೆ ಪರೀಕ್ಷೆ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1ರ ವರೆಗೆ ನಡೆಯಲಿದೆ. ಮಾ. 29ರಂದು ಸಮಾಜ ವಿಜ್ಞಾನ, ಏಪ್ರಿಲ್ 1 ರಂದು ಅರ್ಥಶಾಸ್ತ್ರ, ಏಪ್ರಿಲ್ 2ರಂದು ವಿಜ್ಞಾನ ವಿಷಯದ ಪರೀಕ್ಷೆ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.15ರ ವರೆಗೆ ನಡೆಯಲಿದೆ. ಏಪ್ರಿಲ್ 4ರಂದು ತೃತೀಯ ಭಾಷೆ ಪರೀಕ್ಷೆ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1ರ ವರೆಗೆ ನಡೆಯಲಿದೆ. ಒಟ್ಟು–49 ಪರೀಕ್ಷಾ ಕೇಂದ್ರಗಳನ್ನು ರಚಿಸಲಾಗಿದ್ದು, ಈ ಕೇಂದ್ರಗಳ ಎಲ್ಲಾ ಕೊಠಡಿಗಳಲ್ಲಿ ಸಿಸಿಟಿವಿ ಅಳವಡಿಸಲಾಗಿದೆ ಎಂದಿದ್ದಾರೆ.

ವಿದ್ಯಾರ್ಥಿಗಳಿಗೆ ತಾವು ಪರೀಕ್ಷೆ ಬರೆಯುವ ಕೇಂದ್ರದ ಬಗ್ಗೆ ಶಾಲಾ ಮುಖ್ಯ ಶಿಕ್ಷಕರು ಮತ್ತು ಸಹ ಶಿಕ್ಷಕರ ಮೂಲಕ ಈಗಾಗಲೇ ಮಾಹಿತಿ ನೀಡಲಾಗಿದೆ, ಪ್ರತೀ ಪರೀಕ್ಷಾ ಕೇಂದ್ರದಲ್ಲಿ ಅಗತ್ಯವಾಗಿ ಇರಬೇಕಾದ ಮೂಲಭೂತ ಸೌಲಭ್ಯಗಳನ್ನು ಪರಿಶೀಲಿಸಿ ಖಾತ್ರಿ ಪಡಿಸಿಕೊಳ್ಳಲು ಜಿಲ್ಲಾ ಹಂತದಲ್ಲಿ ದ್ವಿ ಸದಸ್ಯ ತಂಡವನ್ನು ರಚಿಸಿ ಅಗತ್ಯ ಕ್ರಮವಹಿಸಲಾಗಿದೆ.

ಪ್ರತೀ ಪರೀಕ್ಷಾ ಕೇಂದ್ರಗಳಲ್ಲಿ ಕಡ್ಡಾಯವಾಗಿ ಸಿಸಿಟಿವಿ ಅಳವಡಿಸಿರುವ ಬಗ್ಗೆ ಮತ್ತು ಪರೀಕ್ಷಾ ಸಮಯಕ್ಕೆ ಮುಂಚಿತವಾಗಿ ಸಿಸಿಟಿವಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಮತ್ತು ವಿದ್ಯುತ್ ಸಂಪರ್ಕ ಕಡಿತಗೊಂಡಲ್ಲಿ ವೆಬ್ಕ್ಯಾಸ್ಟಿಂಗ್ ನಡೆಸಲು ಅನುಕೂಲವಾಗುವಂತೆ ಪ್ರತಿ ಕೇಂದ್ರದಲ್ಲಿ ಯುಪಿಎಸ್ ಸೌಲಭ್ಯ ಕಲ್ಪಿಸಿರುವುದನ್ನು ಖಾತ್ರಿ ಪಡಿಸಿಕೊಳ್ಳಲು ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮತ್ತು ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಮತ್ತು ಶಾಲಾ ಮುಖ್ಯ ಶಿಕ್ಷಕರಿಗೆ ಈಗಾಗಲೇ ನಿರ್ದೇಶನ ನೀಡಲಾಗಿದೆ.

ಪ್ರಸಕ್ತ ಸಾಲಿನಲ್ಲಿ ಖಾಸಗಿ ಪರೀಕ್ಷಾ ಕೇಂದ್ರಗಳಿಲ್ಲ. ಮತ್ತು ಖಾಸಗಿ ನೋಂದಾಯಿತ ಅಭ್ಯರ್ಥಿಗಳು ಕೂಡ ಸಾಮಾನ್ಯ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯುತ್ತಿದ್ದು ಅದರಲ್ಲಿ ಸೂಕ್ತ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಪ್ರತೀ ಪರೀಕ್ಷಾ ಕೇಂದ್ರದಲ್ಲಿ ಶೌಚಾಲಯ, ಪ್ರತಿ ಕೊಠಡಿಗೆ ಗಾಳಿ ಬೆಳಕು, ಎಲ್ಲಾ ವಿದ್ಯಾರ್ಥಿಗಳಿಗೆ ಆಸನದ ವ್ಯವಸ್ಥೆ ಮಾಡಲಾಗಿದೆ.

ಪರೀಕ್ಷೆ ಸುವ್ಯವಸ್ಥಿತ ನಡೆಸಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳಿಂದ ನೇಮಕವಾದ ಜಿಲ್ಲಾ ಮಟ್ಟದ ಇಲಾಖೇತರ ಅಧಿಕಾರಿಗಳು, ಉಪನಿರ್ದೇಶಕರು (ಆಡಳಿತ) ಮತ್ತು ಉಪನಿರ್ದೇಶಕರು (ಅಭಿವೃದ್ಧಿ) ಡಯಟ್ ಪ್ರಾಂಶುಪಾಲರ ನೇತೃತ್ವದಲ್ಲಿ, ಡಯಟ್‌ನ ಹಿರಿಯ ಉಪನ್ಯಾಸಕರು ಮತ್ತು ಶಿಕ್ಷಣಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾ ವಿಚಕ್ಷಣ ಜಾಗೃತ ದಳ ರಚಿಸಲಾಗಿದೆ. ಪ್ರತಿ ತಾಲ್ಲೂಕಿನ ತಹಶೀಲ್ದಾರರು, ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ನೇತೃತ್ವದಲ್ಲಿ ತಾಲ್ಲೂಕು ಹಂತದಲ್ಲಿ ವಿಚಕ್ಷಣಾದಳ ರಚಿಸಿದ್ದು, ಅವರು ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಲಿದ್ದಾರೆ.

ಪ್ರತಿಯೊಂದು ಪರೀಕ್ಷಾ ಕೇಂದ್ರಕ್ಕೆ ಒಬ್ಬರಂತೆ ಸ್ಥಾನಿಕ ಜಾಗೃತ ದಳದ ಸದಸ್ಯರನ್ನು ರೊಟೇಷನ್ ಆಧಾರದಲ್ಲಿ ನೇಮಿಸಲಾಗಿದೆ. ಪರೀಕ್ಷಾ ಕಾರ್ಯದಲ್ಲಿ ಭಾಗವಹಿಸುವ ಮುಖ್ಯ ಅಧೀಕ್ಷಕರು, ಕೊಠಡಿ ಮೇಲ್ವಿಚಾರಕರು, ಕಸ್ಟೋಡಿಯನ್, ಜಾಗೃತ ದಳ, ಮೊಬೈಲ್ ಕಸ್ಟೋಡಿಯನ್ ಹಾಗೂ ಸಿಬ್ಬಂದಿಗಳಿಗೆ ಉಪನಿರ್ದೇಶಕರ/ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ತರಬೇತಿ ನೀಡಲಾಗಿದೆ. ಪ್ರತೀ ಪರೀಕ್ಷಾ ಕೇಂದ್ರದಲ್ಲಿ ಒಂದು ಕೊಠಡಿಗೆ ಗರಿಷ್ಠ 24 ವಿದ್ಯಾರ್ಥಿಗಳಿಗೆ ಆಸನ ವ್ಯವಸ್ಥೆ ಮಾಡಿಕೊಳ್ಳಲಾಗಿದೆ.

ಪ್ರತೀ ತಾಲ್ಲೂಕು ಕೇಂದ್ರದಲ್ಲಿ ಪರಿಕ್ಷಾ ಅವಧಿಯಲ್ಲಿ ಒಂದು ಆಂಬ್ಯುಲೆನ್ಸ್ ಕಾಯ್ದಿರಿಸಲು ಕ್ರಮವಹಿಸಲಾಗಿದೆ.

ಪ್ರತೀ ಪರೀಕ್ಷಾ ಕೇಂದ್ರದಲ್ಲಿ ಆರೋಗ್ಯ ತಪಾಸಣಾ ಕೇಂದ್ರ ತೆರೆದು ಇಬ್ಬರು ಆರೋಗ್ಯ ಕಾರ್ಯಕರ್ತರನ್ನು ಹಾಗೂ ಇಬ್ಬರು ಪೋಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಬೇಸಿಗೆಯಾದ್ದರಿಂದ ಪರೀಕ್ಷೆಗೆ ಬರುವ ವಿದ್ಯಾರ್ಥಿಗಳು ತೀರಾ ಬಳಲುವ ಸಾಧ್ಯತೆ ಇರುವುದರಿಂದ ಒಆರ್ಎಸ್ ನಂತಹ ತುರ್ತು ಚಿಕಿತ್ಸಾ ಸಾಮಗ್ರಿಗಳ ವ್ಯವಸ್ಥೆ ಮಾಡಲಾಗಿದೆ. ಪ್ರತೀ ಪರೀಕ್ಷಾ ಕೇಂದ್ರದಲ್ಲಿಯೂ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಕ್ರಮ ವಹಿಸಲಾಗಿದೆ.

ಪರೀಕ್ಷಾ ಕೇಂದ್ರದ 200 ಮೀಟರ್ ವ್ಯಾಪ್ತಿಯಲ್ಲಿ ಪರೀಕ್ಷಾ ಕೇಂದ್ರದ ಸುತ್ತ ಇರುವ ಜೆರಾಕ್ಸ್ ಅಂಗಡಿ ಮತ್ತು ಸೈಬರ್ ಕೇಂದ್ರಗಳನ್ನು ಮುಚ್ಚುವಂತೆ ಜಿಲ್ಲಾಧಿಕಾರಿಗಳು ಆದೇಶಿಸಿದ್ದಾರೆ.

ಅದೇ ರೀತಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್ ಅವರು ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸುವಂತೆ ಶುಭ ಹಾರೈಸಿದ್ದಾರೆ.

# ಇಬ್ಬರು ನಕಲಿ ವೈದ್ಯರಿಗೆ ದಂಡ

**ಶಿಡ್ಲಘಟ್ಟ:** ತಾಲ್ಲೂಕಿನ ಇಬ್ಬರು ನಕಲಿ ವೈದ್ಯರಿಗೆ ಜಿಲ್ಲಾಧಿಕಾರಿ ರವೀಂದ್ರ ಅವರು ದಂಡ ವಿಧಿಸಿ ಜೀವನ ಪರ್ಯಂತ ಎಲ್ಲಿಯೂ ಸಹ ಕ್ಲಿನಿಕ್ ತೆರೆಯಬಾರದೆಂದು ಅದೇಶಿಸಿದ್ದಾರೆ ನಕಲಿ ವೈದ್ಯರಿಗೆ ದಂಡ ವಿಧಿಸಿರುವ ನಿದರ್ಶನ ಜಿಲ್ಲೆಯಲ್ಲಿ ಶಿಡ್ಲಘಟ್ಟ ತಾಲ್ಲೂಕಿನಲ್ಲಿಯೇ ಇದು ಮೊದಲನೆಯದಾಗಿದೆ.



ಕಳೆದ ಡಿಸೆಂಬರ್ ತಿಂಗಳಿನಲ್ಲಿ ತಾಲ್ಲೂಕು ವೈದ್ಯಾಧಿಕಾರಿ ಡಾ.ವೆಂಕಟೇಶಮೂರ್ತಿ ಮತ್ತು ಅವರ ತಂಡ ಸಾದಲಿ ಮತ್ತು ಬಶೆಟ್ಟಹಳ್ಳಿಯಲ್ಲಿ ನಕಲಿ ಕ್ಲಿನಿಕ್ ಗಳನ್ನು ಮುಚ್ಚಿಸಿದ್ದರು, ಈ ಕುರಿತಾಗಿ ದೋಷಾರೋಪ ಪಟ್ಟಿಯನ್ನು ಜಿಲ್ಲಾಧಿಕಾರಿ ಅವರ ನ್ಯಾಯಾಲಯಕ್ಕೆ ಸಲ್ಲಿಸಿದ್ದರು.

ಈ ಬಗ್ಗೆ ವಿಚಾರಣೆ ನಡೆಸಿದ ಜಿಲ್ಲಾಧಿಕಾರಿ ಅವರು ಸಾದಲಿ ಗ್ರಾಮದ ಎಸ್.ವಿ.ಸಹದೇವ್ ಅವರಿಗೆ 5,000 ರೂ ದಂಡ ಮತ್ತು ಬಶೆಟ್ಟಹಳ್ಳಿಯ ಎಲ್.ಲೋಕನಾಥರೆಡ್ಡಿ ಅವರಿಗೆ 50,000 ರೂ ದಂಡ ವಿಧಿಸಿ, ಜೀವನ ಪರ್ಯಂತ ಎಲ್ಲಿಯೂ ಸಹ ಕ್ಲಿನಿಕ್ ತೆರೆಯಬಾರದೆಂದು ಅವರು ಅದೇಶವನ್ನು ನೀಡಿದ್ದಾರೆ.

ತಾಲ್ಲೂಕು ವೈದ್ಯಾಧಿಕಾರಿ ಡಾ.ವೆಂಕಟೇಶಮೂರ್ತಿ ಮಾತನಾಡಿ ಜಿಲ್ಲಾಧಿಕಾರಿಯವರ ಈ ಆದೇಶ ಜಿಲ್ಲೆಯಲ್ಲಿನ ನಕಲಿ ವೈದ್ಯರಿಗೆ ಒಂದು ರೀತಿಯಲ್ಲಿ ಎಚ್ಚರಿಕೆಯ ಗಂಟೆಯಾಗಿದೆ. ಆಯುಷ್, ಯುನಾನಿ ಹಾಗು ಅಲೋಪತಿ ಯಾವುದೇ ರೀತಿಯ ವೈದ್ಯರಾದರೂ ತಮ್ಮ ವಿದ್ಯಾರ್ಹತೆಗೆ ತಕ್ಕಂತೆ ಕೆ.ಪಿ.ಎಂ.ಎ ಯಲ್ಲಿ ಅರ್ಜಿ ಸಲ್ಲಿಸಿ ನೋಂದಣಿ ಪ್ರಮಾಣ ಪತ್ರ ಪಡೆದುಕೊಂಡು ವೈದ್ಯಕೀಯ ಸೇವೆಯನ್ನು ಸಲ್ಲಿಸಬೇಕು, ಇದುವರೆಗೂ ತಾಲ್ಲೂಕಿನಲ್ಲಿ ಆರು ನಕಲಿ ಕ್ಲಿನಿಕ್ ಗಳನ್ನು ಮುಚ್ಚಿಸಿದ್ದೇವೆ ಎಂದು ಅವರು ಹೇಳಿದರು.

# ಶಾರದಾ ಪೂಜೆ, ಅಕ್ಷರಾಂಕುರ ಕಾರ್ಯಕ್ರಮ



**ಶಿಡ್ಲಘಟ್ಟ:** ತಾಲ್ಲೂಕಿನ ಗುಡ್ಲನಾರಸಿಂಹನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಶ್ರೀ ಶಾರದಾ ಪೂಜೆ ಹಾಗೂ ಅಕ್ಷರಾಂಕುರ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಮುಖ್ಯ ಶಿಕ್ಷಕಿ ಸುಜಾತ ಮಾತನಾಡಿ ಮಕ್ಕಳಿಗೆ ತಾಯಿಯೇ ಮೊದಲ ಗುರು ಎನ್ನುವುದರಿಂದ ಮುಂದಿನ ಶೈಕ್ಷಣಿಕ ಸಾಲಿಗೆ ನಮ್ಮ ಶಾಲೆಗೆ ದಾಖಲಾಗುವ ಮಕ್ಕಳಿಗೆ ಅವರ ಅಮ್ಮಂದಿರ ಸಹಾಯದಿಂದ ಅಕ್ಕಿಯಲ್ಲಿ "ಓಂ" ಎಂದು ಓಂಕಾರವನ್ನು ಬರೆಯಿಸಿ, ವಿದ್ಯಾ ದೇವಿ ಶ್ರೀ ಶಾರದಾ ಪೂಜೆ ನೆರವೇರಿಸಿ ಅಕ್ಷರಾಭ್ಯಾಸ ಪ್ರಾರಂಭಿಸಲಾಯಿತು. ಈ ವೇಳೆ ಪೋಷಕರು ತಮ್ಮ ಮಕ್ಕಳನ್ನು ಪ್ರೀತಿಯಿಂದ ಆಶೀರ್ವದಿಸಿದರು ಎಂದು ಕಾರ್ಯಕ್ರಮದ ಬಗ್ಗೆ ತಿಳಿಸಿದರು.

"ನಮ್ಮ ಶಾಲೆಯಲ್ಲಿ ಪ್ರಥಮ ಬಾರಿಗೆ ಅಕ್ಷರಾಂಕುರ ಕಾರ್ಯಕ್ರಮವನ್ನು ನಡೆಸಿದ್ದೇವೆ. ಇದರಿಂದ ಪೋಷಕರಿಗೆ ಸಂತಸವಾಗಿದೆ ಸರ್ಕಾರಿ ಶಾಲೆಗಳು ಖಾಸಗಿ ಶಾಲೆಗಳಿಗಿಂತ ಉತ್ತಮವಾಗಿವೆ ,ನಮ್ಮ ಶಾಲೆಯಲ್ಲಿ ನುರಿತ ಶಿಕ್ಷಕರಿದ್ದು ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವುದು ನಮ್ಮ ಹೊಣೆಗಾರಿಕೆ, ಶಿಕ್ಷಣದ ಜೊತೆಗೆ ಕಂಪ್ಯೂಟರ್ ಜ್ಞಾನ, ಮೌಲ್ಯ ಶಿಕ್ಷಣ, ಜೀವನ ಶಿಕ್ಷಣ, ಯೋಗ, ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆಗಳನ್ನು ಮಾಡಿಸಲಾಗುತ್ತದೆ,ಗ್ರಾಮದ ಎಲ್ಲರೂ ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಬೇಕೆಂದು ಮನವಿ ಮಾಡಿದ್ದೇವೆ" ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಎಸ್.ಡಿ.ಎಂ.ಸಿ ಅಧ್ಯಕ್ಷೆ ನಂದಿನಿ, ಶಿಕ್ಷಕರಾದ ಎಸ್.ಎ.ನರಸಿಂಹರಾಜು, ಅಂಗನವಾಡಿ ಶಿಕ್ಷಕಿ ಪ್ರಮೀಳಾ ಪೋಷಕರಾದ ಶೈಲಜಾ ,ಲಕ್ಷ್ಮಿ, ಕಾವ್ಯ, ಭಾಗ್ಯಮ್ಮ, ವೀಣಾ ಮುಂತಾದವರು ಹಾಜರಿದ್ದರು.

# ಒಂದು ರೂ.ಬಿಡಿಗಾಸನ್ನು ಬಿಡುಗಡೆ ಮಾಡಿಲ್ಲ

ಶಿಡ್ಲಘಟ್ಟ: ವಿಧಾನಸಭೆಯಲ್ಲಿ ಚುಕ್ಕೆ ಗುರ್ತಿನ ಪ್ರಶ್ನೆಗೆ ಸ್ಪೀಕರ್ ಯು.ಟಿ.ಖಾದರ್ ಅವರು ಶಾಸಕರಾದ ಬಿ.ಎನ್.ರವಿಕುಮಾರ್ ಗೆ ಮಾತನಾಡಲು ಅವಕಾಶ ನೀಡಿದಾಗ ಈ ಕ್ಷೇತ್ರದ ರಾಜಕೀಯ ಇತಿಹಾಸದ ಬಗ್ಗೆ ಮಾತನಾಡಿ, ಶಿಡ್ಲಘಟ್ಟದಲ್ಲಿ 16 ವಿಧಾನಸಭಾ ಚುನಾವಣೆಯ ಪೈಕಿ 11 ಬಾರಿ ಕಾಂಗ್ರೆಸ್ ಅಭ್ಯರ್ಥಿಗಳು ಶಾಸಕರಾಗಿ ಗೆದ್ದಿದ್ದಾರೆ ಆದರೆ ಈವರೆಗೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಭವನವನ್ನು ನಿರ್ಮಿಸಲು ಕೂಡ ಸಾಧ್ಯವಾಗಿಲ್ಲ, ನಾನು ಶಾಸಕನಾಗಿ 22 ತಿಂಗಳು ಕಳೆದರೂ, 100 ಮೀಟರ್ ಕಾಂಕ್ರೀಟ್ ರಸ್ತೆಯಾಗಲಿ, ಚರಂಡಿಯಾಗಲಿ ನಿರ್ಮಾಣ ಮಾಡಲು ಆಗಿಲ್ಲ "ಪ್ರಗತಿ ಕಾಲೋನಿ ಯೋಜನೆ" ಯಡಿ ಇನ್ನೂ ಯಾವುದೇ ಕಾಮಗಾರಿ ಪ್ರಾರಂಭವಾಗಿಲ್ಲ ಎಸ್‌ಸಿಪಿ ಮತ್ತು ಟಿಎಸ್‌ಪಿಯಡಿಯಲ್ಲಿ ಕಳೆದ ಎರಡು ವರ್ಷಗಳಿಂದ "ಒಂದು ರೂಪಾಯಿ ಬಿಡಿಗಾಸನ್ನು ಬಿಡುಗಡೆ ಮಾಡಿಲ್ಲ" ಎಂದು ಸರ್ಕಾರದ ವಿರುದ್ಧ ಶಾಸಕರು ಬೇಸರದ ಮಾತುಗಳನ್ನು ವ್ಯಕ್ತಪಡಿಸಿದರು.



ವಿದಾನಸಭಾ ಕ್ಷೇತ್ರದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದ ಅಭಿವೃದ್ಧಿಗೆ ಅಂಬೇಡ್ಕರ್ ಭವನ ನಿರ್ಮಾಣ ಹಾಗೂ ಕುಸಿದ ರಸ್ತೆಗುಂಡಿಗಳ ಸುಧಾರಣೆ ಕುರಿತಂತೆ, ಶಾಸಕರಾದ ಬಿ.ಎನ್.ರವಿಕುಮಾರ್ ಅವರು ವಿಧಾನಮಂಡಲದಲ್ಲಿ ಗಂಭೀರವಾಗಿ ಧ್ವನಿ ಎತ್ತಿದ್ದಾರೆ. ಅವರು ತಮ್ಮ ಕ್ಷೇತ್ರದ ಹಿಂದುಳಿದ ಪರಿಸ್ಥಿತಿಯನ್ನು ಚರ್ಚಿಸಿ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದಲ್ಲಿ ಸುಮಾರು 60,000 ಮಂದಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮತದಾರರಿದ್ದಾರೆ, ಆದರೆ 2024–25 ನೇ ಸಾಲಿನಲ್ಲಿ, ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಗೌರಿಬಿದನೂರಿಗೆ 9 ಕೋಟಿ ರೂ.ಗಳು, ಚಿಕ್ಕಬಳ್ಳಾಪುರಕ್ಕೆ 4 ಕೋಟಿ ರೂ.ಗಳು, ಬಾಗೇಪಲ್ಲಿಗೆ 4 ಕೋಟಿ ರೂ.ಗಳು ಅನುದಾನ ನೀಡಲಾಗಿದ್ದರೂ, ಶಿಡ್ಲಘಟ್ಟ ವಿದಾನಸಭಾ ಕ್ಷೇತ್ರಕ್ಕೆ ಮಾತ್ರ ಅನುದಾನವಿಲ್ಲದೆ ನಿರ್ಲಕ್ಷ್ಯಗೊಂಡಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಶಿಡ್ಲಘಟ್ಟ ಕ್ಷೇತ್ರದ ಗ್ರಾಮೀಣ ಭಾಗದಲ್ಲಿ 215 ಕಿಲೋ ಮೀಟರ್ ರಸ್ತೆಗಳು ಬಹಳ ದುಸ್ಥಿತಿಯಲ್ಲಿದ್ದು, ಇತ್ತೀಚೆಗೆ ಸಂಭವಿಸಿದ 17 ಅಪಘಾತಗಳಲ್ಲಿ 6 ಮಂದಿ ಸಾವನ್ನಪ್ಪಿದ್ದಾರೆ ಎಂದು ವಿವರಿಸಿದರು. ಈ ಸಮಸ್ಯೆಗಳನ್ನು ಸರಿಪಡಿಸಲು ತಕ್ಷಣ ಅನುದಾನ ಬಿಡುಗಡೆ ಮಾಡಲು ಸಂಬಂಧಿಸಿದ ಸಚಿವರಿಗೆ ಸೂಚಿಸಬೇಕೆಂದು ಎಂದು ಸ್ಪೀಕರ್ ಅವರಲ್ಲಿ ಮನವಿ ಮಾಡಿದರು.

2023–24 ಮತ್ತು 2024–25 ಸಾಲಿನಲ್ಲಿ ಆದಿಜಾಂಭವ ಅಭಿವೃದ್ಧಿ ನಿಗಮದ ಮೂಲಕ ಗಂಗಾ ಕಲ್ಯಾಣ ಯೋಜನೆಯಡಿ ಕೇವಲ ಒಂದೇ ಒಂದು ಕೊಳವೆ ಬಾವಿಗೆ ಅನುಮತಿ ನೀಡಿರುವುದು ದುರಾದೃಷ್ಟಕರ ಎಂದರು. ಶಿಡ್ಲಘಟ್ಟ ಕ್ಷೇತ್ರದಲ್ಲಿ ಪರಿಶಿಷ್ಟ ಜಾತಿ ಸಮುದಾಯದ ಜನಸಂಖ್ಯೆ ಹೆಚ್ಚಿರುವುದರಿಂದ ಸರ್ಕಾರ ಹಾಗೂ ಪಂಚಾಯತ್ ರಾಜ್ ಇಲಾಖೆ ಇದರ ಬಗ್ಗೆ ತ್ವರಿತವಾಗಿ ಗಮನಹರಿಸಬೇಕು ಮತ್ತು ಹೆಚ್ಚಿನ ಅನುದಾನವನ್ನು ತಾರತಮ್ಯ ಮಾಡದೇ ಮಂಜೂರು ಮಾಡಬೇಕು ಎಂದು ಆಗ್ರಹಿಸಿದರು. ಮೊದಲನೇ ಬಾರಿಗೆ ಶಾಸಕರಾಗಿ ಕ್ಷೇತ್ರದ ಸಮಸ್ಯೆಗಳನ್ನು ಮಾನ್ಯ ಸ್ಪೀಕರ್ ಅವರಿಗೆ ವಿವರಿಸುವಾಗ ಅಲ್ಪ ಸಮಯದಲ್ಲಿ ಸಮಚಿತ್ತದಿಂದ ಗಂಭೀರವಾಗಿ ಮನವರಿಕೆ ಮಾಡಿದರು,ಸಂಬಂಧಿಸಿದ ಸಚಿವರು ಕೂಡ ಅನುದಾನದ ಲಭ್ಯತೆ ಆದಾರದ ಮೇಲೆ ಅನುದಾಗಳನ್ನು ನೀಡುವುದಾಗಿ ತಿಳಿಸಿದರು.

# ಆರೋಗ್ಯದ ಕಡೆ ಹೆಚ್ಚಿನ ಗಮನಹರಿಸಿ: ಡಾ.ಸುಗುಣ

**ಮುಳಬಾಗಿಲು:** ಬಿಸಿಲಿನ ತಾಪ ಹೆಚ್ಚುವುದರಿಂದ ಪ್ರತಿಯೊಬ್ಬರು ತಮ್ಮ ಆರೋಗ್ಯದ ಕಡೆ ಹೆಚ್ಚಿನ ಗಮನಹರಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮಾರ್ಗಸೂಚನೆಗಳನ್ನು ಪಾಲಿಸಬೇಕು ಎಂದು ತಾಲೂಕು ವೈದ್ಯಾಧಿಕಾರಿ ಡಾ.ಸುಗುಣ ತಿಳಿಸಿದರು.



ತಾಲ್ಲೂಕಿನ ಹೆಬ್ಬಣಿ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿನ ಸಿಬ್ಬಂದಿಯೊಂದಿಗೆ ರೋಗಿಗಳು ಆಸ್ಪತ್ರೆಗೆ ಬರುವುದರಿಂದ ಅವರ ಜೊತೆಯಲ್ಲಿ ಸೌಜನ್ಯತೆಯಿಂದ ವರ್ತಿಸಿ ಅವರಿಗೆ ಚಿಕಿತ್ಸೆಯನ್ನು ಕೊಡುವುದರ ಮುಖಾಂತರ ಬೇಸಿಗೆಕಾಲದ ಲ್ಲಿ ಆರೋಗ್ಯ ಮತ್ತು ಕುಟುಂಬ ಇಲಾಖೆಯ ನಿಯಮಗಳನ್ನು ತಿಳಿಸಬೇಕೆಂದರೆ ಪ್ರತಿಯೊಬ್ಬರು ತಮ್ಮ ತಮ್ಮ ಮನೆಗಳಲ್ಲಿ ಸ್ವಚ್ಛತೆಯನ್ನ ಕಾಪಾಡೋದರ ಜೊತೆಗೆ ಮಜ್ಜಿಗೆ ಎಳೆನೀರು ಹಾಲು ಮುಂತಾದ ತಂಪಾದ ಪಾನಿಯಗಳನ್ನು ಸೇವಿಸಬೇಕು ಮಕ್ಕಳಿಗೆ ಹತ್ತಿ ಬಟ್ಟೆಗಳನ್ನ ಧರಿಸಬೇಕು ಎಂದು ಹೇಳಿದರು.

ಕೋಳಿಮಾಂಸ ಅತಿ ಹೆಚ್ಚು ಆಯಿಲ್ ಐಟಂ ಗಳ ಬಗ್ಗೆ ಹೆಚ್ಚಿರ ವಹಿಸಿ ತಿನ್ನುವುದನ್ನು ಕಡಿಮೆ ಮಾಡಬೇಕು ಮಧ್ಯಪಾನ ಧೂಮಪಾನ ಕಾಫಿ, ಟೀ ಹಾಗೂ ಕಾರ್ಬೋನೇಟೆಡ್ ಪಾನೀಯಗಳನ್ನು ಸೇವನೆ ಮಾಡೋದು ನಿಲ್ಲಿಸಬೇಕು ಸಾಧ್ಯವಾದಷ್ಟು ತಂಪಾದ ಸ್ಥಳಗಳಲ್ಲಿ ಇರಬೇಕು ಸಾಧ್ಯವಾದಷ್ಟು ತಂಪಾದ ವಾಣಿಗಳನ್ನು ಪ್ರತಿಯೊಬ್ಬರು ಸೇವಿಸಬೇಕು ಬಿಸಿಲಿನ ಅವಧಿಯಲ್ಲಿ ಕೊಡೆಗಳನ್ನ ಬಳಸಬೇಕು ಸಾಧ್ಯವಾದಷ್ಟು ಮಕ್ಕಳಿಗೆ ಅತ್ತಿ ಉಡುಪುಗಳನ್ನ ಧರಿಸೋದಲ್ಲದೆ ಅತಿಯಾ ಟೋಪಿಗಳನ್ನು ಬಳಸಿ ಹೆಚ್ಚಿನ ಬಿಸಿಲಿನ ಅವಧಿಯಲ್ಲಿ ವಿಶ್ರಾಂತಿ ಪಡೆದರೆ ಸಾಕಷ್ಟು ನೀರು ಮತ್ತು ಮಜ್ಜಿಗೆ ಎಳನೇರು ಕುಡಿದು ಆರೋಗ್ಯವನ್ನು ಕಾಪಾಡಿಕೊಳ್ಳುವುದರಲ್ಲಿ ಸರ್ಕಾರದ ಮಾರ್ಗ ಸೂಚನೆಗಳನ್ನು ಸಿಬ್ಬಂದಿಗೆ ತಿಳಿಸಿ ಸಾರ್ವಜನಿಕರಿಗೆ ಮಾಹಿತಿ ಹಂಚಬೇಕೆಂದು ವೈದ್ಯರು ಮತ್ತು ಸಿಬ್ಬಂದಿಗೆ ಎಚ್ಚರಿಕೆಯನ್ನು ನೀಡಿದರು.

ಈಗಾಗಲೇ ತಾಲೂಕಿನಲ್ಲಿ ನಕಲಿ ಕ್ಲಿನಿಕ್ ಮೇಲೆ ದಾಳಿ ನಡೆಸಿ ಅವರ ವಿರುದ್ಧ ಪ್ರಕರಣ ದಾಖಲಾತಿಯಾಗಿದ್ದು ಮುಂದಿನ ದಿನಗಳಲ್ಲಿ ಯಾರಾದರೂ ನಕಲಿ ಕ್ಲಿನಿಕ್ ತೆರೆದರೆ ಅವರ ವಿರುದ್ಧ ಕ್ರಮ ಕೈಗೊಳ್ಳದಲ್ಲದೆ ಅವರ ಮೇಲೆ ಪ್ರಕರಣ ದಾಖಲಿಸಿ ಬಂಧಿಸಲಾಗುವುದು ಎಂದು ಎಚ್ಚರಿಸಿದ್ದಾರೆ ಈ ರೀತಿ ಬೇರೆ ಕಡೆಯಿಂದ ನಕಲಿ ವೈದ್ಯರು ಬಂದು ಚಿಕಿತ್ಸೆ ನೀಡುತ್ತಿದ್ದರೆ ತಮ್ಮ ಗಮನಕ್ಕೆ ತನ್ನಿ ಎಂದು ಸಾರ್ವಜನಿಕರಿಗೆ ತಿಳಿಸಿದರು.

ಈ ಹಿಂದೆ ನಕಲಿ ಕ್ಲಿನಿಕ್ ಗಳು ತೆರೆದಿರುವ ಮನೆ ಮಾಲೀಕರನ್ನು ಕರೆಸಿ ಆಂಧ್ರದಿಂದ ಆರ್‌ಎಂಪಿ ಗಳಿಗೆ ಯಾವುದೇ ರೀತಿ ಮನೆ ಬಾಡಿಗೆಗಳನ್ನು ನೀಡಬಾರದು, ನೀಡಿದ್ದಲ್ಲಿ ತಮ್ಮ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬಹುದೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಹೆಬ್ಬಣಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಗಾಯನ್ ತಾಲೂಕು ಆರೋಗ್ಯ ಇಲಾಖೆ ಸಿಬ್ಬಂದಿ ರಾಜು ಚಿದಾನಂದ ಅರುಣ ರೋಜಾ ಜಯಶ್ರೀ ಶೋಭಾ ಹಾಜರಿದ್ದರು

# ಬಹಿರಂಗ ಹರಾಜು 13,96,412 ರೂ. ಸಂಗ್ರಹ


**ಮಾಲೂರು:** ಪಟ್ಟಣದ ಪುರಸಭೆಯ 2025–26ನೇ ಸಾಲಿನ ವಿವಿಧ ಬಾಬ್ತುಗಳಿಗೆ ಮಾಸ್ತಿ ವೆಂಕಟೇಶ್ ಅಯ್ಯಂಗಾರ್ ರಂಗಮಂದಿರದ ಆವರಣದಲ್ಲಿ ನಡೆದ ಬಹಿರಂಗ ಹರಾಜು ಸಭೆಯಲ್ಲಿ 13,96,412ರೂ. ಪುರಸಭೆಗೆ ಸಂಗ್ರಹವಾಗಿದೆ ಎಂದು ಪುರಸಭೆಯ ಮುಖ್ಯ ಅಧಿಕಾರಿ ಎ.ಬಿ.ಪ್ರದೀಪ್ ತಿಳಿಸಿದರು.

ಪಟ್ಟಣದ ಪುರಸಭೆಯ ಮಾಸ್ತಿ ವೆಂಕಟೇಶ್ ಅಯ್ಯಂಗಾರ್ ರಂಗಮಂದಿರದ ಆವರಣದಲ್ಲಿ 2025–26 ನೇ ಸಾಲಿನ ವಿವಿಧ ಬಾಬ್ತುಗಳಿಗೆ ಪುರಸಭಾ ಅಧ್ಯಕ್ಷೆ ಕೋಮಲ ನಾರಾಯಣ್ ಅವರ ಅಧ್ಯಕ್ಷತೆಯಲ್ಲಿ ವಾರ್ಷಿಕ ಬಹಿರಂಗ ಹರಾಜು ಸಭೆ ನಡೆಯಿತು, 25 ರಿಂದ 30 ಮಂದಿ ಬಿಡ್‌ದಾರರು ಬ್ಯಾಂಕಿನಲ್ಲಿ ಡಿಡಿ ಪಾವತಿಸಿ ಬಹಿರಂಗ ಹರಾಜಿನಲ್ಲಿ ಭಾಗವಹಿಸಿ ವಿವಿಧ ಬಾಬ್ತುಗಳಿಗೆ ಹರಾಜು ಕೂಗಿದರು.

ದಿನವಹಿ ಮಾರ್ಕೆಟ್ ಭಾರತ ಸಂತೆ ಸುಂಕ ವಸೂಲಿ ಮಾಡುವ ಹಕ್ಕು ಒಂದು ವರ್ಷಕ್ಕೆ ಜಿಎಸ್‌ಟಿ ಸೇರಿ 12,44,900, ಬಸ್ ನಿಲ್ದಾಣಕ್ಕೆ ಬರುವ ಖಾಸಗಿ ಬಸ್ಸುಗಳ ವರ್ಷಕ್ಕೆ 70,800, ಹಳೆ ದಿನಪತ್ರಿಕೆಗಳು 1,534, ಆರೋಗ್ಯ ಶಾಖೆಯ ನಿರೂಪಯುಕ್ತ ವಸ್ತುಗಳು ಟೈರುಗಳ ಹಾಗೂ ಇತರೆ ವಸ್ತುಗಳು 30,090, ಹಳೆ ನೀರಿನ ಪೈಪುಗಳು ಮತ್ತು ಇತರೆ ಸಾಮಗ್ರಿಗಳು 48,380, ಬಸ್ ನಿಲ್ದಾಣದ ಹತ್ತಿರವಿರುವ ಹುಣಸೆ ಮರಗಳ ಫಸಲು ಕಟಾಯಿಸುವ ಹಕ್ಕು 708, ಒಟ್ಟಾರೆ ಪುರಸಭೆಗೆ ವಿವಿಧ ಬಾಬುತು ಗಳಿಂದ 11,83,400 ಜಿ ಎಸ್ ಟಿ 2,13,012 ಒಟ್ಟು 13,96,412 ರೂ ಸಂದಾಯವಾಗಿದೆ.

ಈ ಸಂದರ್ಭದಲ್ಲಿ ಪುರಸಭಾ ಸ್ಥಾಯಿ ಸಮಿತಿ ಅಧ್ಯಕ್ಷ ಎ.ರಾಜಪ್ಪ, ಸದಸ್ಯರಾದ ಇಂತಿಯಾಜ್ ಖಾನ್, ಮುರುಳಿಧರ್, ಕಚೇರಿ ವ್ಯವಸ್ಥಾಪಕಿ ಮುಫ್ತಿಯಾರ್ ಜಾನ್, ಕಂದಾಯ ಅಧಿಕಾರಿ ರೇಣುಕಾ, ಕಂದಾಯ ನಿರೀಕ್ಷಕ ನಾಗರಾಜ್, ಇಂಜಿನಿಯರ್ ನಾಗರಾಜ್, ಹಿರಿಯ ಆರೋಗ್ಯ ನಿರೀಕ್ಷಕರ ಶ್ರೀನಿವಾಸ್, ಸಿಬ್ಬಂದಿ ಬಿ.ಆರ್.ಶ್ರೀನಿವಾಸ್, ವಿನೋದ್, ರವಿ, ಶ್ರೀನಾಥ್, ಅನಿಲ್, ಇನ್ನಿತರರು ಹಾಜರಿದ್ದರು.


# ಬಿಜೆಪಿ ಮಂಡಲ ಅಧ್ಯಕ್ಷರಿಗೆ ಅಭಿನಂದನೆ



**ದೇವನಹಳ್ಳಿ:** ಪಕ್ಷ ಸಂಘಟನೆ ಮತ್ತು ಪಕ್ಷವನ್ನು ಸಂಘಟನಾತ್ಮಕವಾಗಿ ಬಲಗೊಳಿಸುವಲ್ಲಿ ನನ್ನ ಕಾರ್ಯ ವೈಖರಿಯನ್ನ ಗುರುತಿಸಿ ಪಕ್ಷದ ಮುಖಂಡರು ನನಗೆ ವಹಿಸಿದ ಜವಾಬ್ದಾರಿಯನ್ನ ಪ್ರಾಮಾಣಿಕವಾಗಿ ನಿಭಾಯಿಸಿಕೊಂಡು ಹೋಗುತ್ತೇನೆ ಎಂದು ಬಿಜೆಪಿ ಮಂಡಲ ಅಧ್ಯಕ್ಷ ಅಂಬರೀಶ್ ಗೌಡ ಹೇಳಿದರು.

ದೇವನಹಳ್ಳಿ ಪಟ್ಟಣದ ಪ್ರವಾಸಿಮಂದಿರದಲ್ಲಿ ನೂತನವಾಗಿ ಆಯ್ಕೆಯಾದ ಬಿಜೆಪಿ ದೇವನಹಳ್ಳಿ ಮಂಡಲ ಅಧ್ಯಕ್ಷರಾದ ನಿಲೇರಿ ಅಂಬರೀಶ್ ಗೌಡ ಅವರನ್ನು ಬಿಜೆಪಿ ತಾಲೂಕು ಯುವ ಘಟಕದ ಮತ್ತು ವಿವಿಧ ಸಂಘ ಸಂಸ್ಥೆಗಳ ವತಿಯಿಂದ ನಡೆದ ಅಭಿನಂದನೆ ಸ್ವೀಕರಿಸಿ ಮಾತನಾಡಿದರು. ಪಕ್ಷದ ಎಲ್ಲಾ ಕಾರ್ಯಕರ್ತರೂ ಮತ್ತು ಮುಖಂಡರೂ ಹೆಚ್ಚಿನ ಪ್ರೋತ್ಸಾಹ ನೀಡುತ್ತಾರೆಂಬ ನಂಬಿಕೆ ಇದೆ ಹಾಗೂ ಮುಂಬರುವ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸುವ ವಿಶ್ವಾಸವಿದೆ. ಯುವ ಘಟಕ ಪಕ್ಷದ ಸಂಘಟನೆಯಲ್ಲಿ ಬಹುಮುಖ್ಯ ಪಾತ್ರ ವಹಿಸಿತ್ತದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಬಿಜೆಪಿ ಪಕ್ಷದ ಮುಖಂಡರಾದ ದೇ.ಸು.ನಾಗಾರಾಜ್, ಸುರೇಶಾಚಾರ್, ಸುನೀಲ್, ವಿಜಯ ರಾಘವೇಂದ್ರ, ಯುವ ಘಟಕದ ಪದಾಧಿಕಾರಿಗಳು, ಕಾರ್ಯಕರ್ತರು ಮತ್ತಿತರರು ಇದ್ದರು.

# ಆಧುನಿಕ ಕನ್ನಡ ಸಾಹಿತ್ಯದ ವನಸುಮ ಡಿ.ವಿ.ಗುಂಡಪ್ಪ



**ನಾಗಮಂಗಲ:** ಕನ್ನಡ ಸಾಹಿತ್ಯ ಲೋಕದ ವನಸುಮ ಎಂದು ಪ್ರಸಿದ್ಧಿಯಾಗಿದ್ದ ಡಿ ವಿ ಗುಂಡಪ್ಪನವರು ಸದಾ ನಿತ್ಯ ನಿರಂತರವಾಗಿ ಕನ್ನಡ ಸಾಹಿತ್ಯದಲ್ಲಿ ಹೆಸರುಗಳಿಸಿದ್ದಾರೆಂದು ಕುವೆಂಪು ಪ್ರಚಾರ ಸಾಹಿತ್ಯ ವೇದಿಕೆಯ ಅಧ್ಯಕ್ಷರು ಸಾಹಿತಿಗಳಾದ ಶಿವಲಿಂಗಯ್ಯನವರು ತಿಳಿಸಿದರು.

ಅವರು ನಾಗಮಂಗಲ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘ 138ನೇ ವರ್ಷದ ಡಿ.ವಿ.ಗುಂಡಪ್ಪನವರ ಜಯಂತಿಯ ಅಂಗವಾಗಿ ಸಂಘದ ಕಚೇರಿಯಲ್ಲಿ ಏರ್ಪಡಿಸಿದ್ದ ಜನ್ಮ ಜಯಂತಿಯ ಉದ್ಘಾಟನೆ ಮಾಡುತ್ತ ಮಾತನಾಡಿದರು.

ಆಧುನಿಕ ಕನ್ನಡ ಸಾಹಿತ್ಯ ವನದ ಅಶ್ವತ್ಥ ವೃಕ್ಷ ಎಂದೇ ಕೀರ್ತಿತರು. ಹೇಗೆ ಅಶ್ವತ್ಥವು ತನ್ನ ಮಹಾನತೆ ವಿಶಾಲತೆಗಳಿಂದಾಗಿ ಪೂಜ್ಯವೆನಿಸಿದೆಯೋ ಹಾಗೆಯೇ ಕನ್ನಡ ಸಾಹಿತ್ಯ ಕೃಷಿಯಲ್ಲಿ ಡಿವಿಜಿಯವರ ಪ್ರತಿಮೆಯೂ ಶ್ರೇಷ್ಠವೆನಿಸಿದೆ. ಬರೆದಂತೆ ಬಾಳಿದ ವಿರಳರೀತಿಯ ವ್ಯಕ್ತಿತ್ವದ ಮಹಾನತೆ ಅದು. ಸಾಹಿತ್ಯ, ಸಂಸ್ಕೃತಿ, ಪತ್ರಿಕೋದ್ಯಮ, ಸಮಾಜಸೇವೆಗಳಂಥ ಹತ್ತಾರು ಗಂಭೀರ ಕ್ಷೇತ್ರಗಳಲ್ಲಿ ನಿಸ್ವಾರ್ಥವಾಗಿ ದುಡಿದು ಮಾಸದ ಮುದ್ರೆಯೊತ್ತಿದ ವಿಶಾಲತೆ ಅದು. ಡಿವಿಜಿಯವರು ಇಲ್ಲದಿದ್ದರೂ ಅವರ ಸಾಹಿತ್ಯ ಇಂದಿಗೂ ಪ್ರಸ್ತುತವಾಗಿದೆ.

ಡಿವಿಜಿಯವರು ತಮ್ಮ ಸಾಹಿತ್ಯದ ಕಗ್ಗದ ಮೂಲಕ ಜನಸಾಮಾನ್ಯರನ್ನು ತಲ್ಪಿಸುವ ಅವರುಗಳ ಕೃಷಿ ಸಾಹಿತ್ಯ ಎಂದಿಗೂ ಮನನ ವಾಗಿದ್ದು ಇಂಥವರ ಜಯಂತಿ ಸಾಹಿತ್ಯ ಅಭಿಮಾನಿಗಳು ಮಕ್ಕಳು ಇವರ ಸಾಹಿತ್ಯ ಕೃಷಿ ಪಾಂಡಿತ್ಯವನ್ನು ಮುಂದಿನ ಪೀಳಿಗೆಗೂ ಪರಿಚಯವಾಗುವಂತೆ ಆಗಬೇಕೆಂದು ಈ ಸಂದರ್ಭದಲ್ಲಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಸಮಾರಂಭದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷರಾದ ಸೀತಾರಾಮ್ ವಹಿಸಿದ್ದು ರಾಜ್ಯ ಪತ್ರಕರ್ತರ ಸಂಘದ ಪ್ರತಿನಿಧಿ ಮಂಜುನಾಥ್ ರವರುಗಳು ಉಪಸ್ಥಿತರಿದ್ದರು.

# ಸೂರ್ಯನ ಶಾಖ ಹೆಚ್ಚಳ: ಅಗತ್ಯ ಸಲಹೆ ಪಾಲಿಸಲು ಕರೆ

**ರಾಮನಗರ:** ಸೂರ್ಯನಶಾಖ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಈ ಸಂದರ್ಭದಲ್ಲಿ ಸಾರ್ವಜನಿಕರು ವಹಿಸಬೇಕಾದ ಎಚ್ಚರಿಕೆಗಳ ಬಗ್ಗೆ ಜಿಲ್ಲಾ ಆರೋಗ್ಯ ಮತ್ತು ಕಟುಂಬ ಕಲ್ಯಾಣ ಇಲಾಖೆ ಸಲಹೆಗಳನ್ನು ನೀಡಿದೆ.

ರೇಡಿಯೋ, ಟಿವಿ, ದಿನ ಪತ್ರಿಕೆಗಳಲ್ಲಿ ಬರುವ ಅತಿಯಾದ ಬಿಸಿಲಿನ ಕುರಿತು ಮುನ್ಸೂಚನೆಗಳನ್ನು ಪಡೆದುಕೊಳ್ಳಬೇಕು. ಬಾಯಾರಿಕೆಯಿಲ್ಲದಿದ್ದರೂ ಸಾಕಷ್ಟು ಮತ್ತು ಸಾಧ್ಯವಾದಷ್ಟು ಹೆಚ್ಚಾಗಿ ನೀರನ್ನು ಕುಡಿಯಬೇಕು. ಹಗುರವಾದ, ತಿಳಿ–ಬಣ್ಣದ, ಸಡಿಲವಾದ ಮತ್ತು ರಂಧ್ರವುಳ್ಳ ಹತ್ತಿ ಬಟ್ಟೆಗಳನ್ನು ಧರಿಸಬೇಕು. ಬಿಸಿಲಿನಲ್ಲಿ ಹೊರಗೆ ಹೋಗುವಾಗ ರಕ್ಷಣಾತ್ಮಕ ಕನ್ನಡಕಗಳು, ಟೋಪಿ, ಬೂಟುಗಳು ಅಥವಾ ಚಪ್ಪಲಿಗಳನ್ನು ಬಳಸಬೇಕು.

ಬಸ್ಸಿನಲ್ಲಿ ದೂರದ ಪ್ರಯಾಣವನ್ನು ರಾತ್ರಿ ವೇಳೆ ಮಾಡುವುದು ಉತ್ತಮ, ಒಂದು ವೇಳೆ ಪ್ರಯಾಣ ಮಾಡುವ ಸಂದರ್ಭ ಬಂದರೆ, ಪ್ರಯಾಣ ಮಾಡುವಾಗ ನೀರನ್ನು ತೆಗೆದುಕೊಂಡು ಹೋಗಬೇಕು. ಹೊರಗೆ ಕೆಲಸ ಮಾಡುತ್ತಿದ್ದರೆ, ಟೋಪಿ ಅಥವಾ ಛತ್ರಿಯನ್ನು ಬಳಸಿ ಮತ್ತು ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಸಹ ಬಳಸಬೇಕು.

ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಸ್ಸಿ, ಶರಬತ್, ನಿಂಬೆ ನೀರು, ಮಜ್ಜಿಗೆ ಇತ್ಯಾದಿಗಳನ್ನು ಬಳಸಿ ಅದು ದೇಹವನ್ನು ಪುನಃ ತಂಪಾಗಿಡಲು ಸಹಾಯ ಮಾಡುತ್ತದೆ. ಪ್ರಾಣಿ/ಪಕ್ಷಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ನೀಡಬೇಕು. ಆದಷ್ಟು ಫ್ಯಾನ್‌ಗಳನ್ನು ಬಳಸಿ, ಒದ್ದೆಯಾದ ಬಟ್ಟೆಗಳನ್ನು ಮತ್ತು ಆಗಾಗ್ಗೆ ತಣ್ಣೀರಿನಲ್ಲಿ ಸ್ನಾನ ಮಾಡಿ. ಕೆಲಸದ ಸಮಯವನ್ನು ಆದಷ್ಟು ತಂಪಾದ ಸಮಯದಲ್ಲಿ ಮಾಡುವುದು ಹಾಗೂ ಕೆಲಸದ ಸ್ಥಳದ ಬಳಿ ತಂಪಾದ ಕುಡಿಯುವ ನೀರನ್ನು ಒದಗಿಸಬೇಕು.

ಕೆಲಸ ನಿರ್ವಹಿಸುವ ಗರ್ಭಿಣಿ ಮಹಿಳೆಯರು ಮತ್ತು ಅನಾರೋಗ್ಯದಲ್ಲಿರುವ ಕಾರ್ಮಿಕರಿಗೆ ಹೆಚ್ಚಿನ ಗಮನ ನೀಡಬೇಕು. ಕಲ್ಲಂಗಡಿ, ಕರಬೂಜ, ಕಿತ್ತಳೆ, ದ್ರಾಕ್ಷಿ, ಅನನಾಸ್, ಸೌತೆಕಾಯಿ, ಎಳನೀರನ್ನು ಹೆಚ್ಚಾಗಿ ಸೇವಿಸಬೇಕು. ನವಜಾತ ಶಿಶುಗಳು ಹಾಗೂ ಚಿಕ್ಕ ಮಕ್ಕಳು, ಗರ್ಭಿಣಿಯರು, ಹೊರಾಂಗಣದಲ್ಲಿ ಕೆಲಸ ನಿರ್ವಹಿಸುವವರು, ಮಾನಸಿಕ ಸಮಸ್ಯೆಗಳಿಂದ ಬಳಲುತ್ತಿರುವವರು ಹಾಗೂ ಇತರ ಅರೋಗ್ಯ ಸಮಸ್ಯೆಗಳಿರುವವರು, ಅದರಲ್ಲೂ ವಿಶೇಷವಾಗಿ ಹೃದ್ರೋಗ ಹಾಗೂ ರಕ್ತದ ಒತ್ತಡದಿಂದ ಬಳಲುತ್ತಿರುವವರು ಹೆಚ್ಚು ಜಾಗರೂಕತೆ ವಹಿಸಬೇಕು.

# ಆರೋಗ್ಯ ಕಾಪಾಡಿಕೊಳ್ಳುವುದು ನಮ್ಮ ಕರ್ತವ್ಯ

**ಮಾಲೂರು:** ಮನುಷ್ಯನ ಆರೋಗ್ಯಕ್ಕಿಂತ ದೊಡ್ಡದು ಯಾವುದು ಇಲ್ಲ. ಆರೋಗ್ಯವನ್ನು ಉಳಿಸಿಕೊಳ್ಳುವುದು ನಮ್ಮ ಆದ್ಯ ಕರ್ತವ್ಯ. ನಮ್ಮ ಜೀವಿತದ ಕೊನೆಯವರೆಗೆ ಆರೋಗ್ಯವನ್ನು ಕಾಪಾಡಿಕೊಳ್ಳುವುದು ನಮ್ಮ ಜವಾಬ್ದಾರಿ ಎಂದು ತಹಶೀಲ್ದಾರ್ ಎಂ.ವಿ.ರೂಪ ಹೇಳಿದರು.

ಪಟ್ಟಣದ ತಾಲ್ಲೂಕು ಕಚೇರಿಯ ತಹಶೀಲ್ದಾರ್ ಸಭಾಂಗಣದಲ್ಲಿ ಕಂದಾಯ ಇಲಾಖೆ ಹಾಗೂ ಆರ್ ಎಲ್ ಜಾಲಪ್ಪ ನಾರಾಯಣ ಹಾರ್ಟ್ ಸೆಂಟರ್ ವತಿಯಿಂದ ಹಮ್ಮಿಕೊಂಡಿದ್ದ ಹೃದಯ ಸಂಬಂಧಿ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದರು.



ಮನುಷ್ಯ ಜೀವಿತದ ಕೊನೆಯವರೆಗೆ ಆರೋಗ್ಯವನ್ನು ಕಾಪಾಡಿಕೊಂಡರೆ ನಮ್ಮ ಕುಟುಂಬದಷ್ಟು ಸಮಾಜಕ್ಕೆ ನಾವು ಸಾರ್ವಜನಿಕವಾಗಿ ಅಗತ್ಯವಿರುತ್ತೇವೆ, ಪ್ರತಿಯೊಬ್ಬರು ಬೆಳಗ್ಗೆ ಎದ್ದು ನಮ್ಮ ಪ್ರತಿನಿತ್ಯ ದೇವರನ್ನು ನೋಡುವುದರ ಜೊತೆಗೆ ನಮ್ಮ ಆತ್ಮ ಖುಷಿಯಾಗಿಸಿ, ಆರೋಗ್ಯದ ಕಡೆ ಹೆಚ್ಚಿನ ಕಾಳಜಿ ವಹಿಸಬೇಕು, ದೇಹ ಸದೃಢವಾಗಿರಲು ಆರೋಗ್ಯದ ಕಡೆ ಹೆಚ್ಚು ಗಮನ ಹರಿಸಬೇಕು, ಕೆಲವು ಕಡೆ ಗ್ರಾಮ ಸಹಾಯಕರು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳದೆ ಹೃದಯಾಘಾತ ಸೇರಿದಂತೆ ಕೆಲವು ಕಾಯಿಲೆಗಳಿಂದ ಅನಾರೋಗ್ಯದಿಂದ ಮರಣ ಹೊಂದಿದ್ದಾರೆ. ಪ್ರತಿನಿತ್ಯ ಕೆಲಸದ ಒತ್ತಡದ ನಡುವೆ ಕೆಲಸ ಮಾಡುವ ಕಂದಾಯ ಇಲಾಖೆ ಅಧಿಕಾರಿಗಳು ಸಿಬ್ಬಂದಿ ಆರೋಗ್ಯದ ಹಿತದೃಷ್ಟಿಯಿಂದ ಇದೇ ಮೊದಲ ಬಾರಿಗೆ ಆರ್ ಎಲ್ ಜಾಲಪ್ಪ ನಾರಾಯಣ ಹಾರ್ಟ್ ಸೆಂಟರ್ ಸಹಯೋಗದಲ್ಲಿ ಹೃದಯ ರೋಗ ತಪಾಸಣಾ ಶಿಬಿರ ಏರ್ಪಡಿಸಲಾಗಿದೆ. ಕೆಲವರಿಗೆ ಬಿಪಿ ಇರುತ್ತದೆ ಆದರೆ ನಿರ್ಲಕ್ಷ ಮಾಡಿದರೆ ಹೆಚ್ಚು ಉಲ್ಬಣಗೊಂಡು ಅಡ್ಡ ಪರಿಣಾಮ ಬೀರುತ್ತದೆ, ವಯೋಸಹಜ ಕಾಯಿಲೆಗಳು ವಯಸ್ಸಿನ ಮಿತಿ ಇಲ್ಲದೆ ಬರುತ್ತಿದೆ, ವೈದ್ಯರಿಂದ ಹೃದಯ ತಪಾಸಣೆ ಮಾಡಿಸಿಕೊಂಡು ಆರೋಗ್ಯ ಕಾಪಾಡಿಕೊಳ್ಳುವುದರ ಮೂಲಕ ಆರೋಗ್ಯವಂತ ಸಮಾಜದಲ್ಲಿ ತಮ್ಮ ಕೆಲಸ ಕಾರ್ಯಗಳನ್ನು ಪರಿಣಾಮಕಾರಿಯಾಗಿ ಮಾಡುವಂತೆ ತಿಳಿಸಿದರು.

ನಾರಾಯಣ ಹಾರ್ಟ್ ಸೆಂಟರ್‌ನ ಹೃದಯ ರೋಗ ತಜ್ಞ ಡಾ.ಕಿರಣ್ ಮಾತನಾಡಿ, ನಾರಾಯಣ ಹಾರ್ಟ್ ಸೆಂಟರ್ ವತಿಯಿಂದ ಹೃದಯ ಸಂಬಂಧಿ ಕಾಯಿಲೆಗಳ ಬಗ್ಗೆ ಜಿಲ್ಲೆಯಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತಿದೆ, ಕೆಲವರು ಎದೆ ನೋವು ಕಾಣ ಸಿಕೊಂಡಾಗ ಗ್ಯಾಸ್ಟಿಕ್ ಸಮಸ್ಯೆ ಎಂದು ನಿರ್ಲಕ್ಷ ಮಾಡದೆ ನಮ್ಮಲ್ಲಿರುವ ಕಾಯಿಲೆ ಗುರುತಿಸಿ ಚಿಕಿತ್ಸೆ ಪಡೆಯಬೇಕು, ಹೃದಯ ಕಾಯಿಲೆ ಇರುವವರಿಗೆ ಒಂದೊಂದು ಕ್ಷಣವೂ ಅಮೂಲ್ಯವಾದವಿರುತ್ತದೆ, ನಮ್ಮಲ್ಲಿರುವ ಒತ್ತಡವನ್ನು ಹೊರಹಾಕಲು ಪ್ರತಿನಿತ್ಯ ನಡಿಗೆ, ಯೋಗ, ವ್ಯಾಯಾಮ, ಮಾಡುವುದರ ಮೂಲಕ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎದೆ ನೋವಿನಂತಹ ಸಮಸ್ಯೆ ನಿಮ್ಮಲ್ಲಿ ಕಾಣ ಸಿಕೊಂಡಾಗ ತಕ್ಷಣ ನಿಮ್ಮ ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯರ ಬಳಿ ತಪಾಸಣೆ ಮಾಡಿಸಿಕೊಂಡು ಸೂಕ್ತ ಚಿಕಿತ್ಸೆ ಪಡೆದುಕೊಳ್ಳುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಗ್ರೇಡ್ 2 ತಹಸಿಲ್ದಾರ್ ಹರಿಪ್ರಸಾದ್, ಉಪ ತಹಶಿಲ್ದಾರ್ ಜಯಂತಿ, ರಾಜಸ್ವನೀರಿಕ್ಷಕ ಅರುಣ್ ಕುಮಾರ್, ನಾರಾಯಣಸ್ವಾಮಿ, ಚುನಾವಣೆ ಶಾಖೆಯ ಶಿರಸ್ತೆದಾರ್ ಸಂಪತ್, ಮುಜರಾಯಿ ಶಾಖೆಯ ಹರಿಪ್ರಸಾದ್, ಶ್ರೀಪತಿ, ನಾರಾಯಣಸ್ವಾಮಿ, ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ ವಿ ಮುನೇಶ್, ಕಾರ್ಯದರ್ಶಿ ರಾಹುಲ್, ಖಜಾಂಚಿ ರಾಹುಲ್, ಗ್ರಾಮ ಆಡಳಿತ ಅಧಿಕಾರಿಗಳು ತಾಲೂಕು ಕಚೇರಿಯ ಸಿಬ್ಬಂದಿ ಕಲ್ಪಕಲಾ, ಅನಿತಾ, ಸವಿತ, ಮಾದುರಿ, ಶರತ್, ನಾರಾಯಣ ಹಾರ್ಟ್ ಸೆಂಟರ್‌ನ ವ್ಯವಸ್ಥಾಪಕ ವೆಂಕಟರಾಮರೆಡ್ಡಿ, ಸಿಬ್ಬಂದಿ ವರ್ಗ, ಆರೋಗ್ಯ ತಪಾಸಣಾ ಶಿಬಿರದಲ್ಲಿ ಹಾಜರಿದ್ದರು.

# ಸರ್ಕಾರಿ ಶಾಲೆಗಳ ಉಳಿವು ಶಿಕ್ಷಕರ-ಪೋಷಕರ ಕೈಯಲ್ಲಿದೆ

**ಶಿಡ್ಲಘಟ್ಟ:** ಸರ್ಕಾರಿ ಶಾಲೆಗಳ ಅಳಿವು ಉಳಿವು ಶಾಲಾ ಶಿಕ್ಷಕರು ಹಾಗೂ ಪೋಷಕರ ಕೈಯಲ್ಲಿದೆ ಎಂದು ನಗರಸಭೆ ಪೌರಾಯುಕ್ತರಾದ ವಿ.ಮೋಹನ್‌ಕುಮಾರ್ ತಿಳಿಸಿದರು.

ನಗರದ ಸಿದ್ದಾರ್ಥನಗರ ಬಡಾವಣೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಮಕ್ಕಳಿಗೆ ಉತ್ತಮ ಮೌಲ್ಯಗಳನ್ನು ಕಲಿಸುವ ಜವಾಬ್ದಾರಿ ಶಿಕ್ಷಕರದ್ದು ಇಂದು ಸ್ಪರ್ಧಾತ್ಮಕ ಯುಗದಲ್ಲಿ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳನ್ನೂ ಪ್ರೋತ್ಸಾಹಿಸಬೇಕು ಎಂದು ಹೇಳಿದರು.

ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಜೊತೆಗೆ ಅಗತ್ಯ ಮೂಲಭೂತ ಸವಲತ್ತುಗಳಿದ್ದರೂ ಮುಚ್ಚುವ ಹಂತ ತಲುಪುತ್ತಿರುವುದು ಆತಂಕಕಾರಿ ವಿಚಾರವಾಗಿದೆ ಮಕ್ಕಳು ಹಾಗೂ ಪೋಷಕರು ಕೈ ಜೋಡಿಸಿದರೆ ಮಾತ್ರ ಈ ಶಾಲೆಗಳನ್ನು ಉಳಿಸಬಹುದಾಗಿದೆ ಎಂದರು.

ಮಕ್ಕಳಿಗೆ ಉತ್ತಮ ಮೌಲ್ಯಗಳನ್ನು ಕಲಿಸುವ ಜವಾಬ್ದಾರಿ ಶಿಕ್ಷಕರದ್ದು ಇಂದು ಸ್ಪರ್ಧಾತ್ಮಕ ಯುಗದಲ್ಲಿ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳನ್ನೂ ಪ್ರೋತ್ಸಾಹಿಸಬೇಕು ಎಂದು ಸಲಹೆ ನೀಡಿದರು.

ಸಾಮಾನ್ಯವಾಗಿ ಖಾಸಗಿ ಶಾಲೆಗಳು ಶಾಲಾ ವಾರ್ಷಿಕೋತ್ಸವವನ್ನು ಅದ್ದೂರಿಯಾಗಿ ಆಚರಿಸುತ್ತವೆ,ಆದರೆ ಬಡಾವಣೆ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕರು, ಸಿಬ್ಬಂದಿ, ಪೋಷಕರು ಹಾಗೂ ಎಸ್.ಡಿ.ಎಂ.ಸಿ ಸಹಕಾರ ಪಡೆದು ಬಹಳ ಚೆನ್ನಾಗಿ ಕಾರ್ಯಕ್ರಮ ಆಚರಣೆ ಮಾಡುತ್ತಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಗಂಗರಾಜು ಮಾತನಾಡಿ, ಈ ಶಾಲೆಯನ್ನು ಉಳಿಸಲು ನಾವೂ ಕೆಲವು ಯೋಜನೆಗಳನ್ನು ರೂಪಿಸಿದ್ದೇವೆ ಈ ವಾರ್ಷಿಕೋತ್ಸವ ಕೂಡ ಅದರ ಪೂರ್ವಭಾವಿ ಪ್ರಯತ್ನವಾಗಿದೆ ಹಳೆಯ ವಿದ್ಯಾರ್ಥಿಗಳು ಮತ್ತು ಸ್ಥಳೀಯರು ಮುಂದಿನ ವರ್ಷದಿಂದ ಇನ್ನಷ್ಟು ಅದ್ದೂರಿಯಾಗಿ ಈ ಕಾರ್ಯಕ್ರಮವನ್ನು ಆಯೋಜಿಸಬಹುದು ಎಂದ ಅವರು ಪೋಷಕರ ಸಹಕಾರದಿಂದ ಈ ವರ್ಷ ಶಾಲಾ ವಾರ್ಷಿಕೋತ್ಸವ ಅತ್ಯಂತ ಯಶಸ್ವಿಯಾಗಿ ನಡೆಸಲು ಸಾಧ್ಯವಾಯಿತು ಎಂದು ಸಂತಸ ವ್ಯಕ್ತಪಡಿಸಿದರು.

ಇದೇ ವೇಳೆ ಶಾಲಾ ಮಕ್ಕಳಿಂದ ನಡೆದ ವಿವಿಧ ನೃತ್ಯಗಳು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಅದ್ಭುತವಾಗಿ ಮೂಡಿಬಂದವು. ಮಕ್ಕಳ ರಸಮಂಜರಿ ಕಾರ್ಯಕ್ರಮದಿಂದ ವೀಕ್ಷಕರನ್ನು ಆಕರ್ಷಿಸಿತು.

# ದೈಹಿಕ ಮಾನಸಿಕ ಸದೃಢ ಆರೋಗ್ಯಕ್ಕೆ ಯೋಗಭ್ಯಾಸ ಅಗತ್ಯ:ಆದರ್ಶ




**ನಾಗಮಂಗಲ:** ಭಾರತೀಯ ಪ್ರಾಚೀನ ಪರಂಪರೆಯ ಯೋಗ ಇಂದು ನಮ್ಮಗಳ ಸದೃಢ ಆರೋಗ್ಯ ದೈಹಿಕ ಮಾನಸಿಕ ವ್ಯಕ್ತಿತ್ವಕ್ಕೆ ಯೋಗ್ಯ ಯೋಗಭ್ಯಾಸ ಅಗತ್ಯವಾಗಿದೆ ಎಂದು ತಾಲೂಕು ದಂಡಾಧಿಕಾರಿಗಳಾದ ಆದರ್ಶ ಮಾತನಾಡಿದರು.

ಅವರು ಕೇಂದ್ರ ಸರ್ಕಾರದಿಂದ ಪ್ರಾರಂಭಿಸಿರುವ ನಾಗಮಂಗಲ ತಾಲೂಕಿನ ಹೊನ್ನಬೆಟ್ಟದ ಹೊಸೂರಿನ ಬಳಿಯ ಪ್ರಕೃತಿ ಚಿಕಿತ್ಸಾ ಮತ್ತು ಯೋಗ ಕೇಂದ್ರದಲ್ಲಿ ಆಯೋಜನೆ ಮಾಡಿದ್ದ ಯೋಗ ದಿನದ ಅಂಗವಾಗಿ ಏರ್ಪಡಿಸಿದಂತಹ ಯೋಗ ಕಾರ್ಯಕ್ರಮದಲ್ಲಿ ಭಾಗವಹಿಸಿ, ಮಾತನಾಡಿದರು.

ಜನರು ಡಯಾಬಿಟಿಸ್ ಬಿಪಿ, ಕ್ಯಾನ್ಸರ್.ನಂತಹಕಾಯಿಲೆಗಳಿಂದ ಬಳಲುತ್ತಿದ್ದು ಇದರಿಂದ ಮುಕ್ತಿಗೆ ಒಂದೇ ಮಾರ್ಗ ಯೋಗಭ್ಯಾಸ ಅಗತ್ಯವಾಗಿದ್ದು ಹಾಗೂ ವಿವಿಧ ಕಾಯಿಲೆಗಳಿಗೆ ರಾಮಬಾಣವಾಗಿರುವ ಯೋಗ ವ್ಯಾಯಾಮ ಮೈಗೂಡಿಸಿಕೊಳ್ಳುವಂತೆ ತಿಳಿಸಿದರು.

ಯೋಗ ಪಟು ಲಕ್ಷ್ಮಣನವರು ಮಾತನಾಡಿ, ಇದು ಭಾರತದಲ್ಲಿ ಹುಟ್ಟಿದಂತಹ ಯೋಗವಾದರೂ ಇಂದು ಪ್ರಪಂಚವೇ ಇದನ್ನ ಮನ್ನಣೆ ಮಾಡಿ ಇದನ್ನು ಸ್ವೀಕಾರ ಮಾಡಿದೆ. ನಾವು ಮಾನಸಿಕವಾಗಿ ಇಚ್ಛೆಪಟ್ಟು ಈ ಯೋಗಭ್ಯಾಸದಲ್ಲಿ ತೊಡಗಬೇಕು. ಇದರಿಂದ ನಮ್ಮ ಆರೋಗ್ಯ ವೃದ್ಧಿಸುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮನ್ನ ಉದ್ಘಾಟಿಸಿ ಮಾತನಾಡಿದಂತಹ ಕಲ್ಲುದೇವನಹಳ್ಳಿ ನಂಜಪ್ಪ ಗೌಡ್ರು ತನ್ನ 80 ದಾಟಿದ ವಯಸ್ಸಿನಲ್ಲಿಯೂ ಸಹ ನಾನು ನನ್ನ ಆರೋಗ್ಯ ಸುಧಾರಣೆಗೆ ಯೋಗಭ್ಯಾಸವನ್ನು ಮಾಡುತ್ತಿದ್ದೇನೆ. ಅದರಲ್ಲಿ ಕೆಲವು ಕಠಿಣವಾದವನ್ನು ಮಾಡಲಾಗದಿದ್ದರೂ ನನ್ನ ಕೈಲಾಗುವಷ್ಟು ವ್ಯಾಯಾಮಗಳನ್ನು ಮಾಡುವುದರ ಮೂಲಕ ನನ್ನ ಆರೋಗ್ಯವನ್ನು ಸುಧಾರಿಸಿಕೊಳ್ಳುತ್ತಿದ್ದೇನೆ. ಇದೊಂದು ವಿಶ್ವ ಮಾನ್ಯವಾಗಿದೆ, ಯೋಗಾಸನ ನಮ್ಮ ಭಾರತದಲ್ಲಿ ಹುಟ್ಟಿದರು ಸಹ,ಇವತ್ತು ಪ್ರಪಂಚದಾದ್ಯಂತ ಈ ಯೋಗಕ್ಕೆ ಮನ್ನಣೆ ಸಿಕ್ಕಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಿರ್ದೇಶಕರಾದಂತಹ ವಾದಿರಾಜರವರು ಎಲ್ಲರಿಗೂ ಅಭಿನಂದನೆಗಳು ತಿಳಿಸಿ, ವೇದಿಕೆಯಲ್ಲಿದ್ದ ಗಣ್ಯರಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಈ ದಿನದ ಯೋಗ ದಿನದಲ್ಲಿ ಒಂದು ಸಾವಿರಕ್ಕೂ ಅಧಿಕ ಜನ ಯೋಗಾಭ್ಯಾಸಕ್ಕೆ ಬಂದು ತೊಡಗಿ ಯೋಗ ಅಭ್ಯಾಸದಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಕಲ್ಲು ದೇವನಹಳ್ಳಿ ಶಿವಣ್ಣಗೌಡರು ಬ್ರಹ್ಮದೇವರಹಳ್ಳಿ ಲೋಕೇಶ್ ಸ್ವಾಮಿ ಹಾಗೂ ತಾಲೂಕಿನ ವಿವಿಧ ಯೋಗ ತಂಡಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

# ಸಚಿವ ಡಾ.ಎಂ.ಸಿ.ಸುಧಾಕರ್ ಹುಟ್ಟುಹಬ್ಬದ ಅಂಗವಾಗಿ ಅನ್ನಸಂತರ್ಪಣೆ



**ಚಿಕ್ಕಬಳ್ಳಾಪುರ:** ಸತತವಾಗಿ 9 ತಿಂಗಳಿಂದ ನಗರದ ಎಪಿಎಂಸಿ ತರಕಾರಿ ಮಾರುಕಟ್ಟೆಯಲ್ಲಿ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಮಾಜಿ ಅಧ್ಯಕ್ಷ ಹಾಗೂ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಯಲುವಹಳ್ಳಿ ಎನ್. ರಮೇಶ್ ಅಭಿಮಾನಿಗಳಿಂದ ಮಾರುಕಟ್ಟೆಗೆ ದೊರದ ಸ್ಥಳಗಳಿಂದ ಆಗಮಿಸುವ ರೈತರಿಗೆ ಹಾಗೂ ಶ್ರಮಿಕವರ್ಗದವರಿಗೆ ಒಂದೊತ್ತಿನ ಊಟ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯುತ್ತಿದ್ದು, ಬುಧವಾರ ಕೂಡ ಅನ್ನಸಂತರ್ಪಣೆ ನಡೆಯಿತು.

ಅನ್ನಸಂತರ್ಪಣೆಯ 9 ತಿಂಗಳು ಪೊರೈಸಿದ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ. ಸುಧಾಕರ್ ರವರ ಹುಟ್ಟುಹಬ್ಬ ಅಂಗವಾಗಿ ಹೆಚ್ಚುವರಿಯಾಗಿ ಅನ್ನಸಂತರ್ಪಣೆ ನಡೆಯಿತು.ಎನ್. ರಮೇಶ್ ಮಗ ಜನಾರ್ಧನ್,ಸೊಸೆ ಹೇಮಲತಾ ಜನಾರ್ಧನ್ ಸ್ವತಃ ತಾವೇ ನಿಂತು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಡೆಸಿಕೊಟ್ಟರು.

ಯಲುವಹಳ್ಳಿ ಜನಾರ್ಧನ್ ಮಾತನಾಡಿ ಉನ್ನತ ಶಿಕ್ಷಣ ಸಚಿವರಾಗಿ ಜಿಲ್ಲೆಯ ಉಸ್ತುವಾರಿ ವಹಿಸಿಕೊಂಡ ಡಾ.ಎಂ.ಸಿ ಸುಧಾಕರ್ ಜಿಲ್ಲೆಯ ಅಭಿವೃದ್ದಿಗೆ ಸಾಕಷ್ಟು ಶ್ರಮವಹಿಸಿದ್ದಾರೆ. ತಂದೆಯಂತೆ ಮಗನೂ ಹಿಡಿದ ಕೆಲಸ ಆಗುವರೆಗೂ ಬಿಡದೆ ಹಿಂಬಾಲಿಸಿ ಮಾಡಿಸುತ್ತಾರೆ. ಜಿಲ್ಲೆಗೆ ಹೈ ಟೆಕ್ ಹೂವಿನ ಮಾರುಕಟ್ಟೆ ಇಂಜನಿಯರಿಂಗ್ ಕಾಲೇಜು,ರೇಷ್ಮೆ ಮಾರುಕಟ್ಟೆ ತರುವ ಮೂಲಕ ಜನಮನದಲ್ಲಿ ಉಳಿಯುವಂತ ಯೋಜನೆಗಳ ಜಿಲ್ಲೆಗೆ ತಂದಿದ್ದು ಅವರ ಸೇವೆ ಇನ್ನಷ್ಟು ಮತ್ತಷ್ಟು ವರ್ಷಗಳ ಕಾಲ ಜಿಲ್ಲೆಯ ಜನರಿಗೆ ರಾಜಕೀಯದಲ್ಲಿ ಅವರು ಇನ್ನಷ್ಟು ಉನ್ನತ ಸ್ಥಾನ ಪಡೆಯಲಿ.ಅವರ ಕುಟುಂಬಕ್ಕೆ ದೇವರು ಆಯುಸ್ಸು ಆರೋಗ್ಯ ಕೊಟ್ಟು ಕಾಪಾಡಲಿ ಅವರ ಸೇವೆ ಇನ್ನಷ್ಟು ಮತ್ತಷ್ಟು ಜನರಿಗೆ ಸಿಗಲಿ ಸುಖಜೀವನ ಸಾಗಿಸಲಿ ಎಂದು ಶುಭಕೋರಿದರು.

ಈ ವೇಳೆ ಎಪಿಎಂಸಿ ಮಾರುಕಟ್ಟೆ ವರ್ತಕ ಕಣಜೇನಹಳ್ಳಿ ಸುರೇಶ್ ಮಾತನಾಡಿ ಕೂಲಿ ಮಾಡಿ ಅಷ್ಟಿಷ್ಟು ಸಂಪಾದಿಸುವ ಬಡವರಿಗೆ ಸತತವಾಗಿ 9 ತಿಂಗಳಿಂದ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಸುತ್ತಿರುವ ಎನ್.ರಮೇಶ್ ಅಣ್ಣನವರ ಸೇವೆ ಮೆಚ್ಚುವಂತಹದ್ದು ವಿವಿಧ ಜಿಲ್ಲೆಗಳಿಂದ ಮಾರುಕಟ್ಟೆಗೆ ಬರುವವರೆಗೆ ಒಂದೊತ್ತು ಊಟ ನೀಡುವ ಕಾರ್ಯಕ್ರಮ ಇದಾಗಿದ್ದು ಯಲವಹಳ್ಳಿ ರಮೇಶ್ ಜನರ ಪ್ರೀತಿಗೆ ಪಾತ್ರರಾಗಿದ್ದಾರೆ. ವಾರಕ್ಕೆ ಎರಡು ದಿನ ನಡೆಯುವ ಅನ್ನಸಂತರ್ಪಣೆ 9 ತಿಂಗಳು ಪೂರೈಸಿದೆ ಅನ್ನಸಂತರ್ಪಣೆ ಪ್ರತಿ ದಿನ ಮಾಡುವ ಶಕ್ತಿ ಆ ದೇವರು ಅವರಿಗೆ ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದರು.ಈ ವೇಳೆ ಹೇಮಲತಾ ಜನಾರ್ಧನ್,ಲಕ್ಷ್ಮಣ್, ಮತ್ತು ಇತರರು ಉಪಸ್ಥಿತರಿದ್ದರು.

## ನೀರಿನ ಸಮಸ್ಯೆ : ದೂರು ಸಲ್ಲಿಕೆಗಾಗಿ ಸಹಾಯವಾಣಿ

ತುಮಕೂರು: ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಸಂಬಂಧಿಸಿದ ದೂರುಗಳನ್ನು ಸಲ್ಲಿಸಲು ಸಹಾಯವಾಣಿಯನ್ನು ಸ್ಥಾಪಿಸಲಾಗಿದೆ.

ದೂರು ಸಲ್ಲಿಸುವವರು ಸಹಾಯವಾಣಿ ಸಂಖ್ಯೆ 155304/0816-2213400/ 0816-2213401ಕ್ಕೆ ಕರೆ ಮಾಡಿ ದೂರು ದಾಖಲಿಸಬಹುದಾಗಿದೆ. ಸಾರ್ವಜನಿಕರು ಸಹಾಯವಾಣಿ ಸಂಖ್ಯೆಯ ಪ್ರಯೋಜನ ಪಡೆಯಬೇಕೆಂದು ಪಾಲಿಕೆಯ ಕಾರ್ಯ ಪಾಲಕ ಅಭಿಯಂತರ ಸಂದೀಪ್ ಕೆ.ಎಸ್. ಮನವಿ ಮಾಡಿದ್ದಾರೆ.

## ಜಿಲ್ಲಾ ಮಟ್ಟದ ಜನ ಜಾಗೃತಿ ಕಾರ್ಯಕ್ರಮ

**ತುಮಕೂರು:** ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಹಾನಗರಪಾಲಿಕೆ ಹಾಗೂ ಡಾ: ಬಿ.ಆರ್. ಅಂಬೇಡ್ಕರ್ ಯುವಜನ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಮದ್ಯ ಹಾಗೂ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವ “ಜಿಲ್ಲಾ ಮಟ್ಟದ ಜನ ಜಾಗೃತಿ ಕಾರ್ಯಕ್ರಮ”ವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ. ಪ್ರಭು, ಜಿಲ್ಲೆಯ ವಿವಿಧ ಜನಪ್ರತಿನಿಧಿಗಳು, ಗಣ್ಯರು, ಅಧಿಕಾರಿಗಳು ಸೇರಿದಂತೆ ಮತ್ತಿತರರು ಭಾಗವಹಿಸುವರು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಿ. ಹಿಮಂತರಾಜು ತಿಳಿಸಿದ್ದಾರೆ.

## ಮಾ. 26ರಂದು ಸಾರ್ವಜನಿಕ ಕುಂದು ಕೊರತೆ ಸಭೆ

**ತುಮಕೂರು:** ಲೋಕಾಯುಕ್ತ ಪೊಲೀಸ್ ಅಧಿಕಾರಿಗಳ ನೇತೃತ್ವದಲ್ಲಿ ಮಾರ್ಚ್ 24ರಂದು ಮಧುಗಿರಿ ಹಾಗೂ ಮಾರ್ಚ್ 26ರಂದು ತುರುವೇಕೆರೆಯಲ್ಲಿ “ಸಾರ್ವಜನಿಕ ಕುಂದುಕೊರತೆ ಸಭೆ, ಅಹವಾಲು ಸ್ವೀಕಾರ ಸಭೆ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ”ಯನ್ನು ಏರ್ಪಡಿಸಲಾಗಿದೆ.

ಸಭೆಯು ನಿಗಧಿತ ದಿನಾಂಕದಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಆಯಾ ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ ನಡೆಯಲಿದ್ದು, ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಪೊಲೀಸ್ ಅಧೀಕ್ಷಕ ಲಕ್ಷ್ಮೀನಾರಾಯಣ ಎ.ವಿ. ಮನವಿ ಮಾಡಿದ್ದಾರೆ.

## ಯೋಗ ತರಬೇತಿದಾರರ ಹುದ್ದೆಗೆ ಅರ್ಜಿ

**ರಾಮನಗರ:** ರಾಮನಗರ ತಾಲ್ಲೂಕಿನ ತುಂಬೇನಹಳ್ಳಿ, ಹೊಸೂರು, ಕನಕಪುರ ತಾಲ್ಲೂಕಿನ ಕೊಳಗೊಂಡನಹಳ್ಳಿ, ಹೊರಳಗಲ್ಲು, ಬಿಜ್ಜಹಳ್ಳಿ, ಮಾಗಡಿ ತಾಲ್ಲೂಕಿನ ಮೋಟಗಾನಹಳ್ಳಿಯಲ್ಲಿ ಜಿಲ್ಲಾ ಆಯುಷ್ ಇಲಾಖೆಯ ವ್ಯಾಪ್ತಿಯ ಆಯುಷ್ಮಾನ್ ಆರೋಗ್ಯ ಮಂದಿರ (ಆಯುಷ್)ದಲ್ಲಿ ಅಂಶಕಾಲಿಕ ಯೋಗ ತರಬೇತಿದಾರರ 7 ಹುದ್ದೆಗಳು ಖಾಲಿಯಿದ್ದು, ಯೋಗ ತರಬೇತಿ ಪಡೆದು ಪ್ರಮಾಣ ಪತ್ರ ಹೊಂದಿರುವ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಅಭ್ಯರ್ಥಿಗಳು ಕಚೇರಿ ವೇಳೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಜಿಲ್ಲಾ ಆಯುಷ್ ಕಚೇರಿ, ಕೊಠಡಿ ಸಂಖ್ಯೆ : 208, ಎರಡನೇ ಮಹಡಿ, ಜಿಲ್ಲಾ ಪಂಚಾಯತ್ ಭವನ, ರಾಮನಗರ ಅಥವಾ ದೂರವಾಣಿ ಸಂಖ್ಯೆ 080-27272704 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಆಯುಷ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಸಲಹಾ ಸಮಿತಿ ರಚಿಸಲು ಅರ್ಜಿ

**ರಾಮನಗರ:** ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣದ ಇಲಾಖೆ ವತಿಯಿಂದ ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿದ ಒಬ್ಬ ಸದಸ್ಯರನ್ನು ನಾಮ ನಿರ್ದೇಶನ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಹರು ಮಾ. 29ರ ಸಂಜೆ 5 ಗಂಟೆಯೊಳಗೆ ಪೂರಕ ದಾಖಲೆಗಳೊಂದಿಗೆ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ರಾಮನಗರ ಜಿಲ್ಲೆ, 2ನೇ ಮಹಡಿ ಪಂಚಾಯತ್ ಭವನ, ಬಿ.ಎಂ.ರಸ್ತೆ ರಾಮನಗರ ಇವರಿಗೆ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಇಚ್ಚಿಸುವ ಸದಸ್ಯರುಗಳು ರಾಮನಗರ ಜಿಲ್ಲಾ ವ್ಯಾಪ್ತಿಗೊಳಪಡುವ ರಾಮನಗರ, ಚನ್ನಪಟ್ಟಣ, ಕನಕಪುರ ಮಾಗಡಿ ತಾಲ್ಲೂಕಿನ ವ್ಯಾಪ್ತಿಯ ಖಾಯಂ ನಿವಾಸಿಯಾಗಿರಬೇಕು. ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರ ಏಳಿಗೆಗಾಗಿ ದುಡಿಯುತ್ತಿರಬೇಕು ಹಾಗೂ ವಿದ್ಯಾವಂತರಾಗಿರಬೇಕು. ಸ್ವೀಕೃತಗೊಳ್ಳುವ ಅರ್ಜಿಗಳನ್ನು ಪರಿಶೀಲಿಸಿ ರಾಮನಗರ ಜಿಲ್ಲಾಧಿಕಾರಿಗಳ ಸಮ್ಮುಖದಲ್ಲಿ ಆಯ್ಕೆ ಮಾಡಲಾಗುವುದು. ಈ ಸಮಿತಿಗೆ ಅರ್ಹ ಸದಸ್ಯರ ಆಯ್ಕೆಗೆ ಪರಿಗಣಿಸುವ ಅಥವಾ ತಿರಸ್ಕರಿಸುವ ಅಧಿಕಾರವು ರಾಮನಗರ ಜಿಲ್ಲಾಧಿಕಾರಿಗಳು ಹೊಂದಿರುತ್ತಾರೆ. ಆಧಾರ್ ಕಾರ್ಡ್ ಪ್ರತಿಯನ್ನು ಸಲ್ಲಿಸಬೇಕು. ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ಸಾಮಾಜಿಕ ನ್ಯಾಯಕ್ಕಾಗಿ ದುಡಿದಿರುವ ಬಗ್ಗೆ ಜನಾಂಗದ ಹೇಳಿಗೆಗಾಗಿ ಅರಿವು ಮೂಡಿಸುವ ಬಗ್ಗೆ ಸ್ವಯಂ ದೃಢೀಕರಣ ಹೊಂದಿರುವ ಬಗ್ಗೆ ದಾಖಲೆಗಳು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ರಾಮನಗರ ಜಿಲ್ಲೆ ಇವರನ್ನು ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 29ಕ್ಕೆ ಹಳೇ ವಿದ್ಯಾರ್ಥಿಗಳ ಮಿಲನ ಪೂರ್ವಭಾವಿ ಸಭೆ

**ದೇವನಹಳ್ಳಿ:** ಪಟ್ಟಣದ ಕೊರಚರಪಾಳ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಳೆಯ ವಿದ್ಯಾರ್ಥಿಗಳ ಸಮಿತಿ ವತಿಯಿಂದ ದಿನಾಂಕ 22-03-2025ನೇ ಶನಿವಾರ ಬೆಳಗ್ಗೆ 10-00 ಘಂಟೆಗೆ ಶತಮಾನೋತ್ಸವ ಸಂಭ್ರಮ ಹಳೇ ವಿದ್ಯಾರ್ಥಿಗಳ ಮಿಲನ ಪೂರ್ವಭಾವಿ ಸಭೆ ನಡೆಸಲಾಗುತ್ತದೆ.

ಕೊರಚರಪಾಳ್ಯ ಸರ್ಕಾರಿ ಶಾಲೆಯು ಪ್ರಾರಂಭವಾಗಿ 1925-2025ನೇ ಸಾಲಿಗೆ 100 ವರ್ಷಗಳು ತುಂಬುತ್ತಿರುವ ಈ ಸುಸಂದರ್ಭದಲ್ಲಿ ಈ ಶಾಲೆಯ ಎಲ್ಲಾ ಹಳೆ ವಿದ್ಯಾರ್ಥಿಗಳು ಹಾಗೂ ಕುಟುಂಬದಿಂದ ಅಭ್ಯಾಸ ಮಾಡಿರುವವರು ಹಾಗೂ ಹಿತೈಷಿಗಳು ಮತ್ತು ಶಿಕ್ಷಣಾಸಕ್ತರು ಸೇರ“ಶತಮಾನೋತ್ಸವ ಸಂಭ್ರಮ" ವನ್ನು ದಿನಾಂಕ 12-04-2025 ಶನಿವಾರ ಮತ್ತು 13-04-2025 ಭಾನುವಾರ ಎರಡು ದಿನ ಅದ್ದೂರಿಯಾಗಿ ಆ ಚ ರಿ ಸ ಲ ು ತೀರ್ಮಾನಿಸಲಾಗಿದ್ದು, ಇದರ ಪೂರ್ವ ಸಿದ್ಧತೆಗಾಗಿ ಈ ಶಾಲೆಯಲ್ಲಿ ಓದಿದ ಹಳೇ ವಿದ್ಯಾರ್ಥಿಗಳ / ಪೋಷಕರ/ ಹಳೇ ವಿಧ್ಯಾಗಳ ಕುಟುಂಬದವರ/ ಶಾಲೆಯ ಹಿತೈಷಿಗಳ ಸಭೆಯನ್ನು ಕೊರಚರಪಾಳ್ಯ ಶಾಲೆ ಆವರಣದಲ್ಲಿ ಕೊನೆಯ ಸಭೆ ಕರೆದಿದ್ದು ಈ ಸಭೆಗೆ ತಪ್ಪದೇ ತಾವು ಬನ್ನಿ ಹಾಗೂ ಸ್ನೇಹಿತರನ್ನು ಕರೆತನ್ನಿ ಎಂದು ಹಳೆಯ ವಿದ್ಯಾರ್ಥಿಗಳು, ಶಾಲಾ ಎಸ್.ಡಿ.ಎಂ.ಸಿ, ಹಾಗೂ ಅಧ್ಯಾಪಕ ವೃಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ವಿಕಲಚೇತನ ಮಕ್ಕಳನ್ನು ಬೇರೆವರ ಜೊತೆ ಸಮನ್ವಯಗೊಳಿಸಿ

**ಮಾಲೂರು:** ವಿಕಲಚೇತನ ಮಕ್ಕಳು ಅವರಲ್ಲಿ ವಿಶೇಷವಾದ ಸಾಮರ್ಥ್ಯವಿರುತ್ತದೆ ಅವರನ್ನು ಪ್ರೋತ್ಸಾಹಿಸಬೇಕು ಬೇರೆ ಮಕ್ಕಳ ಜೊತೆ ಅವರನ್ನು ಸಮನ್ವಯಗೊಳಿಸಿ ಮುಖ್ಯ ವಾಹಿನಿಗೆ ತರುವ ಕೆಲಸವಾಗಬೇಕು ಎಂದುಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಎಸ್. ಚಂದ್ರಕಲಾ ಹೇಳಿದರು.

ತಾಲ್ಲೂಕಿನ ಲಕ್ಕೂರಿನ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ ಲಕ್ಕೂರು ಶಾಲಾ ಆವರಣದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಶಾಲಾ ಶಿಕ್ಷಣ ಇಲಾಖೆ ಮಾಲೂರು ಕ್ಷೇತ್ರ ಸಮನ್ವಯ ಶಿಕ್ಷಣ ಸಂಪನ್ಮೂಲ ಕೇಂದ್ರ ವತಿಯಿಂದ ವಿಕಲಚೇತನ ಮಕ್ಕಳಿಗಾಗಿ ಕ್ರೀಡೆ ಮತ್ತು ಅರಿವು ಎಂಬ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ವಿಕಲಚೇತನ ಮಕ್ಕಳಿಗೆ ಅವಕಾಶವನ್ನು ಮಾಡಿಕೊಡಿ ಅವರಿಗೆ ಮುಖ್ಯವಾಹಿನಿಗೆ ಬರಲು ಎಲ್ಲರೂ ಪೋಷಕರು, ಶಿಕ್ಷಕರು, ಸಹಕರಿಸಿದಾಗ ಮಾತ್ರ ಎಂದು ಸಂದೇಶವನ್ನು ನೀಡಿದರು.



ವಿಕಲಚೇತನ ಮಕ್ಕಳಿಗೆ ಭೌತಿಕ ಸಾಮರ್ಥ್ಯ ಮತ್ತು ಶಾರೀರಿಕ ಸಾಮರ್ಥ್ಯಕ್ಕೆ ಸಂಬಂಧಪಟ್ಟಂತೆ ಹಲವಾರು ಚಟುವಟಿಕೆಗಳನ್ನು ನಡೆಸಿ ಆ ಸ್ಪರ್ಧೆಗಳಲ್ಲಿ ವಿಜೇತರಾದಂತಹ ವಿಕಲಚೇತನ ಮಕ್ಕಳಿಗೆ ಪ್ರಶಸ್ತಿ ಪತ್ರ ಮತ್ತು ಬಹುಮಾನಗಳನ್ನು ವಿತರಿಸಿ ವಿಕಲಚೇತನ ಮಕ್ಕಳು ಅವರಲ್ಲಿ ವಿಶೇಷವಾದ ಸಾಮರ್ಥ್ಯವಿರುತ್ತದೆ ಅವರನ್ನು ಪ್ರೋತ್ಸಾಹಿಸಬೇಕು ಬೇರೆ ಮಕ್ಕಳ ಜೊತೆ ಅವರನ್ನು ಸಮನ್ವಯಗೊಳಿಸಿ ಮುಖ್ಯ ವಾಹಿನಿಗೆ ತರುವಂತ ಅತ್ಯಂತ ಮಹತ್ವದ ಕಾರ್ಯವನ್ನು ಪೋಷಕರು ಶಿಕ್ಷಕರು ಸಂಪನ್ಮೂಲ ವ್ಯಕ್ತಿಗಳು ಎಲ್ಲ ಭಾಗಿದಾರರು ಮಾಡುವಂತೆ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಲಕ್ಕೂರು ಗ್ರಾ.ಪಂ.ಅಧ್ಯಕ್ಷೆ ಚೈತ್ರ ರಮೇಶ್ , ಶಾಲೆಯ ಎಸ್ ಡಿಎಂಸಿ ಅಧ್ಯಕ್ಷ ಪುರುಷೋತ್ತಮ, ಸರ್ಕಾರಿ ನೌಕರರ ಸಂಘದ ಪ್ರ. ಕಾರ್ಯದರ್ಶಿ ಎಂ.ರವಿ, ಸಂಪನ್ಮೂಲ ವ್ಯಕ್ತಿ ಎಸ್. ಮೋಹನ್, ಡಿ ಎನ್ ದೊಡ್ಡಿ ಕ್ಲಸ್ಟರ್ ನ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಶ್ರೀಮತಿ ಭಾರತಿ, ಚಿಕ್ಕ ತಿರುಪತಿ ಕ್ಲಸ್ಟರ್ ನ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ವೆಂಕಟೇಶ್, ಲಕ್ಕೂರು ಕ್ಲಸ್ಟರ್ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಚಂದ್ರಶೇಖರ್ ,ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಪುರ ಶಾಲೆಯ ರಮೇಶ್, ಶಾಲೆಯ ಮುಖ್ಯೋಪಾಧ್ಯಾಯರಾದ ವೆಂಕಟೇಶ್, ಹುಲಿಮಂಗಲ ಶಾಲೆಯ ಬಡ್ತಿ ಮುಖ್ಯೋಪಾಧ್ಯಾಯ ನಾರಾಯಣಸ್ವಾಮಿ, ಕೊಡೂರು ಶಾಲೆಯ ಶಿಕ್ಷಕ ಶ್ರೀಮತಿ ಸುನಂದಮ್ಮ, ಮುಖ್ಯೋಪಾಧ್ಯಾಯ ವೇಣುಗೋಪಾಲ್ , ಸೇರಿದಂತೆ ವಿಕಲಚೇತನ ಮಕ್ಕಳು ಪೋಷಕರು ಅಂಗನವಾಡಿ ಕಾರ್ಯಕರ್ತರು ಸಾರ್ವಜನಿಕರು ಶಿಕ್ಷಕರು ಭಾಗವಹಿಸಿದ್ದರು.



# 'ನಾನಿರೋ ಕಡೆ ಎಲ್ಲರನ್ನೂ ಕರೆಸಿಕೊಳ್ತೇನೆ'



ಸಿನಿಪ್ರಿಯರ ಅಚ್ಚುಮೆಚ್ಚಿನ ನಟ ಯಶ್ ಅವರ ಮುಂಬರುವ 'ಟಾಕ್ಸಿಕ್: ಎ ಫೇರಿ ಟೇಲ್ ಫಾರ್ ಗ್ರೋನ್ ಅಪ್ಸ್' ಪ್ರಾಜೆಕ್ಟ್ ಘೋಷಣೆ ಆದಾಗಿನಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ಇಂಗ್ಲಿಷ್ ಮತ್ತು ಕನ್ನಡ ಎರಡರಲ್ಲೂ ಏಕಕಾಲದಲ್ಲಿ ಚಿತ್ರೀಕರಣಗೊಳ್ಳುತ್ತಿರುವ ಸಿನಿಮಾ, ಪ್ರೇಕ್ಷಕರಿಗೆ ಅದ್ಭುತ ಸಿನಿಮೀಯ ಅನುಭವ ಒದಗಿಸಲು ಸಜ್ಜಾಗಿದೆ.

ಇದೀಗ, ಅಮೆರಿಕನ್ ನಟ ಕೈಲ್ ಪೌಲ್ ತಮ್ಮ ಅನುಭವ ಹಂಚಿಕೊಂಡಿದ್ದಾರೆ. "ಭಾರತದ ಸಿನಿಮಾ ಸೆಟ್‌ನಲ್ಲಿ ಅದ್ಭುತ ಅನುಭವ ಪಡೆದುಕೊಂಡೆ. ಆ ಚಿತ್ರದ ಶೀರ್ಷಿಕೆ ಟಾಕ್ಸಿಕ್. ನನ್ನ ಪಾತ್ರಕ್ಕೆ ಅತ್ಯಂತ ಭಾವನಾತ್ಮಕ ದೃಶ್ಯಗಳಿದ್ದವು. ಭಾರತದ ಭಾಷೆ ಕನ್ನಡದಲ್ಲಿ ಮಾತನಾಡಿದೆ. ನಿರ್ದೇಶಕರು ಉತ್ತಮವಾಗಿ ಸಹಕರಿಸಿದರು. ಸಮಯ ತೆಗೆದುಕೊಳ್ಳಲು ತಿಳಿಸಿದರು. ಸದಾ ಹುರಿದುಂಬಿಸುತ್ತಿದ್ದರು. ಒಟ್ಟಾರೆ ಬೆಸ್ಟ್ ಎಕ್ಸ್‌ಪೀರಿಯನ್ಸ್" ಎಂದು ಅಮೆರಿಕನ್ ನಟ ಕೈಲ್ ಪೌಲ್ ಮಾತನಾಡಿರುವ ವಿಡಿಯೋ ವೈರಲ್ ಆಗುತ್ತಿದೆ. ಕನ್ನಡ ಚಿತ್ರರಂಗದಿಂದ ನಿರ್ಮಾಣಗೊಳ್ಳುತ್ತಿರುವ ಪ್ಯಾನ್ ಇಂಡಿಯಾ ಸಿನಿಮಾ ಕನ್ನಡದ ಜೊತೆ ಇಂಗ್ಲಿಷ್‌ನಲ್ಲೂ ಚಿತ್ರೀಕರಣಗೊಳ್ಳುತ್ತಿದೆ. ಬಹುಭಾಷೆಗಳಲ್ಲಿ ಈ ಸಿನಿಮಾ ತೆರೆಗಪ್ಪಳಿಸಲಿದೆ. ಪ್ಯಾನ್ ವರ್ಲ್ಡ್ ಲೆವೆಲ್‌ನಲ್ಲಿ ಬಿಡುಗಡೆ ಆಗಲಿರುವ ಚಿತ್ರದಲ್ಲಿ ವಿದೇಶಿ ಕಲಾವಿದರು, ತಂತ್ರಜ್ಞರು ಕೆಲಸ ಮಾಡಿದ್ದಾರೆ. ಇದೀಗ ಅಮೆರಿಕನ್ ನಟ ಕೈಲ್ ಪೌಲ್ ಅವರ ಗುಣಗಾನ ಅಭಿಮಾನಿಗಳ ಗಮನ ಸೆಳೆದಿದೆ.

'ನಾನೆಲ್ಲೂ ಹೋಗಲ್ಲ, ನಾನಿರೋ ಕಡೆಯೇ ಎಲ್ಲರನ್ನೂ ಕರೆಸಿಕೊಳ್ತೇನೆ': ವಿಡಿಯೋ ವೈರಲ್ ಆಗುತ್ತಿದ್ದು, ಅಭಿಮಾನಿಗಳು ಪ್ರತಿಕ್ರಿಯಿಸಿಸುತ್ತಿದ್ದಾರೆ. ವಿದೇಶಿಗರು ಕನ್ನಡದಲ್ಲಿ ಮಾತನಾಡುವಂತೆ ಮಾಡಿರುವ ಚಿತ್ರದ ಸಾರಥಿ ಯಶ್ ಅವರ ಬಗ್ಗೆ ವ್ಯಾಪಕ ಪ್ರಶಂಸೆ ವ್ಯಕ್ತವಾಗುತ್ತಿದೆ. ಈ ಹಿಂದೆ, ನೀವು ಬಾಲಿವುಡ್‌ಗೆ ಹೋಗ್ತೀರಾ? ಎಂದು ನಟನಿಗೆ ಪ್ರಶ್ನೆಗಳು ಎದುರಾಗಿದ್ದವು. ಅದಕ್ಕೆ ಉತ್ತರಿಸಿದ್ದ ರಾಕಿಂಗ್ ಸ್ಟಾರ್, ನಾನೆಲ್ಲೂ ಹೋಗಲ್ಲ, ನಾನಿರೋ ಕಡೆಯೇ ಎಲ್ಲರನ್ನೂ ಕರೆಸಿಕೊಳ್ತೇನೆ ಎಂದು ತಿಳಿಸಿದ್ದರು. ಅದರಂತೆ, ಇದೀಗ ಕನ್ನಡದ ಖ್ಯಾತ ನಟನ ಸಿನಿಮಾದಲ್ಲಿ ಬಾಲಿವುಡ್ ಸೇರಿ ಭಾರತೀಯ ಚಿತ್ರರಂಗದ ಖ್ಯಾತನಾಮರೂ ಮಾತ್ರವಲ್ಲದೇ ಹಾಲಿವುಡ್ ಸೆಲೆಬ್ರಿಟಿಗಳು, ತಂತ್ರಜ್ಞರು ಕೆಲಸ ಮಾಡುತ್ತಿದ್ದಾರೆ. ಹಾಲಿವುಡ್ ಮಂದಿ ಕನ್ನಡದಲ್ಲಿ ಚಿತ್ರೀಕರಣ ಮಾಡಿದ್ದಾರೆ. ಹಾಗಾಗಿ, ಯಶ್ ಅವರು ಒಂದು ಸಿನಿಮಾಗೆ ಇಷ್ಟೊಂದು ಸಮಯ ಮೀಸಲಿಟ್ಟಿದ್ದು ಸಾರ್ಥಕವಾಗಿದೆ. ಸಿನಿಮಾ ಅದ್ಭುತವಾಗಿ ಮೂಡಿಬರಲಿದೆ ಎಂದು ಅಪಾರ ಸಂಖ್ಯೆಯ ಅಭಿಮಾನಿಗಳು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಇನ್ನೂ, ಜಾನ್ ವಿಕ್, ಫಾಸ್ಟ್ ಅಂಡ್ ಫ್ಯೂರಿಯಸ್, ಅವತಾರ್: ದಿ ವೇ ಆಫ್ ವಾಟರ್ ಮತ್ತು ಟ್ರಾನ್ಸ್‌ಫಾರ್ಮರ್ಸ್: ದಿ ಲಾಸ್ಟ್ ನೈಟ್‌ನಂತಹ ಬ್ಲಾಕ್‌ಬಸ್ಟರ್ ಆ್ಯಕ್ಷನ್ ಸಿನಿಮಾಗಳಿಂದ ಜನಪ್ರಿಯರಾಗಿರುವ ಹಾಲಿವುಡ್ ಸ್ಟಂಟ್ ಮ್ಯಾನ್ ಜೆಜೆ ಪೆರ್ರಿ ಅವರು ಇತ್ತೀಚೆಗಷ್ಟೇ ತಮ್ಮ ಕೆಲಸ ಪೂರ್ಣಗೊಳಿಸಿದ್ದಾರೆ.

ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಶೇರ್ ಮಾಡಿದ್ದ ನಟ, "ಗೆಳೆಯ ಯಶ್ ಜೊತೆ ಟಾಕ್ಸಿಕ್‌ನಲ್ಲಿ ಕೆಲಸ ಮಾಡಿದ್ದು ಬಹಳ ಸಂತೋಷ ಕೊಟ್ಟಿದೆ. ಭಾರತದಲ್ಲಿ ಗುಣಮಟ್ಟದ ಸಮಯ ಕಳೆದೆ. ಸಿನಿಮಾ ಅದ್ಭುತವಾಗಿದೆ. ನಮ್ಮ ಕೆಲಸದ ಬಗ್ಗೆ ಹೆಮ್ಮೆಯಿದೆ" ಎಂದು ತಿಳಿಸಿದ್ದರು. ಮಾನ್ಸ್ಟರ್ ಮೈಂಡ್ ಕ್ರಿಯೇಷನ್ಸ್ ಅಡಿ ರಾಕಿಂಗ್ ಸ್ಟಾರ್ ಯಶ್ ಮತ್ತು ಕೆವಿಎನ್ ಪ್ರೊಡಕ್ಷನ್ಸ್ ಅಡಿ ವೆಂಕಟ್ ಕೆ.ನಾರಾಯಣ್ ಅವರು ಚಿತ್ರಕ್ಕೆ ಹಣ ಹಾಕಿದ್ದಾರೆ. ಬಹುಭಾಷೆಗಳಲ್ಲಿ ಬಿಡುಗಡೆ ಆಗಲಿರುವ ಚಿತ್ರಕ್ಕೆ ಖ್ಯಾತ ನಿರ್ದೇಶಕಿ ಗೀತು ಮೋಹನ್ ದಾಸ್ ಅವರ ನಿರ್ದೇಶನವಿದೆ. ಸಿನಿಮಾ ಮುಂದಿನ ತಿಂಗಳು ಬಿಡುಗಡೆ ಅಗಬೇಕಿತ್ತು. ಆದ್ರೆ ಚಿತ್ರ ವಿಳಂಬವಾಗಿದೆ.

# ಚಾಹಲ್–ಧನಶ್ರೀ ವೈವಾಹಿಕ ಜೀವನ ಅಂತ್ಯ



ಸುಮಾರು ದಿನಗಳಿಂದ ಕೇಳಿಬರುತ್ತಿದ್ದ ಟೀಂ ಇಂಡಿಯಾ ಕ್ರಿಕೆಟಿಗ ಯುಜ್ವೇಂದ್ರ ಚಾಹಲ್ ಹಾಗೂ ಧನಶ್ರೀ ವರ್ಮಾ ಅವರ ವಿಚ್ಛೇದನ ವದಂತಿಗೆ ಕೊನೆಗೂ ತೆರೆ ಬಿದ್ದಿದ್ದು, ದಂಪತಿಗಳಿಬ್ಬರಿಗೆ ಗುರುವಾರ ಅಧಿಕೃತವಾಗಿ ವಿಚ್ಛೇದನ ಸಿಕ್ಕಿದೆ.

ಸುಮಾರು ಎರಡೂವರೆ ವರ್ಷಗಳಿಂದ ಬೇರೆ ಬೇರೆ ವಾಸುತ್ತಿದ್ದ ಈ ಜೋಡಿಯ ವಿಚ್ಛೇದನ ಮೇಲ್ಮನವಿಯನ್ನು ಬಾಂದ್ರಾದ ಕೌಟುಂಬಿಕ ನ್ಯಾಯಾಲಯ ಅಂಗೀಕರಿಸಿದೆ. ಇದರೊಂದಿಗೆ, ಪ್ರೀತಿಸಿ ವೈವಾಹಿಕ ಜೀವಕ್ಕೆ ಕಾಲಿಟ್ಟಿದ್ದ ಈ ಪ್ರಣಯ ಪಕ್ಷಿಗಳ ದಾಂಪತ್ಯ ಜೀವನ 4 ವರ್ಷ 3 ತಿಂಗಳಿಗೆ ಮುರಿದುಬಿದ್ದಿದೆ.

ಮಾರ್ಚ್ 20 ರ ಗುರುವಾರ, ಮುಂಬೈನ ಬಾಂದ್ರಾ ಕುಟುಂಬ ನ್ಯಾಯಾಲಯವು ವಿಚ್ಛೇದನದ ಕುರಿತು ಅಂತಿಮ ತೀರ್ಪು ನೀಡಿದೆ. ಈ ವಿಚಾರಣೆಗೆ ಚಾಹಲ್ ಮತ್ತು ಧನಶ್ರೀ ಪ್ರತ್ಯೇಕವಾಗಿ ಹಾಜರಿದ್ದರು. ಈ ಸಮಯದಲ್ಲಿ, ಇಬ್ಬರ ಪ್ರತಿಕ್ರಿಯೆಯನ್ನು ಪಡೆಯಲು ಮಾಧ್ಯಮದವರ ಗುಂಪು ಜಮಾಯಿಸಿತು. ಆದರೆ ಯಾರೂ ಯಾವುದೇ ಪ್ರತಿಕ್ರಿಯೆ ನೀಡದೆ ಅಲ್ಲಿಂದ ನಿರ್ಗಮಿಸಿದ್ದಾರೆ ಎಂದು ವರದಿಯಾಗಿದೆ.

4 ವರ್ಷಗಳ ಹಿಂದೆ ವಿವಾಹ

ಡಿಸೆಂಬರ್ 24, 2020 ರಂದು ವೈವಾಹಿಕ ಜೀವನಕ್ಕೆ ಕಾಲಿರಿಸಿದ್ದ ಚಾಹಲ್ ಮತ್ತು ಧನಶ್ರೀ ಮೂರು–ನಾಲ್ಕು ತಿಂಗಳ ಹಿಂದೆ ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ಪರಸ್ಪರ ಅನ್‌ಫಾಲೋ ಮಾಡಿದ್ದರು. ಅಂದಿನಿಂದ ಈ ಇಬ್ಬರ ನಡುವಿನ ಸಂಬಂಧದಲ್ಲಿ ಬಿರುಕು ಮೂಡಿದೆ ಎಂಬ ವರದಿಗಳು ಕೇಳಿಬರಲಾರಂಭಿಸಿದ್ದವು. ಆದಾಗ್ಯೂ ಈ ಸಂಬಂಧ ಯಾರೂ ಏನನ್ನು ಹೇಳದಿರುವಾಗ ವಿಚ್ಛೇದನ ವದಂತಿಗೆ ಪುಷ್ಟಿ ಸಿಕ್ಕಿತು. ಕಳೆದ ತಿಂಗಳಷ್ಟೇ ಈ ಇಬ್ಬರೂ ಬಾಂದ್ರಾ ಕೌಟುಂಬಿಕ ನ್ಯಾಯಾಲಯದಲ್ಲಿ ವಿಚ್ಛೇದನಕ್ಕೆ ಮನವಿ ಸಲ್ಲಿಸಿದ್ದರು. ಇಬ್ಬರೂ 6 ತಿಂಗಳ ಕೂಲಿಂಗ್–ಆಫ್ ಅವಧಿಯಿಂದ ವಿನಾಯಿತಿ ನೀಡುವಂತೆ ಕೋರಿದ್ದರು, ಆದರೆ ನ್ಯಾಯಾಲಯ ಅದನ್ನು ತಿರಸ್ಕರಿಸಿತು.

ಇದಾದ ನಂತರ ಇಬ್ಬರೂ ಬಾಂಬೆ ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದ್ದರು. ಈ ಸಂಬಂಧ ಮಾರ್ಚ್ 19 ರ ಬುಧವಾರದಂದು ವಿಚಾರಣೆ ನಡೆಸಿದ್ದ ಹೈಕೋರ್ಟ್, ಮಾರ್ಚ್ 20 ರಂದು ಈ ವಿಷಯವನ್ನು ಇತ್ಯರ್ಥಪಡಿಸುವಂತೆ ಬಾಂದ್ರಾ ಕುಟುಂಬ ನ್ಯಾಯಾಲಯಕ್ಕೆ ಆದೇಶಿಸಿತ್ತು. ಅಲ್ಲದೆ ಕಳೆದ ಎರಡೂವರೆ ವರ್ಷಗಳಿಂದ ಇಬ್ಬರೂ ಪರಸ್ಪರ ಪ್ರತ್ಯೇಕವಾಗಿ ವಾಸಿಸುತ್ತಿದ್ದೇವೆ ಎಂದು ಹೇಳಿದ್ದರಿಂದ ಹೈಕೋರ್ಟ್ ಅವರಿಬ್ಬರಿಗೂ ಕೂಲಿಂಗ್–ಆಫ್‌ನಿಂದ ವಿನಾಯಿತಿ ನೀಡಿತ್ತು. ಈ ವಿಚ್ಛೇದನಕ್ಕೆ ಪ್ರತಿಯಾಗಿ, ಚಹಾಲ್ ಧನಶ್ರೀಗೆ 4.75 ಕೋಟಿ ರೂಪಾಯಿಗಳನ್ನು ಜೀವನಾಂಶವಾಗಿ ನೀಡುವ ಒಪ್ಪಂದವೂ ಇತ್ತು. ಅದರಲ್ಲಿ 50 ಪ್ರತಿಶತದಷ್ಟು ಹಣವನ್ನು ಚಾಹಲ್ ಈಗಾಗಲೇ ಧನಶ್ರೀಗೆ ನೀಡಿದ್ದು, ಉಳಿದ ಹಣವನ್ನು ವಿಚ್ಛೇದನದ ಬಳಿಕ ನೀಡುವುದಾಗಿ ಒಡಂಬಡಿಕೆ



# ಗುಡ್ ನ್ಯೂಸ್ ಕೊಟ್ಟ ಸಮಂತಾ

ನಟಿ ಸಮಂತಾ ಅವರು ಇತ್ತೀಚೆಗೆ ಸಾಕಷ್ಟು ಏಳು ಬೀಳುಗಳನ್ನು ಕಂಡಿದ್ದಾರೆ. ಅವರು ವಿಚ್ಛೇದನದ ಬಳಿಕ ಅನಾರೋಗ್ಯ ಸಮಸ್ಯೆ ಎದುರಿಸಿದರು. ಈ ಕಾರಣದಿಂದಲೇ ಅವರಿಗೆ ಸಿನಿಮಾ ಬಗ್ಗೆ ಹೆಚ್ಚು ಗಮನ ಹರಿಸಲು ಸಾಧ್ಯವಾಗಲೇ ಇಲ್ಲ.

ಸಮಂತಾ ಅವರು 'ಟ್ರಲಾಲಾ ಮೂವಿಂಗ್ ಪಿಕ್ಚರ್' ಹೆಸರಿನ ನಿರ್ಮಾಣ ಸಂಸ್ಥೆ ಆರಂಭಿಸಿದ್ದು ಗೊತ್ತೇ ಇದೆ. ಇದರ ಅಡಿ ಸಿದ್ಧವಾದ ಸಿನಿಮಾ ರಿಲೀಸ್‌ಗೆ ರೆಡಿ ಆಗಿದೆ. ಬೇಸಿಗೆ ವೇಳೆಗೆ ಚಿತ್ರ ರಿಲೀಸ್ ಆಗುವ ಸಾಧ್ಯತೆ ಇದೆ.

ಸಮಂತಾ ಅವರು 'ಟ್ರಲಾಲಾ ಮೂವಿಂಗ್ ಪಿಕ್ಚರ್ಸ್' ಹೆಸರಿನ ನಿರ್ಮಾಣ ಸಂಸ್ಥೆ ಆರಂಭಿಸಿದ್ದಾರೆ. ಈ ಬ್ಯಾನರ್ ಅಡಿಯಲ್ಲಿ 'ಮಾ ಉಂಟಿ ಬಂಗಾರಮ್' ಹೆಸರಿನ ಸಿನಿಮಾ ಘೋಷಣೆ ಮಾಡಿದ್ದರು. ಈ ಚಿತ್ರದಲ್ಲಿ ಸಮಂತಾ ಅವರೇ ನಟಿಸಲಿದ್ದಾರೆ ಎನ್ನಲಾಗಿದೆ. ಈ ಚಿತ್ರದ ನಿರ್ದೇಶಕರು ಹಾಗೂ ಇತರ ಪಾತ್ರವರ್ಗದ ಬಗ್ಗೆ ಯಾವುದೇ ಮಾಹಿತಿ ರಿವೀಲ್ ಆಗಿಲ್ಲ. ಈ ಚಿತ್ರದ ಬಗ್ಗೆ ಹೆಚ್ಚು ಮಾಹಿತಿ ಇಲ್ಲ. ಈಗ ಇದೇ ನಿರ್ಮಾಣ ಸಂಸ್ಥೆ ಅಡಿ ಮೂಡಿ ಬಂದ ಮತ್ತೊಂದು ಸಿನಿಮಾ ಬಿಡುಗಡೆ ಕಾಣುತ್ತಿದೆ.

ಹೌದು, ವಸಂತ್ ಮರಿನ್‌ಕಂಡಿ ಮತ್ತು ಪ್ರವೀಣ್ ಒಟ್ಟಾಗಿ ನಿರ್ದೇಶಿಸಿದ 'ಶುಭಂ' ಸಿನಿಮಾ ರೆಡಿ ಆಗಿದೆ. ಈ ಮೊದಲು ಇಬ್ಬರೂ 'ಸಿನಿಮಾ ಬಂಡಿ' ಹೆಸರಿನ ಚಿತ್ರ ಮಾಡಿದ್ದರು. ಈಗ ಹೊಸ ತಂಡದೊಂದಿಗೆ ಮಾಡಿದ 'ಶುಭಂ' ಸಿನಿಮಾ ಶೂಟಿಂಗ್ ಪೂರ್ಣಗೊಳಿಸಿಕೊಂಡಿದೆ.

ಸಮಂತಾ ಅವರು ಈ ಚಿತ್ರದ ನಿರ್ಮಾಪಕರಲ್ಲಿ ಒಬ್ಬರು. ಈ ಸಿನಿಮಾ ಮೇ ವೇಳೆಗೆ ರಿಲೀಸ್ ಆಗುವ ಸಾಧ್ಯತೆ ಇದೆ. ಸಿನಿಮಾದ ಟ್ರೇಲರ್ ರಿಲೀಸ್ ಆದ ಬಳಿಕವೇ ಈ ಚಿತ್ರ ಯಾವ ರೀತಿಯಲ್ಲಿ ಮೂಡಿ ಬಂದಿದೆ ಎಂಬ ಮಾಹಿತಿ ಲಭ್ಯವಾಗಲಿದೆ.

ಸಮಂತಾ ಅವರು ಸಾಲು ಸಾಲು ವೆಬ್ ಸೀರಿಸ್‌ಗಳನ್ನು ಮಾಡುತ್ತಿದ್ದಾರೆ. ಅವರು ಈ ಮೊದಲು 'ಫ್ಯಾಮಿಲಿಮ್ಯಾನ್ 2' ಸೀರಿಸ್‌ನಲ್ಲಿ ಕಾಣಿಸಿಕೊಂಡಿದ್ದರು. ಆ ಬಳಿಕ 'ಸಿಟಾಡೆಲ್: ಹನಿ ಬನಿ' ಸೀರಿಸ್ ಮಾಡಿದರು. ಈಗ ಅವರು ಮತ್ತೊಂದು ವೆಬ್ ಸೀರಿಸ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಇದರ ಶೂಟ್ ನಡೆಯುತ್ತಿದೆ.

# ಬೌಲರ್‌ಗಳ ಬಹು ವರ್ಷಗಳ ಬೇಡಿಕೆಯನ್ನು ಈಡೇರಿಸಿದ ಬಿಸಿಸಿಐ

2025ರ ಐಪಿಎಲ್ ಆರಂಭಕ್ಕೆ ಇನ್ನೇರಡು ದಿನಗಳು ಬಾಕಿ ಉಳಿದಿರುವಾಗ ಬೌಲರ್‌ಗಳು ಖುಷಿ ಪಡುವ ನಿಯಮವೊಂದನ್ನು ಬಿಸಿಸಿಐ ಬದಲಿಸುವ ಕೆಲಸ ಮಾಡಿದೆ. ಕೊರೊನಾ ಸಮಯದಲ್ಲಿ ತಂದಿದ್ದ ನಿಯಮವನ್ನು ರದ್ದುಗೊಳಿಸುವ ಮೂಲಕ ಬೌಲರ್‌ಗಳ ಪರ ಬ್ಯಾಟ್ ಬೀಸಿರುವ ಬಿಸಿಸಿಐ, ಇನ್ನು ಮುಂದೆ ಬೌಲರ್‌ಗಳು ಚೆಂಡಿನ ಮೇಲೆ ಸಲೈವ ಬಳಕೆಗೆ ಅನುಮತಿ ನೀಡಿದೆ.

ಮೇಲೆ ಹೇಳಿದಂತೆ 2020 ರಲ್ಲಿ ಕೊರೊನಾ ವೈರಸ್ ಸೋಂಕಿನ ಆರ್ಭಟ ಹೆಚ್ಚಿದ್ದ ಕಾರಣ ಬೌಲಿಂಗ್ ವೇಳೆ ಚೆಂಡಿನ ಮೇಲೆ ಎಂಜಲು ಹಚ್ಚುವುದನ್ನು ಐಸಿಸಿ ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ ನಿಷೇದಿಸಿತ್ತು. ಆ ಬಳಿಕ ಈ ನಿಯಮವನ್ನು ಐಪಿಎಲ್‌ನಲ್ಲೂ ಜಾರಿಗೆ ತಂದಿದ್ದ ಬಿಸಿಸಿಐ, ಬೌಲರ್‌ಗಳು ಚೆಂಡಿನ ಮೇಲೆ ಉಗುಳು ಹಚ್ಚುವುದನ್ನು ರದ್ದುಗೊಳಿಸಿತ್ತು.

ವಾಸ್ತವವಾಗಿ ಬೌಲರ್‌ಗಳು ಚೆಂಡಿನ ಹೊಳಪನ್ನು ಹೆಚ್ಚಿಸುವ ಸಲುವಾಗಿ ತಾವು ಬೌಲಿಂಗ್ ಮಾಡುವ ವೇಳೆ ತಮ್ಮ ಎಂಜಲನ್ನು ಚೆಂಡಿನ ಮೇಲೆ ಲೇಪನ ಮಾಡುತ್ತಿದ್ದರು.

ಎಂಜಲು ಮಾತ್ರವಲ್ಲದೆ ತಮ್ಮ ಬೆವರನ್ನು ಇದಕ್ಕೆ ಬಳಸುತ್ತಿದ್ದರು. ಆದರೆ ಕೊರೊನಾ ಸಮಯದಲ್ಲಿ ಎಂಜಲು ಬಳಸುವುದಕ್ಕೆ ನಿಷೇದ ಹೇರಿದ್ದ ಬಿಸಿಸಿಐ, ಬೆವರು ಬಳಸುವುದಕ್ಕ ಅನುಮತಿ ನೀಡಿತ್ತು.

ಬಿಸಿಸಿಐನ ಈ ನಿಷೇದದಿಂದಾಗಿ ಬೌಲರ್‌ಗಳು ಸಾಕಷ್ಟು ಕಷ್ಟಪಡಬೇಕಾಗಿತ್ತು. ಹೀಗಾಗಿ ಕೊರೊನಾ ಹಾವಳಿ ಕಡಿಮೆಯಾದ ಬಳಿಕ ಹಲವು ಬೌಲರ್‌ಗಳು ಈ ನಿಯಮವನ್ನು ತೆಗೆದು ಹಾಕುವಂತೆ ಬಿಸಿಸಿಐ ಬಳಿ ಬೇಡಿಕೆ ಇಟ್ಟಿದ್ದರು. ಇದೀಗ ಬೌಲರ್‌ಗಳ ಬಹು ದಿನಗಳ ಬೇಡಿಕೆಯನ್ನು ಈಡೇರಿಸಿರುವ ಬಿಸಿಸಿಐ, ಚೆಂಡಿನ ಮೇಲೆ ಎಂಜಲನ್ನು ಲೇಪನ ಮಾಡುವುದಕ್ಕೆ ಅನುಮತಿ ನೀಡಿದೆ.

ವಾಸ್ತವವಾಗಿ ಇಂದು ಮುಂಬೈನ ಕೇಂದ್ರ ಕಛೇರಿಯಲ್ಲಿ ಬಿಸಿಸಿಐ, ಎಲ್ಲಾ ಐಪಿಎಲ್ ತಂಡಗಳ ನಾಯಕರ ಸಭೆ ಕರೆದಿದೆ. ಈ ಸಭೆಯಲ್ಲಿ ಮಂಡಳಿಯು ಎಲ್ಲಾ ನಾಯಕರಿಗೆ ಈ ನಿರ್ಧಾರದ ಬಗ್ಗೆ ತಿಳಿಸಿದೆ.

ದರರ್ಥ ಮಾರ್ಚ್ 22 ರಂದು ಕೋಲ್ಕತ್ತಾ ನೈಟ್ ರೈಡರ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ನಡುವಿನ ಪಂದ್ಯದಲ್ಲಿ ಬೌಲರ್‌ಗಳು ಚೆಂಡನ್ನು ಹೊಳಪು ಮಾಡಲು ಎಂಜಲು ಬಳಸುವುದನ್ನು ನಾವು ನೋಡಬಹುದಾಗಿದೆ.

ಆದಾಗ್ಯೂ, ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಈ ನಿಷೇಧ ಹಾಗೆಯೇ ಮುಂದುವರೆಯಲಿದೆ. ಕೊರೊನಾ ಸಾಂಕ್ರಾಮಿಕ ರೋಗ ಮುಗಿದ ನಂತರ, ಐಸಿಸಿ ಇದನ್ನು ಶಾಶ್ವತವಾಗಿ ಜಾರಿಗೆ ತಂದಿತು.

ಅಂತಹ ಪರಿಸ್ಥಿತಿಯಲ್ಲಿ, ಆಟಗಾರರು ತಮ್ಮ ಬೆವರನ್ನು ಬಳಸಿ ಚೆಂಡನ್ನು ಶೈನಿಂಗ್ ಮಾಡಬಹುದಾಗಿದೆ. ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲೂ ಈ ನಿಷೇಧವನ್ನು ತೆಗೆದುಹಾಕುವಂತೆ ಬೇಡಿಕೆ ಇದೆಯಾದರೂ ಐಸಿಸಿ ಮಾತ್ರ ಈ ನಿಯಮವನ್ನು ಬದಲಿಸುವ ಮನಸು ಮಾಡಿಲ್ಲ.

Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878